ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 271
25-4-2025 ಶುಕ್ರವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 271

## ಪಹಲ್ಗಾಮ್‌ನಲ್ಲಿ ದಾಳಿಯಲ್ಲಿ ಮಡಿದವರಿಗೆ ಜಿಲ್ಲಾ ಯುವ ಕಾಂಗ್ರೆಸ್‌ನಿಂದ ಶ್ರದ್ಧಾಂಜಲಿ



**ದಾವಣಗೆರೆ:** ಇಂದು ದಾವಣಗೆರೆ ಜಿಲ್ಲಾ ಯುವ ಕಾಂಗ್ರೆಸ್ ವತಿಯಿಂದ ದಾವಣಗೆರೆ ನಗರದ ದಿ॥ ಎಸ್.ನಿಜಲಿಂಗಪ್ಪ ಬಡಾವಣೆಯ ಅಮರ್ ಜವಾನ್ ಪಾರ್ಕ್ ಬಳಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ನಿನ್ನೆ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಂನಲ್ಲಿ ಭಯೋತ್ಪಾದಕರು ನಿರ್ದೋಷಿ ಪ್ರವಾಸಿಗರ ಮೇಲೆ ನಡೆಸಿದ ಹೀನಕೃತ್ಯ ಖಂಡಿಸಿರುವ ದಾವಣಗೆರೆ ಜಿಲ್ಲಾ ಯುವ ಕಾಂಗ್ರೆಸ್ ಇಂದು ದಾಳಿಯಲ್ಲಿ ಮಡಿದವರಿಗೆ ಶ್ರದ್ಧಾಂಜಲಿ ಸಲ್ಲಿಸಿ ಭಯೋತ್ಪಾದಕರ ದಾಳಿಗೆ ಕೇಂದ್ರ ಸರ್ಕಾರದ ಗುಪ್ತಚರ ಇಲಾಖೆ ಮತ್ತು ಆಡಳಿತ ವೈಫಲ್ಯ ಹಿಡಿದ ಕೈಗನ್ನಡಿ ಎಂದು ಆಕ್ರೋಶ ವ್ಯಕ್ತಪಡಿಸಿತು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ.ಶೆಟ್ಟಿ, ಎ.ನಾಗರಾಜ್, ಎಸ್.ಎಲ್.ಆನಂದಪ್ಪ, ಮೈನುದ್ದೀನ್, ಮಲ್ಲಿಕಾರ್ಜುನ್ ಜವಳಿ, ಸೋಗಿ ಶಾಂತಕುಮಾರ್, ಯುವ ಕಾಂಗ್ರೆಸ್ ವರುಣ್ ನಾಯಕ್, ಅಲಿ ರೆಹಮತ್, ಇದು ರಾಷ್ಟ್ರದ ಏಕತೆ ಮತ್ತು ಅಖಂಡತೆಯ ಮೇಲೆ ನೇರದಾಳಿ ಆಗಿದ್ದು, ಅತ್ಯಂತ ಶೋಕಾಜನಕವಾಗಿದ್ದು, ನಾಗರಿಕರನ್ನು ಗುರಿಯಾಗಿಸುವ ಈ ಕೃತ್ಯವನ್ನು ಎತ್ತಿ ಹಿಡಿಯುವುದು ಮಾನವೀಯತೆಯ ವಿರುದ್ಧದ ನಡೆ ಎಂದರು. ಈ ದಾಳಿಯಲ್ಲಿ ಕರ್ನಾಟಕದ ಪ್ರವಾಸಿಗರಾದ ಮೂವರನ್ನು ಕಳೆದುಕೊಂಡಿದ್ದು, ಮೃತಪಟ್ಟ ಕುಟುಂಬದವರಿಗೆ ಸಂತಾಪ ಸೂಚಿಸಿ ಕಾಂಗ್ರೆಸ್ ಪಕ್ಷವು ಯಾವಾಗಲೂ ಭಯೋತ್ಪಾದನೆ ಮತ್ತು ವಿಭಜನೆಯ ವಿರುದ್ಧ ಹೋರಾಡುತ್ತಾ ಬಂದಿದೆ. ಈ ಹೋರಾಟದಲ್ಲಿ ನಮ್ಮ ನಾಯಕರು ಪ್ರಾಣತ್ಯಾಗ ಮಾಡಿದ ಇತಿಹಾಸವೂ ಇದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಡೋಲಿ ಚಂದ್ರು, ಗೋಪಿನಾಯ್ಕ, ಹರೀಶ್, ರಘು, ಶ್ರೀನಿವಾಸ್, ಪ್ರವೀಣ್, ಮುಜಾಹಿದ್, ನವೀನ್ ನಲ್ವಡಿ, ಬಾಷಾ, ಮಹಿಳಾ ಕಾಂಗ್ರೆಸ್‌ನ ಗೀತಾ ಚಂದ್ರಶೇಖರ್, ಸಲ್ಮಾಬಾನು, ಸುನಂದಮ್ಮ, ಸುವರ್ಣಮ್ಮ, ಮಂಗಳಮ್ಮ, ಮಂಜಮ್ಮ, ರಾಜೇಶ್ವರಿ, ದ್ರಾಕ್ಷಾಯಣಮ್ಮ, ರಾಧಾಬಾಯಿ, ರಾಜೇಶ್ವರಿ ನಿಖಿತ್‌ಶೆಟ್ಟಿ ಮತ್ತಿತರರಿದ್ದರು.

## ಶಿವಮೊಗ್ಗ : ಸರ್ಕಾರಿ ಗೌರವದೊಂದಿಗೆ ನೆರವೇರಿದ ಮಂಜುನಾಥರಾವ್ ಅಂತ್ಯಕ್ರಿಯೆ



**ಶಿವಮೊಗ್ಗ:** ಕಾಶ್ಮೀರದ ಪೆಹಲ್ಕಾಮ್ ನಲ್ಲಿ ಉಗ್ರರ ಗುಂಡಿಗೆ ಬಲಿಯಾದ ಶಿವಮೊಗ್ಗದ ಮಂಜುನಾಥ ರಾವ್ ಅವ ಪಾರ್ಥಿವ ಶರೀರದ ಅಂತ್ಯಕ್ರಿಯೆ ಗುರುವಾರ ಮಧ್ಯಾಹ್ನ 3.30ಕ್ಕೆ ಇಲ್ಲಿನ ತುಂಗಾ ನದಿ ದಂಡೆಯಲ್ಲಿರುವ ರೋಟರಿ ಚಿತಾಗಾರದಲ್ಲಿ ನೆರವೇರಿತು.

ಇದಕ್ಕೂ ಮುನ್ನ ಜಿಲ್ಲಾ ಉಸ್ತುವಾರಿ ಸಚಿವ ಮಧು ಬಂಗಾರಪ್ಪ ನೇತೃತ್ವದಲ್ಲಿ ಪಾರ್ಥಿವ ಶರೀರಕ್ಕೆ ಸಕಲ ಸರ್ಕಾರಿ ಗೌರವ ಸಲ್ಲಿಸಲಾಯಿತು. ಪೊಲೀಸರು ಮೂರು ಸುತ್ತು ಕುಶಾಲ ತೋಪು ಸಿಡಿಸಿ ಗೌರವ ವಂದನೆ ಸಲ್ಲಿಸಿದರು. ಈ ವೇಳೆ

ಮಂಜುನಾಥ ರಾವ್ ಪತ್ನಿ ಪಲ್ಲವಿ ಹಾಗೂ ಪುಷ್ಪ ಅಭಿಜಯಾ ಅವರಿಗೆ ಸಾಂತ್ವನ ಹೇಳಿದ ಮಧು ಬಂಗಾರಪ್ಪ ಸರ್ಕಾರದ ವತಿಯಿಂದ ಕುಟುಂಬಕ್ಕೆ ಅಗತ್ಯ ನೆರವಿನ ಭರವಸೆ ನೀಡಿದರು.

ನಂತರ ಬ್ರಾಹ್ಮಣ ಸಂಪ್ರದಾಯದಂತೆ ಅಂತ್ಯಕ್ರಿಯೆ ವಿಧಿವಿಧಾನಗಳು ನೆರವೇರಿದವು. ಈ ಸಂದರ್ಭದಲ್ಲಿ ಕುಟುಂಬಸ್ಥರ ಗೋಳು ಮುಗಿಲು ಮುಟ್ಟಿತ್ತು.

ಅಂತ್ಯಕ್ರಿಯೆ ವೇಳೆ ಶಿವಮೊಗ್ಗ ಶಾಸಕ ಎಸ್.ಎನ್.ಚನ್ನಬಸಪ್ಪ, ವಿಧಾನ ಪರಿಷತ್ ಸದಸ್ಯರಾದ ಡಿ.ಎಸ್.ಅರುಣ್, ಡಾ. ಧನಂಜಯ ಸರ್ಜಿ, ಬಲ್ಕಿಶ್ ಬಾನು, ಪೂರ್ವ ವಲಯ ಐಜಿಪಿ ಬಿ.ಆರ್. ರವಿಕಾಂತೇಗೌಡ, ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಎಸ್ಪಿ ಜಿ.ಕೆ.ಮಿಥುನ್ ಕುಮಾರ್ ಹಾಜರಿದ್ದರು.

## ಬಸವ ತತ್ವ ಪಾಲನೆಯಿಂದ ಸಮ ಸಮಾಜ ನಿರ್ಮಾಣ: ಬಸವಪ್ರಭು ಸ್ವಾಮೀಜಿ



**ದಾವಣಗೆರೆ:** ಬಸವ ತತ್ವಗಳ ಪಾಲನೆಯಿಂದ ಸಮ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯ. ಕಾಯಕ, ದಾಸೋಹ, ಬಸವ ತತ್ವ ಪಾಲನೆಯಿಂದ ದೇಶದ ಉದ್ಧಾರ ಸಾಧ್ಯ. ಇಂತಹ ತತ್ವಗಳನ್ನು ಪ್ರತಿಯೊಬ್ಬರೂ ಕೂಡಾ ಆಚರಣೆ ಮಾಡೋಣ. ಇಂತಹ ತತ್ವಗಳನ್ನು ಮನೆ ಮನಗಳಿಗೆ ಮುಟ್ಟಿಸುವ ನಿಟ್ಟಿನಲ್ಲಿ ಬಸವ ಪ್ರಭಾತ್ ಪೇರಿಯನ್ನು ಆಚರಿಸಿಕೊಂಡು ಬರಲಾಗುತ್ತಿದೆ ಎಂದು ವಿರಕ್ತಮಠದ ಡಾ. ಬಸವಪ್ರಭು ಸ್ವಾಮೀಜಿ ಹೇಳಿದರು.

ಗುರುವಾರ ನಗರದ ವಿರಕ್ತಮಠದಲ್ಲಿ ಬಸವ ಕೇಂದ್ರ, ವಿರಕ್ತಮಠ, ಶಿವಯೋಗಾಶ್ರಮ ಟ್ರಸ್ಟ್, ಲಿಂಗಾಯತ(ವೀರಶೈವ) ತರುಣ ಸಂಘದ ಸಹಯೋಗದಲ್ಲಿ 113ನೇ ವರ್ಷದ ಬಸವ ಜಯಂತ್ಯೋತ್ಸವದ ಅಂಗವಾಗಿ ನಡೆದ 109ನೇ ವರ್ಷದ ಬಸವ ಪ್ರಭಾತ್ ಪೇರಿಯ ಮೊದಲ ದಿನದ ಜನಜಾಗೃತಿ ಪಾದಯಾತ್ರೆಯ ಸಾನಿಧ್ಯವಹಿಸಿ ಅವರು ಆಶೀರ್ವಚನ ನೀಡಿದರು.

ಬಸವ ಜಯಂತಿ ಆಚರಣೆ 1913ರಲ್ಲಿ ಮೊಟ್ಟಮೊದಲು ಪ್ರಾರಂಭವಾಗಿದ್ದು ದಾವಣಗೆರೆಯ ವಿರಕ್ತಮಠದಿಂದ. ಈ ಬಸವ ಪ್ರಭಾತ್ ಪೇರಿ ಆರಂಭವಾಗಲು ಕಾರಣ ಹರ್ಡೆಕರ್ ಮಂಜಪ್ಪನವರು, ಜಯದೇವ ಜಗದ್ಗುರುಗಳು, ಮೃತ್ಯುಂಜಯ ಅಪ್ಪಗಳು.

ಮಹಾರಾಷ್ಟ್ರದಲ್ಲಿ ಬಾಲಗಂಗಾಧರ ತಿಲಕ್ ಅವರು ಗಣೇಶನ ಹಬ್ಬ ಆಚರಣೆ ಮಾಡುವ ಮೂಲಕ ಸಾವಿರಾರು ಜನರನ್ನು ಸೇರಿಸಿ ಸ್ವಾತಂತ್ರ್ಯ ಚಳುವಳಿಗೆ ಜನರನ್ನು ಸಂಘಟನೆ ಮಾಡಿದರು. ಅದೇ ರೀತಿ 1917ರಲ್ಲಿ ಕರ್ನಾಟಕ ಗಾಂಧಿ ಎಂದು ಹೆಸರಾದ ಹರ್ಡೇಕರ್ ಮಂಜಪ್ಪನವರು ದಾವಣಗೆರೆಯಲ್ಲಿ ಬಸವ ಪ್ರಭಾತ್ ಪೇರಿಯನ್ನು ಆರಂಭಿಸಿದರು ಎಂದು ಹಿನ್ನೆಲೆ ತಿಳಿಸಿದರು.

ಪ್ರಕೃತಿ ಪ್ರಿಯರಿಗೆ ಸ್ವರ್ಗ ಎಂದರೆ ಅದು ಕಾಶ್ಮೀರ. ಇಂತಹ ಸುಂದರ ಸ್ಥಳದ ಪ್ರವಾಸಕ್ಕೆ ತೆರಳಿದ ಸಂದರ್ಭದಲ್ಲಿ ನಮ್ಮ ಜನರು, ನಮ್ಮ ಕರ್ನಾಟಕದ ಜನರನ್ನು ಪಹಲ್ಗಾಮ್ ನಲ್ಲಿ ಭಯೋತ್ಪಾಧಕರು ಪ್ರವಾಸಿಗರನ್ನು ಕೊಲೆ ಮಾಡಿದ್ದಾರೆ. ಅಂತಹ ಕೃತ್ಯವನ್ನು ನಾವೆಲ್ಲರೂ ಖಂಡನೆ ಮಾಡಿದ್ದೇವೆ ಎಂದರು.

ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ ಸದಸ್ಯರಾದ ವಾಣಿ ಬಕ್ಕೇಶ್ ಪ್ರಭಾತ್ ಪೇರಿ ಉದ್ಘಾಟಿಸಿ ಮಾತನಾಡಿ, ಬಸವ ತತ್ವಗಳು ಎಲ್ಲ ವರ್ಗದ ಜನತೆಗೆ ಅವಶ್ಯಕವಾಗಿರುವುದರಿಂದ ಈ ಬಸವ ಪ್ರಭಾತ್ ಪೇರಿ ಹಳೇ ದಾವಣಗೆರೆ ಭಾಗದ ಜೊತೆಗೆ ದಾವಣಗೆರೆಯ ವಿವಿಧ ಬಡಾವಣೆಗಳಲ್ಲಿಯೂ ಮುಂದುವರೆಯುವಂತೆ ಮಾಡಲಿ ಎಂದರು.

ಬಸವಣ್ಣನವರು ಜ್ಞಾನದ ಜ್ಯೋತಿಯನ್ನು ಬೆಳಗಿದ್ದಾರೆ. ಸಮಾನತೆಯ ಹರಿಕಾರರಾಗಿ ಸುಂದರ ಸಮಾಜವನ್ನು ಕಟ್ಟುವ ಕನಸನ್ನು ಕಂಡವರು. ಬಸವಣ್ಣನವರ ತತ್ವ ಆದರ್ಶಗಳು, ಪ್ರತಿಯೊಂದು ವಚನಗಳು ಇಂದಿಗೂ ಆದರ್ಶವಾಗಿವೆ ಎಂದು ಹೇಳಿದರು.

ಬಿಜೆಪಿ ಹಿರಿಯ ಮುಖಂಡರಾದ ಯಶವಂತರಾವ್ ಜಾಧವ್, ಶ್ರೀನಿವಾಸ ದಾಸಕರಿಯಪ್ಪ, ಮಾಜಿ ಮೇಯರ್ ಸೋಗಿ ಶಾಂತಕುಮಾರ, ಶಿವನಗೌಡ ಪಾಟೀಲ್, ಅಭಿ ಕಾಟನ್ ಮಾಲೀಕ ಬಕ್ಕೇಶ್, ವೀರಶೈವ ತರುಣ ಸಂಘದ ಕಣಕುಪ್ಪಿ ಮುರುಗೇಶಪ್ಪ, ಹಾಸಬಾವಿ ಕರಿಬಸಪ್ಪ, ಲಂಬಿ ಮುರುಗೇಶ, ಕೆ.ಸಿ. ಉಮೇಶ, ಚನ್ನಬಸವ ಶೀಲವಂತ್, ಶಶಿಧರ ಬಸಾಪುರ, ಆವರಗೆರೆ ರುದ್ರಮುನಿ, ಚೇತನ ಶಿವಕುಮಾರ್, ಪವಿತ್ರಾ, ವೀಣಾ ಮಂಜುನಾಥ, ಮಹಾದೇವಮ್ಮ, ಸುಜಾತ, ಮಹಾಲಿಂಗೇಶ್ವರ, ಯೋಗ ಒಕ್ಕೂಟದ ಜಿ.ಮಹಾಂತೇಶ, ಪ್ರಕಾಶ ಉತ್ತಂಗಿ, ಸಂಗಪ್ಪ, ಕೆ.ಕರಿಬಸಪ್ಪ, ರೋಷನ್, ಬಿರಾದಾರ್, ಶರಣಬಸವ, ಕೀರ್ತಿ, ಕುಮಾರಸ್ವಾಮಿ, ಕೊಟ್ರೇಶ್, ಕುಂಟೋಜಿ ಚನ್ನಪ್ಪ, ಪ್ರೊ.ಮಲ್ಲಿಕಾರ್ಜುನ್, ಶ್ರೀಮಠದ ಭಕ್ತರು, ವಿರಕ್ತಮಠ, ಬಕ್ಕೇಶ್ವರ ಶಾಲೆ ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿದ್ದರು. ಬಸವ ಕಲಾಲೋಕದ ತಂಡದವರು ವಚನ ಭಜನೆ ನಡೆಸಿಕೊಟ್ಟರು.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

**ದಾವಣಗೆರೆ:** ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ಇವರು ಏಪ್ರಿಲ್ 28 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಅಂದು ಬೆಳಿಗ್ಗೆ 11 ಗಂಟೆಗೆ ಹರಿಹರದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಸಮೀಪದ ಗುರುಭವನದಲ್ಲಿ ನಡೆಯಲಿರುವ ಡಾ.ಬಿ.ಆರ್.ಅಂಬೇಡ್ಕರ್ ರವರ 134ನೇ ಜಯಂತಿ ನಿಮಿತ್ತ 134 ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ಕೂಡಲಸಂಗಮಕ್ಕೆ ಪ್ರಯಾಣಿಸುವರು.

## ಡಿಪ್ಲೋಮಾ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕ ಪಾವತಿಸಲು ಕಾಲಾವಕಾಶ

**ದಾವಣಗೆರೆ :** ಸಿ-3, ಸಿ-9, ಸಿ-15 ಪಠ್ಯಕ್ರಮದಲ್ಲಿ ಪ್ರಥಮ, ತೃತೀಯ ಸೆಮಿಸ್ಟರ್‌ಗೆ ಪ್ರವೇಶ ಪಡೆದು 6, 9 ವರ್ಷಗಳ ಕಲಾವಧಿ ಮೀರಿದ ವಿದ್ಯಾರ್ಥಿಗಳಿಗೆ ಮಾತ್ರ ಏಪ್ರಿಲ್, ಮೇ ಪರೀಕ್ಷೆಗಳಿಗೆ ಹಾಜರಾಗಬಹುದು.

ಈ ವಿದ್ಯಾರ್ಥಿಗಳ ದಂಡ ರಹಿತವಾಗಿ ನಿಗದಿತ ಪರೀಕ್ಷಾ ಶುಲ್ಕವನ್ನು ಏಪ್ರಿಲ್ 26 ರೊಳಗಾಗಿ ಪಾವತಿಸಿ ನೋಂದಾಯಿಸಿಕೊಳ್ಳಬೇಕೆಂದು ಸರ್ಕಾರಿ ಡಿ.ಆರ್.ಆರ್ ಪಾಲಿಟೆಕ್ನಿಕ್ ಪ್ರಚಾರ್ಯರರು ತಿಳಿಸಿದ್ದಾರೆ.

## ಜಿಲ್ಲೆಯಲ್ಲಿನ 6 ಮಕ್ಕಳ ಪಾಲನಾ ಸಂಸ್ಥೆಗಳ ಪರವಾನಗಿ ರದ್ದು

**ಶಿವಮೊಗ್ಗ :** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಗಳ ಅದೇಶದನ್ವಯ ಶಿವಮೊಗ್ಗ ಜಿಲ್ಲೆಯಲ್ಲಿ ಬಾಲನ್ಯಾಯ ಕಾಯ್ದೆ,2015ರ ಸೆಕ್ಷನ್ 41 (1) ರಡಿ ನೋಂದಾಯಿಸಲ್ಪಟ್ಟಿರುವ ಆಶಾ ಕಿರಣ ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆ, ವಿದ್ಯಾನಗರ, ಶಿವಮೊಗ್ಗ, ತರಂಗ ಕಿವುಡು ಮಕ್ಕಳ ಹಿರಿಯ ವಸತಿ ಶಾಲೆ, ಬಸವೇಶ್ವರನಗರ, ಶಿವಮೊಗ್ಗ, ತರಂಗ ಕಿವುಡು ಮಕ್ಕಳ ವಸತಿ ನಿಯ, ನ್ಯೂಟೌನ್, ಭದ್ರಾವತಿ, ಮದರ್ ತೆರೆಸಾ ರೆಸಿಡೆನ್ಸಿಯಲ್ ಸ್ಕೂಲ್ ಫಾರ್ ಹಿಯರಿಂಗ್ ಇಂಪರ್ಡ್, ಭದ್ರಾವತಿ, ಮಾತೃಛಾಯ ಸರ್ವಧರ್ಮ ಸಂಸ್ಥೆ, ಸ್ವಾಮಿ ವಿವೇಕಾನಂದ ಬಡಾವಣೆ, ಗೋಪಾಳ, ಶಿವಮೊಗ್ಗ ಮತ್ತು ಸುಜ್ಞಾನ ಸಂಸ್ಥೆ, ಶಾಂತಿನಗರ, ಶಿಕಾರಿಪುರ ತಾಲೂಕು ಈ 06 ಮಕ್ಕಳ ಪಾಲನಾ ಸಂಸ್ಥೆಗಳನ್ನು ಪಾಲನೆ, ಪೋಷಣೆ ಮತ್ತು ರಕ್ಷಣೆ ಅಗತ್ಯವಿರುವ ಮಕ್ಕಳಿಲ್ಲದ ಕಾರಣ ಬಾಲನ್ಯಾಯ ಕಾಯ್ದೆ, 2015 ಸೆಕ್ಷನ್ 41(7)ರನ್ವಯ ಪ್ರದತ್ತವಾದ ಅಧಿಕಾರ ಚಲಾಯಿಸಿ ಸರ್ಕಾರಿ ಆದೇಶದನ್ವಯ ದಿ: 17/03/2025 ರಿಂದ ಅನ್ವಯವಾಗುವಂತೆ ರದ್ದುಗೊಳಿಸಲಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಶ್ರದ್ಧಾಂಜಲಿ, ಆಕ್ರೋಶ, ಶಪಥ; ಬಿಹಾರದ ವೇದಿಕೆಯಿಂದ 'ಪಹಲ್ಗಾಮ್ ಪೈಗಾಮ್' ಮೊಳಗಿಸಿದ ಪ್ರಧಾನಿ ಮೋದಿ!

**ಮಧುಬನಿ:** "ಭಾರತ ಈಗ ದು:ಖದಲ್ಲಿದೆ. ಭಾರತೀಯರ ಕಣ್ಣೀರು ಶೀಘ್ರದಲ್ಲೇ ಆಕ್ರೋಶವಾಗಿ ಸ್ಫೋಟಿಸಲಿದೆ. ಅಮಾಯಕ ಜೀವಗಳನ್ನು ಬಲಿ ಪಡೆದವರನ್ನು ಭಾರತ ಹುಡುಕಿ ಕೊಲ್ಲಲಿದೆ. ಇದು ನಮ್ಮ ಶಫಥ" ಇದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಹಲ್ಗಾಮ್ ಉಗ್ರದಾಳಿ ಹಿನ್ನೆಲೆಯಲ್ಲಿ ದೇಶದ ಜನತೆಗೆ ನೀಡಿರುವ ಭರವಸೆ.

ಬಿಹಾರದ ಮಧುಬನಿಯಲ್ಲಿ 13,480 ಕೋಟಿ ರೂ.ಗಳಿಗೂ ಹೆಚ್ಚಿನ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿ ಮಾತನಾಡಿದ ಪ್ರಧಾನಿ ಮೋದಿ, ತಮ್ಮ ಭಾಷಣ ಆರಂಭಕ್ಕೂ ಮುನ್ನ ಪಹಲ್ಗಾಮ್ ದಾಳಿಯಲ್ಲಿ ಹತರಾದವರ ಸ್ಮರಣಾರ್ಥ ಮೌನಾಚರಣೆ ನಡೆಸಿದರು. ಮೃತರಿಗೆ ಶ್ರದ್ಧಾಂಜಲಿ ಸಲ್ಲಿಸಿದ ಪ್ರಧಾನಿ ಮೋದಿ, "ಇಡೀ ದೇಶ ಮೃತರ ಕುಟುಂಬಸ್ಥರ ನೋವಿನಲ್ಲಿ ಭಾಗಿಯಾಗಿದೆ" ಎಂದು ಭಾವುಕರಾಗಿ ಹೇಳಿದರು.



ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಅತ್ಯುಗ್ರವಾಗಿ ಖಂಡಿಸಿದ ಪ್ರಧಾನಿ ಮೋದಿ, ಇಂತಹ ರಣಹೇಡಿ ಕೃತ್ಯ ನಡೆಸಿದ ಭಯೋತ್ಪಾದಕರು ಎಲ್ಲೇ ಅಡಗಿದ್ದರೂ ಅವರನ್ನು ಹಿಡಿದು ಶಿಕ್ಷಿಸುವುದಾಗಿ ಶಪಥ ಮಾಡಿದರು.

"ಪಹಲ್ಗಾಮ್ ಉಗ್ರ ದಾಳಿಯನ್ನು ಖಂಡಿಸಲು ಪದಗಳು ಸಿಗುತ್ತಿಲ್ಲ. ಈ ದಾಳಿಯಲ್ಲಿ ಮೃತಪಟ್ಟವರ ಕುಟುಂಬಸ್ಥರ ನೋವಿನಲ್ಲಿ ನಾವೆಲ್ಲಾ ಭಾಗಿಯಾಗಿದ್ದೇವೆ. ಆದರೆ ಈ ಅಮಾನವೀಯ ದಾಳಿಯನ್ನು ನಡೆಸಿದ ಉಗ್ರರನ್ನು ಶಿಕ್ಷಿಸದ ಹೊರತು, ಕೇಂದ್ರ ಸರ್ಕಾರ ನೆಮ್ಮದಿಯಿಂದ ನಿದ್ದೆ ಮಾಡುವುದಿಲ್ಲ" ಎಂದು ಪ್ರಧಾನಿ ಮೋದಿ ಗುಡುಗಿದರು. "ಪಹಲ್ಗಾಮ್ ದಾಳಿ ನಡೆಸಿದವರಿಗೆ ಅತ್ಯುಗ್ರ ಶಿಕ್ಷೆ ಕಾದಿದೆ. ಭಾರತಾಂಬೆಯ ಮಕ್ಕಳನ್ನು ಅತ್ಯಂತ ಅಮಾನವೀಯವಾಗಿ ಕೊಂದವರನ್ನು ಸುಮ್ಮನೆ ಬಿಡುವ ಪ್ರಶ್ನೆಯೇ ಇಲ್ಲ. ಪಹಲ್ಗಾಮ್ ಉಗ್ರ ದಾಳಿಯಿಂದ ಭಾರತದಲ್ಲಿ ಮನೆ ಮಾಡಿರುವ ಆಕ್ರೋಶವನ್ನು ನಾವು ಗೌರವಿಸುತ್ತೇವೆ. ಶೀಘ್ರದಲ್ಲೇ ಈ ಉಗ್ರರನ್ನು ಹೆಡೆಮುರಿ ಕಟ್ಟಲಾಗುವುದು" ಎಂದು ಪ್ರಧಾನಿ ಮೋದಿ ಭರವಸೆ ನೀಡಿದರು. ಪಹಲ್ಗಾಮ್‌ನಲ್ಲಿ ದೇಶದ ಮೂಲೆ ಮೂಲೆಗಳಿಂದ ಬಂದಿದ್ದ ಪ್ರವಾಸಿಗರು ಹತರಾಗಿದ್ದಾರೆ. ಇಡೀ ದೇಶ ಈ ಉಗ್ರ ದಾಳಿಯಿಂದ ಆಕ್ರೋಶಗೊಂಡಿದೆ. ಭಾರತ ಸರ್ಕಾರ ಇದಕ್ಕೆ ಪೂರಕವಾದ ಕ್ರಮಗಳನ್ನು ಕೈಗೊಳ್ಳಲಿದ್ದು, ನಮ್ಮವರನ್ನು ಕೊಂದ ಪಾಪಿಗಳು ಎಲ್ಲೇ ಅಡಗಿದ್ದರೂ ಸರಿ, ಅವರನ್ನು ಹುಡುಕಿ ಶಿಕ್ಷಿಸುವುದು ಖಚಿತ" ಎಂದು ಪ್ರಧಾನಿ ಮೋದಿ ಹೇಳಿದರು.

"ಪಹಲ್ಗಾಮ್ ದಾಳಿಯ ಹಿಂದಿರುವ ಕಾಣದ ಶಕ್ತಿಗಳ ಬಗ್ಗೆ ನಾವು ಚೆನ್ನಾಗಿ ಅರಿತಿದ್ದೇವೆ. ಉಗ್ರರ ಮೂಲಕ ಭಾರತೀಯರನ್ನು ಕೊಲ್ಲಿಸಿ ರಾಕ್ಷಸ ನಗು ಬೀರುತ್ತಿರುವವರು ಮುಂದಿನ ದಿನಗಳಲ್ಲಿ ಕಣ್ಣೀರು ಹಾಕಲಿದ್ದಾರೆ. ಪಹಲ್ಗಾಮ್ ದಾಳಿ ನಡೆಸಿದವರು ಮತ್ತು ದಾಳಿಯ ಯೋಜನೆ ರೂಪಿಸಿದವರು ಇಬ್ಬರಿಗೂ ಶಿಕ್ಷೆ ಕಟ್ಟಿಟ್ಟ ಬುತ್ತಿ" ಎಂದು ಪ್ರಧಾನಿ ಮೋದಿ ಇದೇ ವೇಳೆ ಪರೋಕ್ಷವಾಗಿ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದರು.

## ಬೆಳಗಾವಿ: ಕುರಿ ಕಾಯುತ್ತಲೇ ಯುಪಿಎಸ್‌ಸಿ ಪರೀಕ್ಷೆ ಪಾಸ್ ಮಾಡಿದ ಬೀರಪ್ಪ, ಹನುಮಂತಪ್ಪ



**ಬೆಳಗಾವಿ:** ಬೆಳಗಾವಿ ಮತ್ತು ಮಹಾರಾಷ್ಟ್ರದ ನೆರೆಯ ಕಾಗಲ್ ತಾಲ್ಲೂಕಿನಿಂದ ಕುರುಬ ಕುಟುಂಬಗಳ ಇಬ್ಬರು ಯುವಕರು ಕುರಿ ಕಾಯುತ್ತಲೇ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ರ‍್ಯಾಂಕ್ ಗಳೊಂದಿಗೆ ಉತ್ತೀರ್ಣರಾಗಿದ್ದಾರೆ. ಈ ಮೂಲಕ ತಾವು ಕಲಿತ ಶಾಲೆ, ಊರು ಹಾಗೂ ತಮ್ಮ ಕುಟುಂಬಕ್ಕೆ ಕೀರ್ತಿ ತಂದಿದ್ದಾರೆ.

ಕುರಿ ಮೇಯಿಸುತ್ತಿದ್ದ ಬೆಳಗಾವಿಯ ನಾನಾವಾಡಿಯಲ್ಲಿ ವಾಸವಿರುವ ಮಹಾರಾಷ್ಟ್ರದ ಎಮಗೆ ಗ್ರಾಮದ ಬೀರಪ್ಪ ಸಿದ್ದಪ್ಪ ಡೋಣಿ ದೇಶಕ್ಕೆ 551 ನೇ ರ‍್ಯಾಂಕ್ ಗಳಿಸಿದ್ದರೆ, ಬೆಳಗಾವಿಯ ಯರಗಟ್ಟಿ ತಾಲ್ಲೂಕಿನ ಕೊಡ್ಲಿವಾಡ ಗ್ರಾಮದ ಹನುಮಂತಪ್ಪ ಯಲ್ಲಪ್ಪ ನಂದಿ ಅವರು 910 ನೇ ರ‍್ಯಾಂಕ್ ಗಳಿಸಿದ್ದಾರೆ.

ಮಹಾರಾಷ್ಟ್ರದ ಕಾಗಲ್ ತಾಲ್ಲೂಕಿನ ನೆರೆಯ ಎಮಗೆ ಗ್ರಾಮದ ಸಿದ್ದಪ್ಪ ಮತ್ತು ಬಾಲವ್ವ ಡೋಣಿ ಅವರ ಮೂರನೇ ಮಗ ಬೀರಪ್ಪ. ಬೀರಪ್ಪ ತನ್ನ ಕುರಿಗಳನ್ನು ಮೇಯಿಸುತ್ತಿದ್ದಾಗಲೇ ಯುಪಿಎಸ್‌ಸಿ ಪರೀಕ್ಷೆಯ ಫಲಿತಾಂಶ ಬಂದಿದೆ. ತಾವು ಐಎಎಸ್ ಪಾಸ್ ಮಾಡಿರುವ ಸುದ್ದಿ ಕೇಳಿ ಸಂಭ್ರಮಿಸಿದರು.

ಕುರಿಗಳನ್ನು ಮೇಯಿಸುತ್ತಾ ಯುಪಿಎಸ್‌ಸಿ ಪರೀಕ್ಷೆಗೆ ತಯಾರಿ ನಡೆಸುತ್ತಿದ್ದ ಬೀರಪ್ಪ ಅವರು ಮೂರನೇ ಪ್ರಯತ್ನದಲ್ಲಿ ಯುಪಿಎಸ್ ಸಿ ಪರೀಕ್ಷೆ ಮಾಡಿದ್ದಾರೆ. ಅವರ ಈ ಸಾಧನೆ ಅವರ ಕುಟುಂಬ ಮತ್ತು ಗ್ರಾಮಸ್ಥರಿಗೆ ಬಹಳ ಸಂತೋಷ ತಂದಿದೆ. ಬೆಳಗಾವಿ ಬಳಿಯ ನಾನಾವಾಡಿಯ ಹೊಲದಲ್ಲಿ ಕುರಿ ಮೇಯಿಸುತ್ತಿದ್ದಾಗ ಅವರಿಗೆ ಯುಪಿಎಸ್‌ಸಿ ಪರೀಕ್ಷೆ ಪಾಸ್ ಮಾಡಿರುವ ಸುದ್ದಿ ತಿಳಿದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬೀರಪ್ಪ ಅವರ ಸಾಧನೆಗೆ ವೈಯಕ್ತಿಕವಾಗಿ ಕರೆ ಮಾಡಿ ಅಭಿನಂದಿಸಿದ್ದಾರೆ. ಅವರ ಕುಟುಂಬವು ಅವರನ್ನು ಸಾಂಪ್ರದಾಯಿಕವಾಗಿ ಆರತಿ ಮಾಡಿ ಹಾರ ಹಾಕುವ ಮೂಲಕ ಗೌರವಿಸಿತು. ಈ ಸಂದರ್ಭದಲ್ಲಿ ಆತನ ಕುಟುಂಬ ಬೀರಪ್ಪಗೆ ಕುರಿಮರಿಯನ್ನು ಉಡುಗೊರೆಯಾಗಿ ನೀಡಿತು. ಐಪಿಎಸ್ ಅಧಿಕಾರಿಯಾಗುವ ಮಹತ್ವಾಕಾಂಕ್ಷೆಯನ್ನು ಬೀರಪ್ಪ ವ್ಯಕ್ತಪಡಿಸಿದ್ದಾರೆ.

ಇನ್ನು ಯರಗಟ್ಟಿ ತಾಲ್ಲೂಕಿನ ಕೊಡ್ಲಿವಾಡ ಗ್ರಾಮದ ಹನುಮಂತಪ್ಪ ಯಲ್ಲಪ್ಪ ನಂದಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಸುದ್ದಿ ತಿಳಿಯುತ್ತಿದ್ದಂತೆ, ಕೋಳಿವಾಡ ಗ್ರಾಮಸ್ಥರು ಸಂಭ್ರಮಿಸಿದರು. ಅವರ ತಂದೆ ಯಲ್ಲಪ್ಪ, ತಾಯಿ ಕಾಳವ್ವ, ಪತ್ನಿ ಯಶೋಧ, ಸಹೋದರ ಆನಂದ್ ಮತ್ತು ಇತರ ಕುಟುಂಬ ಸದಸ್ಯರು ಹರ್ಷ ವ್ಯಕ್ತಪಡಿಸಿದರು.

ಹನುಮಂತ ಅವರ ಸಾಧನೆಗೆ ಇಡೀ ಗ್ರಾಮವೇ ಹೆಮ್ಮೆ ಪಡುತ್ತಿದೆ. ಹನುಮಂತ ಎಲ್ಲಾ ಅಡೆತಡೆಗಳನ್ನು ಮೀರಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಮೂಲಕ ಹೆತ್ತವರು ಹೆಮ್ಮೆ ಪಡುವಂತೆ ಮಾಡಿದ್ದಾರೆ.

### ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ

# 3,647 ಕೋಟಿ ರೂ ಯೋಜನೆಗಳಿಗೆ ಅನುಮೋದನೆ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಮೈಸೂರು ಪ್ರಾದೇಶಿಕ ವಿಭಾಗದಲ್ಲಿ 3,647 ಕೋಟಿ ರೂ. ಮೌಲ್ಯದ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ.

ಇಂದು ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದ ನಾಲ್ಕು ಪ್ರದೇಶಗಳಲ್ಲಿ ಸಚಿವ ಸಂಪುಟ ಸಭೆಗಳನ್ನು ನಡೆಸಲು ಸಂಪುಟ ಸಭೆ ನಿರ್ಧರಿಸಿದೆ ಎಂದು ಹೇಳಿದರು.

ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಸಂಪುಟ ಸಭೆ ಖಂಡಿಸಿದೆ ಮತ್ತು ಘಟನೆಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಸಂತಾಪ ಸೂಚಿಸಿದೆ ಎಂದು ಸಿಎಂ ತಿಳಿಸಿದರು.

ಸಭೆಯಲ್ಲಿ 78 ವಿಷಯಗಳ ಕುರಿತು ಚರ್ಚಿಸಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

"ಇಂದು, ನಾನು ಮಲೆ ಮಹದೇಶ್ವರ ಬೆಟ್ಟದಲ್ಲಿ ಐತಿಹಾಸಿಕ ಸಚಿವ ಸಂಪುಟ ಸಭೆಯ ಅಧ್ಯಕ್ಷತೆ ವಹಿಸಿದ್ದೆ. ಕರ್ನಾಟಕದ ನಾಲ್ಕು ಪ್ರದೇಶಗಳಲ್ಲಿ ಸಚಿವ ಸಂಪುಟ ಸಭೆಗಳನ್ನು ನಡೆಸಲು ನಾವು ನಿರ್ಧರಿಸಿದ್ದೇವೆ. ಇದಕ್ಕೂ ಮೊದಲು, ಕಲಬುರಗಿ ಪ್ರದೇಶದಲ್ಲಿ ಸಭೆ ನಡೆದಿತ್ತು; ಇಂದು, ಮೈಸೂರು ಪ್ರದೇಶದಲ್ಲಿ ನಡೆದಿದ್ದು, ಮುಂಬರುವ ಸಭೆಗಳು ಬೆಳಗಾವಿ ಮತ್ತು ಬಿಜಾಪುರದಲ್ಲಿ ಹಾಗೂ ಬೆಂಗಳೂರು ವಿಭಾಗದ ಸಭೆ ನಂದಿ ಬೆಟ್ಟದಲ್ಲಿ ನಡೆಯಲಿದೆ ಮತ್ತು ಆಯಾ ಪ್ರದೇಶಗಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದರು.

ಇಂದು ನಡೆದ ಸಭೆಯಲ್ಲಿ 1,787 ಕೋಟಿ ರೂ.ಗಳ ನೀರಾವರಿ ಯೋಜನೆಗಳಿಗೆ



ಅನುಮೋದನೆ ನೀಡಲಾಗಿದೆ. ಆರೋಗ್ಯ ಕ್ಷೇತ್ರದ ಸುಧಾರಣೆಗೆ 228 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದರು, ಕೊಳ್ಳೇಗಾಲದಲ್ಲಿರುವ ಸರ್ಕಾರಿ ಜಿಲ್ಲಾ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

ಗುಂಡ್ಲುಪೇಟೆ 110 ಕೆರೆಗಳಿಗೆ ನೀರು ತುಂಬಿಸಲು 475 ಕೋಟಿ ವೆಚ್ಚಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಅಷ್ಟೇ ಅಲ್ಲದೆ ಚಾಮರಾಜನಗರದಲ್ಲಿ ಹೊಸ ಪ್ರವಾಸಿ ಮಂದಿರ ನಿರ್ಮಾಣ, ಚಾಮರಾಜನಗರ ಟೌನ್ ನಲ್ಲಿ ಕುಡಿಯುವ ನೀರು, ಒಳ ಚರಂಡಿ ನಿರ್ಮಾಣ ಹಾಗೂ ಮೈಸೂರು ತಾಲ್ಲೂಕಿನ ಇಲವಾಲದಲ್ಲಿ ಅಂತರಾಷ್ಟ್ರೀಯ ಕ್ರೀಡಾಂಗಣ ನಿರ್ಮಿಸಲು ಜಾಗ ಒದಗಿಸಲು ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.

"ಪ್ರವಾಸೋದ್ಯಮಕ್ಕೆ 300 ಕೋಟಿ ರೂ.ಗಳನ್ನು ನಿಗದಿಪಡಿಸಲಾಗಿದೆ. ಹನೂರಿನಲ್ಲಿ ತಾಲೂಕು ಕಟ್ಟಡ ಮತ್ತು 50 ಹಾಸಿಗೆಗಳ ಆಸ್ಪತ್ರೆಯನ್ನು ನಿರ್ಮಿಸಲಾಗುವುದು. ಚಾಮರಾಜನಗರ ಜಿಲ್ಲೆಯ ಚಿಕ್ಕಲೂರು, ಕೊಳ್ಳೇಗಾಲದಲ್ಲಿ, ಮಾಂಟೇಶ್ವರಿ, ರಾಚಪ್ಪಾಜಿ ಮತ್ತು ಸಿದ್ದಪ್ಪಾಜಿ ಪ್ರಾಧಿಕಾರಗಳ ಸ್ಥಾಪನೆಗೆ ನಿರ್ಧಾರ ತೆಗೆದುಕೊಳ್ಳಲಾಗಿದೆ. ಮೈಸೂರಿನ ಇಲವಾಲದಲ್ಲಿ ಕ್ರಿಕೆಟ್ ಕ್ರೀಡಾಂಗಣಕ್ಕಾಗಿ ಸ್ಥಳ ಹಂಚಿಕೆ ಮಾಡಲಾಗುವುದು" ಎಂದು ಸಿಎಂ ಹೇಳಿದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಒಟ್ಟಾರೆ ಆರೋಗ್ಯ ಉತ್ತಮವಾಗಿದ್ದರೂ ಪ್ರಯಾಣ ಒತ್ತಡಮಯವೂ ಮತ್ತು ಕಷ್ಟಕರವೂ ಆಗಿರುತ್ತದೆ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಮಕ್ಕಳು ಅಭ್ಯಾಸಗಳ ಮೇಲೆ ಗಮನ ಹರಿಸಬೇಕು ಹಾಗೂ ಭವಿಷ್ಯದ ಬಗ್ಗೆ ಯೋಜನೆ ರೂಪಿಸಬೇಕು. ಸ್ನೇಹ ಆಳವಾದ ಹಾಗೆ ಪ್ರಣಯ ನಿಮ್ಮೆಡೆ ಬರುತ್ತದೆ. ಉದ್ಯಮಿಗಳಿಗೆ ಒಳ್ಳೆಯ ದಿನ. ವ್ಯಾಪಾರದ ಉದ್ದೇಶಕ್ಕಾಗಿ ಕೈಗೊಂಡ ಒಂದು ಹಠಾತ್ ಪ್ರವಾಸ ಸಕಾರಾತ್ಮಕ ಫಲಿತಾಂಶವನ್ನು ನೀಡುತ್ತದೆ. ಸಮಯಕ್ಕೆ ಅನುಗುಣವಾಗಿ ಪ್ರತಿಯೊಂದು ಕೆಲಸವನ್ನು ಪೂರೈಸುವುದು ಉತ್ತಮ.

### ವೃಷಭ ರಾಶಿ

ಸರ್ವತೋಮುಖ ಅಭಿವೃದ್ಧಿ ಸಾಧ್ಯವಿದ್ದಾಗ ಮಾತ್ರ ಮಾನಸಿಕ ಮತ್ತು ನೈತಿಕ ಶಿಕ್ಷಣದ ಜೊತೆ ದೈಹಿಕ ಶಿಕ್ಷಣವನ್ನೂ ತೆಗೆದುಕೊಳ್ಳಿ. ಆರೋಗ್ಯಕರ ಮನಸ್ಸು ಯಾವಾಗಲೂ ಆರೋಗ್ಯಕರ ದೇಹದಲ್ಲಿ ಪರ್ಯವಸಾನವಾಗುತ್ತದೆಂದು ನೆನಪಿಡಿ. ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ. ನಿಮ್ಮ ಪ್ರಯತ್ನಗಳು ಹಾಗೂ ನಿಮ್ಮ ಕುಟುಂಬದ ಸದಸ್ಯರು ಒದಗಿಸಿದ ಬೆಂಬಲದ ಫಲವಾದ ಯಶಸ್ಸು ಮತ್ತು ಸಂತೋಷವನ್ನು ಆನಂದಿಸಲು ಈಗ ಒಂದು ಒಳ್ಳೆಯ ಸಮಯ.

### ಮಿಥುನ ರಾಶಿ

ನಿಮ್ಮ ಹಠಾತ್ ಪ್ರವೃತ್ತಿ ನಿಮಗೆ ಗಂಭೀರವಾದ ಆರೋಗ್ಯದ ಸಮಸ್ಯೆಗಳನ್ನು ಉಂಟುಮಾಡಬಹುದು. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ. ನಿಮ್ಮ ಸಂಬಂಧಿಕರು ಮತ್ತು ಸ್ನೇಹಿತರು ನಿಮ್ಮ ಹಣಕಾಸನ್ನು ನಿರ್ವಹಿಸಿದಲ್ಲಿ ನೀವು ಶೀಘ್ರದಲ್ಲೇ ನಿಮ್ಮ ಬಜೆಟ್ ಮೀರಬಹುದಾದ್ದರಿಂದ ಹಾಗೆ ಮಾಡಲು ಬಿಡಬೇಡಿ. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ.

### ಕರ್ಕ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಅನಿರೀಕ್ಷಿತ ಪ್ರಣಯ ಭಾವ ಸಂಜೆಯ ಹೊತ್ತಿಗೆ ನಿಮ್ಮ ಮನಸ್ಸನ್ನು ಆವರಿಸುತ್ತದೆ. ನಿಮ್ಮ ಕೌಶಲ್ಯಗಳನ್ನು ತೋರಿಸಲು ಅವಕಾಶಗಳು ಇಂದು ನಿಮ್ಮೊಂದಿಗಿವೆ

### ಸಿಂಹ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ಹಣಕಾಸು ಲಾಭ ಒಂದಕ್ಕಿಂತ ಹೆಚ್ಚು ಮೂಲಗಳಿಂದ ಬರುತ್ತದೆ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ. ನೀವು ಒಂದು ಕಠಿಣ ಕೆಲಸವನ್ನು ಪೂರ್ಣಗೊಳಿಸಲು ಸಾಧ್ಯವಾಗುವುದರಿಂದ ಸ್ನೇಹಿತರು ನಿಮ್ಮನ್ನು ಶ್ಲಾಘಿಸುತ್ತಾರೆ.

### ಕನ್ಯಾ ರಾಶಿ

ಇತರರನ್ನು ಟೀಕಿಸಲು ನಿಮ್ಮ ಸಮಯ ವ್ಯರ್ಥ ಮಾಡುವುದು ನಿಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರಬಹುದಾದ್ದರಿಂದ ಹಾಗೆ ಮಾಡಬೇಡಿ. ನೀವು ಮನೆಯಿಂದ ಹೊರ ಇದ್ದು ಉದ್ಯೋಗ ಅಥವಾ ಅಧ್ಯಯನ ಮಾಡುತ್ತಿದ್ದರೆ, ನಿಮ್ಮ ಹಣ ಮತ್ತು ಸಮಯವನ್ನು ವ್ಯರ್ಥ ಮಾಡುವಂತಹ ಜನರಿಂದ ದೂರವಿರುವುದು ಕಲಿತುಕೊಳ್ಳಬೇಕು. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.

### ತುಲಾ ರಾಶಿ

ನೀವು ಇಂದು ಮಾಡುವ ಕೆಲವು ದೈಹಿಕ ಬದಲಾವಣೆಗಳು ಖಂಡಿತವಾಗಿಯೂ ನಿಮ್ಮ ನೋಟವನ್ನು ವರ್ಧಿಸುತ್ತವೆ. ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ಕಿರಿಯ ಸಹೋದರ ಅಥವಾ ಸಹೋದರಿ ನಿಮ್ಮ ಸಲಹೆ ಪಡೆಯಸಬಹುದು.

### ವೃಶ್ಚಿಕ ರಾಶಿ

ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಹಣ ನಿಮಗೆ ಅಗತ್ಯವಾಗಿದೆ ಆದ–ರೆ ನಿಮ್ಮ ಸಂಬಂಧಗಳನ್ನು ಹಾಳುಮಾಡುವಷ್ಟು ಹಣದ ಬಗ್ಗೆ ಗಂಭೀರವಾಗಬೇಡಿ. ಸಂಗಾತಿ ಕಾಳಜಿ ತೋರಿಸುತ್ತಾರೆ. ಇಂದು ನಿಮ್ಮ ಯಾವುದೇ ಭರವಸೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ. ಇದರಿಂದಾಗಿ ನಿಮ್ಮ ಪ್ರೀತಿಪಾತ್ರರು ನಿಮ್ಮ ಮೇಲೆ ಕೋಪಗೊಳ್ಳಬಹುದು. ನಿಮ್ಮ ಮೇಲಿನವರಿಗೆ ಇಂದು ನಿಮ್ಮ ಕೆಲಸದ ಗುಣಮಟ್ಟ ಒಳ್ಳೆಯ ಪ್ರಭಾವ ಬೀರಬಹುದು

### ಧನು ರಾಶಿ

ಯಾವುದಾದರೂ ಸೃಜನಾತ್ಮಕ ಕೆಲಸದಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಸೋಮಾರಿಯಾಗಿ ಕುಳಿತುಕೊಳ್ಳುವ ನಿಮ್ಮ ಅಭ್ಯಾಸ ಮಾನಸಿಕ ಶಾಂತಿಗೆ ಮಾರಣಾಂತಿಕವಾಗಬಹುದು. ಇಂದು ಹೂಡಿಕೆಗಳನ್ನು ಮಾಡಬಾರದು. ಸಂಜೆ ಅಡಿಗೆ ಮನೆಗೆ ಅಗತ್ಯ ವಸ್ತುಗಳ ಖರೀದಿ ನಿಮ್ಮನ್ನು ವ್ಯಸ್ತವಾಗಿಡುತ್ತದೆ. ನೀವು ಸಂಜೆ ಸ್ನೇಹಿತರೊಂದಿಗೆ ಹೊರಗೆ ಹೋದರೆ ತತ್ಕ್ಷಣದ ಪ್ರಣಯ ನಿಮಗೆ ದೊರಕಬಹುದು

### ಮಕರ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು, ನೀವು ಇಂದು ಉತ್ತಮ ಬಜೆಟ್ ಅನ್ನು ಯೋಜಿಸಬೇಕಾಗಿದೆ, ಇದು ನಿಮ್ಮ ಅನೇಕ ಸಮಸ್ಯೆಗಳನ್ನು ತೆಗೆದುಹಾಕುತ್ತದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಕುಂಭ ರಾಶಿ

ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು ಏಕೆ–ಂದರೆ ಇಂದು ನಿಮಗೆ ಹಣದ ಅಗತ್ಯವಿರುತ್ತದೆ ಆದರೆ ನಿಮ್ಮ ಸಾಕಷ್ಟು ಹಣ ಇರುವುದಿಲ್ಲ.

### ಮೀನ ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು– ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ನಿಮ್ಮಲ್ಲಿ ಕೆಲವು ಆಭರಣ ಅಥವಾ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ. ಇಂದು ಪ್ರೀತಿಯ ಅನುಪಸ್ಥಿತಿಯ ಭಾವನೆ ಬರಬಹುದು.

## ಮಹಾನಗರ ಪಾಲಿಕೆ ಕಚೇರಿ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಭೇಟಿ

# ಅಧಿಕಾರಿಗಳ ಕರ್ತವ್ಯ ನಿರ್ವಹಣೆಯ ಲೋಪ : ಸ್ವಯಂ ಪ್ರೇರಿತ ದೂರು ದಾಖಲು

**ದಾವಣಗೆರೆ :** ದಾವಣಗೆರೆ ಮಹಾನಗರ ಪಾಲಿಕೆಯ ಕೇಂದ್ರ ಕಚೇರಿಗೆ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಅವರು, ಬುಧವಾರ ಅನಿರೀಕ್ಷಿತವಾಗಿ ಮಹಾನಗರ ಪಾಲಿಕೆಯ ಕಚೇರಿಗೆ ಭೇಟಿ ನೀಡಿ ಅಲ್ಲಿನ ವಿವಿಧ ಶಾಖೆಗಳ ಕಡತ ಹಾಗೂ ಇತರೆ ದಾಖಲೆಗಳ ಪರಿಶೀಲನೆ ನಡೆಸಿದರು.

ಪಾಲಿಕೆ ಕಚೇರಿಯ ಅಧಿಕಾರಿ ಮತ್ತು ಸಿಬ್ಬಂದಿಗಳ ಹಾಜರಾತಿ ಪುಸ್ತಕ, ಚಲನ–ವಲನ ವಹಿ ಮತ್ತು ನಗದು ಘೋಷಣಾ ವಹಿಗಳ ಬಗ್ಗೆ ವಿಚಾರಿಸಿ ಮಾಹಿತಿ ಪಡೆದುಕೊಂಡರಲ್ಲದೇ, ಸರಿಯಾಗಿ ನಿರ್ವಹಿಸದಿರುವ ಕುರಿತು ಅಧಿಕಾರಿಗಳ ಮೇಲೆ ಅಸಮಾಧಾನ ವ್ಯಕ್ತಪಡಿಸಿದರು. ಅಭಿಯಂತರರು ವಿಭಾಗ ಶಾಖೆಗಳಿಗೆ ನೀಡಿ ಪರಿಶೀಲಿಸಿ, ಸೂಕ್ತ ದಾಖಲೆಗಳು ನೀಡದ ಕಾರಣ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಸ್ವಯಂ ಪ್ರೇರಿತ ದೂರು ದಾಖಲಿಸಿದರು.

ನಗರದಲ್ಲಿ ನಿಯಮ ಬಾಹಿರವಾಗಿ ಕಟ್ಟಡ ನಿರ್ಮಾಣಕ್ಕೆ ಅನುಮತಿ ನೀಡಲಾಗುತ್ತಿದೆಯೇ, ಒಂದು ವೇಳೆ ನಿಯಮ ಬಾಹಿರವಾಗಿ ಕಟ್ಟಡ ನಿರ್ಮಾಣ ಮಾಡಿದ್ದಲ್ಲಿ ಅಂತವರಿಗೆ ನೋಟಿಸ್ ನೀಡಲಾಗಿದೆಯೇ?, ಇಲ್ಲಿಯವರೆಗೆ ಎಷ್ಟು ನೋಟಿಸ್‌ಗಳನ್ನು ನೀಡಿದ್ದೀರಿ ಎಂದು ಮಹಾನಗರ ಪಾಲಿಕೆ ಆಯುಕ್ತರಿಗೆ ಪ್ರಶ್ನಿಸಿದರು.



ವಲಯ ಮೂರರ ಅಧಿಕಾರಿ ಕಚೇರಿಯಲ್ಲಿ ಖಾಸಗಿ ವ್ಯಕ್ತಿಯೋರ್ವ ಯಾವುದೇ ರೀತಿಯ ಅಧಿಕಾರ ಇಲ್ಲದೆ ಮಹಾನಗರ ಪಾಲಿಕೆ ಕಡತಗಳನ್ನು ನಿರ್ವಹಣೆ ಮಾಡುತ್ತಿರುವ ಕುರಿತು, ವಿಡಿಯೋ ತುಣುಕು ಹರಿದಾಡುತ್ತಿದೆ. ಈ ಸಂಬಂದ ಮಹಾನಗರ ಪಾಲಿಕೆ ಅಯುಕ್ತರು ಏನು ಕ್ರಮಕೈಗೊಂಡಿದ್ದೀರಿ ಎಂದು ನ್ಯಾ.ಬಿ.ವೀರಪ್ಪ ಪ್ರಶ್ನಿಸಿದರು.

ಇದಕ್ಕೆ ಉತ್ತರಿಸಿದ ಆಯು–ಕ್ತೆ ರೇಣುಕಾ ಕಚೇರಿಯ ಸಂಬಂದಪಟ್ಟ ಅಧಿಕಾರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಪೊಲೀಸ್ ಇಲಾಖೆ ವಿಡಿಯೋ ಸತ್ಯಾಸತ್ಯತೆ ತಿಳಿಯಲು ಪತ್ರ ಬರೆದಿರುವುದಾಗಿ ಮಾಹಿತಿ ನೀಡಿದರು.

ಆಯುಕ್ತ ಉತ್ತರ–ಕ್ಕೆ ಅಸಮಾಧನಗೊಂಡ ನ್ಯಾ.ಬಿ.ವೀರಪ್ಪ, ಸಂಬಂದ ಪಟ್ಟ ಅಧಿಕಾರಿಯನ್ನು ಈ ಕೂಡಲೇ ಇಲಾಖೆ ವಿಚಾರಣೆ ಕಾಯ್ದಿರಿಸಿ ಅಮಾನತು ಮಾಡಬೇಕು. ಖಾಸಗಿ ವ್ಯಕ್ತಿಯ ವಿರುದ್ಧ ಪೊಲೀಸ್ ದೂರು ದಾಖಲಿಸಬೇಕು ಎಂದು ಆಯುಕ್ತರಿಗೆ ನಿರ್ದೇಶನ ನೀಡಿದರು.

ನ್ಯಾ.ಬಿ.ವೀರಪ್ಪ ಸೂಚನೆಯಂತೆ ವಲಯ ಮೂರರ ಉಪ ಆಯು–ಕ್ತೆ ಈರಮ್ಮ ಹಾಗೂ ವಿಷಯ ನಿರ್ವಾಹಕಿ ನೇತ್ರಾ ಅವರನ್ನು ಅಮಾನತ್ತು ಮಾಡುವಂತೆ ಆಯುಕ್ತೆ ರೇಣುಕಾ ಶಿಫಾರಸ್ಸು ಮಾಡಿದ್ದಾರೆ.

**ಪಾಲಿಕೆಯ 115 ವಾಹನ ಜಪ್ತಿ:** ಕಸ ಸಂಗ್ರಹ, ವಿಲೇವಾರಿ, ಅಧಿಕಾರಿಗಳ ವಾಹನ ಸೇರಿ ದಾವಣಗೆರೆ ಮಹಾನಗರ ಪಾಲಿಕೆ ಬಳಿ 200 ವಾಹನಗಳು ಕಾರ್ಯಚರಣೆ ನಡೆಸುತ್ತಿವೆ. ಆದರೆ ನ್ಯಾ.ಬಿ.ವೀರಪ್ಪ ನವರು ಮಹಾನಗರ ಪಾಲಿಕೆಯ ಒಟ್ಟು ವಾಹನಗಳು ಎಷ್ಟು ಅವುಗಳಲ್ಲಿ ಎಷ್ಟು ವಾಹನಗಳಿಗೆ ಎಫ್.ಸಿ ಮುಗಿದಿದೆ ಎಂದು ಪ್ರಶ್ನಿಸಿದಾಗ ಸಂಬಂದ ಪಟ್ಟ ಅಧಿಕಾರಿ 200 ಕ್ಕೂ ವಾಹನಗಳು ಇದ್ದು ಇದರಲ್ಲಿ 15 ವಾಹನಗಳ ಎಫ್.ಸಿ ಮುಗಿದಿದೆ ಎಂದು ತಪ್ಪಾಗಿ ಮಾಹಿತಿ ನೀಡಿದರು.

ನ್ಯಾ.ಬಿ.ವೀರಪ್ಪ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಮಹಾನಗರ ಪಾಲಿಕೆಯ ಒಟ್ಟು ವಾಹನ ಪರಿಶೀಲನೆ ನಡೆಸುವಂತೆ ಸೂಚಿಸಿ, ಒಂದೆರಡು ಗಂಟೆಯಲ್ಲಿ ವರದಿ ನೀಡುವಂತೆ ಸೂಚಿಸಿದರು.

ಸಂಜೆಯ ವೇಳೆ ಸಾರಿಗೆ ಅಧಿಕಾರಿಗಳ ವರದಿ ನೀಡಿ, ಮಹಾನಗರ ಪಾಲಿಕೆಯ 200 ವಾಹನಗಳಲ್ಲಿ 115 ವಾಹನಗಳಿಗೆ ಎಫ್.ಸಿ ಮುಗಿದಿದೆ ಎಂದು ತಿಳಿಸಿದರು.

ಇದರ ಮೇರೆಗೆ ಪಾಲಿಕೆ 115 ವಾಹನಗಳ ಜಪ್ತಿಗೆ ನ್ಯಾ.ಬಿ.ವೀರಪ್ಪ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ. ಎನ್. ಲೋಕೇಶ್, , ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ. ಮಂಜುನಾಥ್,

ಕರ್ನಾಟಕ ಲೋಕಾಯುಕ್ತ ಅಪರ ನಿಬಂಧಕರಾದ ಕೆ.ಎಂ.ರಾಜಶೇಖರ್, ಅರವಿಂದ.ಎನ್.ವಿ, ವಿ.ಎನ್.ಮಿಲನ,ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ, ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್. ಕೌಲಪೂರೆ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸಲು ಅಧಿಕಾರಿಗಳಿಗೆ ಸೂಚನೆ

**ಹಾಸನ :** ಈ ಬಾರಿ ವಾಡಿಕೆಗಿಂತ ಅಧಿಕ ಮಳೆಯಾಗುತ್ತದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ ಈ ನಿಟ್ಟಿನಲ್ಲಿ ಎಲ್ಲಾ ಅಧಿಕಾರಿಗಳು ಎಚ್ಚರಿಕೆಯಿಂದ ಇದ್ದು ನಿಗಾವಹಿಸಿ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿ ಸತ್ಯಭಾಮ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಪೂರ್ವ ಮುಂಗಾರಿನಲ್ಲಿ ಮಳೆಯಿಂದ ಹಾನಿಯಾಗಿರುವ ಬಗ್ಗೆ ಅಧಿಕಾರಿಗಳು ಗಮನಹರಿಸಿ ಪರಿಶೀಲನೆ ಮಾಡಿ ಪರಿಹಾರ ಪಡೆಯಲು ಅವಕಾಶವಾಗುವಂತೆ ಮಾಹಿತಿಯನ್ನು ಅಪ್ ಲೋಡ್ ಮಾಡಲು ತಿಳಿಸಿದರು.




ಮಳೆಗಾಲದಲ್ಲಿ ನೀರು ಸರಾಗವಾಗಿ ಹರಿಯುವಂತೆ ಉಪ ಕಾಲುವೆಗಳ ಹೂಳು ತೆಗೆಸಲು ಕ್ರಮವಹಿಸುವಂತೆ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಜಲಾಶಯಗಳ ಭದ್ರತೆ ಬಗ್ಗೆ ನಿಗಾವಹಿಸಲು ನಿರ್ದೇಶನ ನೀಡಿದರು.

ಕುಡಿಯುವ ನೀರು ಮತ್ತು ಪಶುಗಳ ಮೇವಿಗೆ ಯಾವುದೇ ಸಮಸ್ಯೆಯಿಲ್ಲ ಎಂದು ತಿಳಿಸಿದರು.ಮಳೆಯಿಂದ ಹಾನಿಯಾಗಿರುವ ಮನೆಗಳ ಬಗ್ಗೆ ಗಮನಹರಿಸಿ ಪರಿಶೀಲನೆ ಮಾಡುವಂತೆ ಸೂಚಿಸಿದರು.

ಮಳೆಗಾಲದಲ್ಲಿ ರಾಷ್ಟ್ರೀಯ ಹೆದ್ದಾರಿ 75 ರಲ್ಲಿ ಭೂಕುಸಿತ ಮರುಕಳಿಸದಂತೆ ಎಚ್ಚರಿವಹಿಸಿ ಕಾಮಗಾರಿ ಪೂರ್ಣಗೊಳಿಸಲು ಎನ್.ಹೆಚ್.ಎ.ಐ ಅಧಿಕಾರಿಗಳಿಗೆ ಸೂಚಿಸಿದರು.

ಮಳೆಗಾಲದಲ್ಲಿ ಕಾಣಿಸಿಕೊಳ್ಳುವ ರೋಗಗಳನ್ನು ಹರಡದಂತೆ ತಡೆಗಟ್ಟುವ ನಿಟ್ಟಿನಲ್ಲಿ ಜಾಗ್ರತೆ ವಹಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಸೂಚಿಸಿದರು. ಮುಜರಾಯಿ ದೇವಾಲಯಗಳ ಆಸ್ತಿಯನ್ನು ಖಾತೆ ಮಾಡಲು ಆಸಕ್ತಿವಹಿಸಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣ ಮೂರ್ತಿ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರರು, ಜಂಟಿ ಕೃಷಿ ನಿರ್ದೇಶಕರಾದ ರಮೇಶ್ , ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಅನಿಲ್ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಹಸಿಶುಂಠಿ ಖರೀದಿಸಲು ಕೇಂದ್ರಗಳನ್ನು ತೆರೆಯಲು ಡಿಸಿ ಸೂಚನೆ

**ಶಿವಮೊಗ್ಗ:** ಶುಂಠಿ ಬೆಲೆ ಕುಸಿತದ ಹಿನ್ನೆಲೆ 2024–25 ನೇ ಸಾಲಿನ ಕೇಂದ್ರ ಸರ್ಕಾರದ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಪ್ರತಿ ಕ್ವಿಂಟಾಲ್‌ಗೆ ರೂ.2445 ರಂತೆ ರೈತರಿಂದ ಹಸಿಶುಂಠಿ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದರು.

ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಬುಧವಾರ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ಹಸಿಶುಂಠಿ ಖರೀದಿಸಲು ಜಿಲ್ಲೆಯಲ್ಲಿ ಖರೀದಿ ಕೇಂದ್ರಗಳನ್ನು ತೆರೆಯುವ ಕುರಿತು ಚರ್ಚಿಸಲು ಏರ್ಪಡಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಸೊರಬ, ಸಾಗರ, ಶಿಕಾರಿಪುರ, ಹೊಸನಗರ ತೀರ್ಥಹಳ್ಳಿಯಲ್ಲಿ ಶುಂಠಿ ಬೆಳೆಯಲಾಗಿದ್ದು, ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿ ರೈತರಿಗೆ ಅನುಕೂಲವಾಗುವಂತಹ ಸ್ಥಳಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಈ ಯೋಜನೆಯ ಮಾರ್ಗಸೂಚಿಯನ್ವಯ ಮೈಸೂರು, ಹಾಸನ, ಹಾವೇರಿ, ಶಿವಮೊಗ್ಗ, ಬೀದರ್, ಚಿಕ್ಕಮಗಳೂರು, ಮಂಡ್ಯ, ಕೊಡಗು ಮತ್ತು ಚಾಮರಾಜನಗರ ಜಿಲ್ಲೆಗಳ ರೈತರಿಂದ ಗರಿಷ್ಠ 59,948 ಮೆಟ್ರಿಕ್ ಟನ್ ಎಫ್‌ಎಕ್ಯು ಗುಣಮಟ್ಟದ ಹಸಿಶುಂಠಿ ಖರೀದಿಸಲಾಗುವುದು.

ರಾಜ್ಯ ಸರ್ಕಾರದ ವತಿಯಿಂದ ಹಸಿಶುಂಠಿ ಖರೀದಿಸಲು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳವನ್ನು ಖರೀದಿ ಸಂಸ್ಥೆಯನ್ನಾಗಿ ನೇಮಕ ಮಾಡಲಾಗಿದೆ. ರೈತರ ನೋಂದಣಿ ಕಾರ್ಯದ ಜೊತೆ ಖರೀದಿ ಪ್ರಕ್ರಿಯೆಯನ್ನೂ ಪ್ರಾರಂಭಿಸಲಾಗುವುದು. ಎಕ–ರೆಗೆ 30 ಕ್ವಿಂಟಾಲ್ ಹಾಗೂ ಪ್ರತಿ ರೈತರಿಂದ ಗರಿಷ್ಠ 60 ಕ್ವಿಂಟಾಲ್ ಪ್ರಮಾಣದ ಎಫ್‌ಎಕ್ಯು ಗುಣಮಟ್ಟದ ಹಸಿಶುಂಠಿ ಖರೀದಿಸಲಾಗುವುದು. ಈ ಕೂಡಲೇ ರೈತರು ನೋಂದಣಿ ಪ್ರಕ್ರಿಯೆ ಆರಂಭಿಸಬೇಕು ಎಂದರು.

ಕೇಂದ್ರ ಸರ್ಕಾರ ಕ್ವಿಂಟಾಲ್‌ಗೆ ಗರಿಷ್ಟ ರೂ.611.25 ನ್ನು ನಿರ್ವಹಣಾ ವೆಚ್ಚ ನಿಗದಿಪಡಿಸಿದ್ದು, ಈ ಮಿತಿಗೊಳಪಟ್ಟು ನಿರ್ವಹಣಾ ವೆಚ್ಚದಲ್ಲಿಯೇ ಕೈಗೊಳ್ಳಬೇಕು. ಖರೀದಿ ಸಂಸ್ಥೆಯು ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ಮಾರುಕಟ್ಟೆ ಮಧ್ಯಪ್ರವೇಶ ಮಾರ್ಗಸೂಚಿಯನ್ವಯ ಹಾಗೂ ತಾಂತ್ರಿಕ ಮತ್ತು ವೈಜ್ಞಾನಿಕ ಸೌಲಭ್ಯದಿಂದ ಕೂಡಿರುವ ಗೋದಾಮುಗಳನ್ನು ಹೊಂದಿರುವ ಸದೃಢ ಪಿಎಸಿಎಸ್/ವಿಎಸ್‌ಎಸ್‌ಎನ್/ಎಫ್‌ಪಿಓ/ಎಪಿಸಿಎಂಎಸ್ ಸಂಸ್ಥೆಗಳ ಮುಖಾಂತರ ಒಡಂಬಡಿಕೆ ಮಾಡಿಕೊಂಡು ಅಗತ್ಯಕ್ಕನುಗುಣವಾಗಿ ಖರೀದಿ ಕೇಂದ್ರಗಳನ್ನು ತೆರೆಯಲು ಕ್ರಮ ವಹಿಸುವಂತೆ ಸೂಚನೆ ನೀಡಿದ ಅವರು ಗ್ರಾ.ಪಂ ಗಳ ಮೂಲಕ ಹಾಗೂ ಇತರೆ ಮಾಧ್ಯಮಗಳ ಮೂಲಕ ರೈತರಿಗೆ ಈ ಕುರಿತು ಪ್ರಚಾರ ನೀಡಬೇಕು ಎಂದರು.

ಹಸಿಶುಂಠಿ ಶೇಖರಣೆ ಮಾಡಲು ಆಯಾ ತಾಲ್ಲೂಕು ಅಥವಾ ಜಿಲ್ಲೆಯಲ್ಲಿ ಲಭ್ಯವಿರುವ ಶೀತಲಗೃಹವನ್ನು ಪರಿಶೀಲಿಸಿ ಖರೀದಿ ಪೂರ್ವದಲ್ಲಿಯದೇ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು. ಎಫ್‌ಎಕ್ಯು ಗುಣಮಟ್ಟ ಖಾತ್ರಿಪಡಿಸಲು ತೋಟಗಾರಿಕೆ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸಾಂಬಾರ ಪದಾರ್ಥಗಳ ಮಂಡಳಿಯ ಪರಿಣಿತ ಅಧಿಕಾರಿಗಳನ್ನು ನಿಯೋಜಿಸಿ ಎಫ್‌ಎಕ್ಯು ಗುಣಮಟ್ಟವನ್ನು ದೃಢೀಕರಿಸಿಕೊಳ್ಳಬೇಕು.

ಹಸಿಶುಂಠಿ ಖರೀದಿ ಪೂರ್ವದಲ್ಲಿ ರೈತರ ನೋಂದಣಿಯನ್ನು ನಿಯಮಾನುಸಾರ ಕೈಗೊಂಡು ಪಹಣಿಯಲ್ಲಿ 2024–25 ನೇ ಸಾಲಿಗೆ ಬೆಳೆ ಸಮೀಕ್ಷೆ ದೃಢೀಕರಿಸಿ ರೈತರ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆ ಕೈಗೊಳ್ಳಬೇಕು. ಹಾಗೂ ರೈತರ ಹೆಸರಿನ ಆಧಾರ್ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆಗೆ ಉತ್ಪನ್ನದ ಮೌಲ್ಯವು ಡಿಬಿಟಿ/ಎನ್‌ಇಎಫ್‌ಟಿ/ಆರ್‌ಟಿಜಿಎಸ್ ಮೂಲಕ ಜಮಾ ಆಗುವಂತೆ ಪಾವತಿ ಮಾಡಬೇಕು ಎಂದು ತಿಳಿಸಿದರು.

ಎಪಿಎಂಸಿ ಹೆಚ್ಚುವರಿ ನಿರ್ದೇಶಕರಾದ ಹೆಚ್ ವೈ ಸತೀಶ್, ತೋಟಗಾರಿಕೆ ಉಪ ನಿರ್ದೇಶಕಿ ಸವಿತಾ, ಕೃಷಿ ಇಲಾಖೆ, ಸಹಕಾರ ಇಲಾಖೆ, ಸಹಕಾರ ಮಾರಾಟ ಮಹಾಮಂಡಳದ ಅಧಿಕಾರಿಗಳು ಉಪಸ್ಥಿತರಿದ್ದರು.

# ಇಂದು ಓಪನ್ ಜಿಎಂ ಡೇ: ಹೊಸ ಕೋರ್ಸ್ ಗಳ ಮಾಹಿತಿ

**ದಾವಣಗೆರೆ :** ನಗರದ ಜಿಎಂ ವಿಶ್ವವಿದ್ಯಾಲಯದಲ್ಲಿ ಪದವಿ, ಸ್ನಾತಕೋತ್ತರ ಪದವಿಯಂತಹ ವೃತ್ತಿಪರ ಕೋರ್ಸ್ ಗಳ ಜೊತೆಗೆ ಸ್ವಯಂ ಉದ್ಯೋಗದ ಕೋರ್ಸ್ ಗಳಿಗೂ ಆದ್ಯತೆ ನೀಡಲಾಗಿದ್ದು, ಈ ಕೋರ್ಸ್ ಗಳ ಕುರಿತು ಮಾಹಿತಿ ಪಡೆಯಲು ಆಸಕ್ತ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಏಪ್ರಿಲ್ 25 ರಂದು ಓಪನ್ ಡೇ ಮೂಲಕ ಆಹ್ವಾನ ನೀಡಲಾಗುತ್ತಿದೆ ಎಂದು ಜಿಎಂ ವಿಶ್ವವಿದ್ಯಾಲಯದ ಪ್ರಚಾರ ವಿಭಾಗದ ಡೀನ್ ಡಾ. ಟಿ.ಎಂ. ವೀರಗಂಗಾಧರ ಸ್ವಾಮಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಂದು ಬೆಳಗ್ಗೆ 9 ರಿಂದ ಸಂಜೆ 6 ಗಂಟೆವರೆಗೂ ಓಪನ್ ಜಿಎಂ ಡೇ ನಡೆಯಲಿದೆ. ವಿಶ್ವವಿದ್ಯಾಲಯವಾಗಿ ವರುಷಗಳಾಗಿದ್ದು, ವಿವಿಧ ವಿಭಾಗಗಳನ್ನು ಪ್ರಾರಂಭಿಸಲಾಗಿದೆ. 42 ಯುಜಿ, 18 ಪಿಜಿ ಕೋರ್ಸ್ ಗಳಿವೆ. ಓಪನ್ ಡೇಗೆ ಜಿಲ್ಲೆಯ ವಿವಿಧೆಡೆಗಳಿಂದ

ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಆಗಮಿಸುವರು ಎಂದು ತಿಳಿಸಿದರು.



ಓಪನ್ ಡೇ ದಿನದ ಪ್ರಯುಕ್ತ ವಿಶೇಷ ರಿಯಾಯಿತಿಗಳಿದ್ದು, ಅರ್ಹತೆಯ ಆಧಾರದ ಮೇಲೆ ವಿದ್ಯಾರ್ಥಿಗಳಿಗೆ ವಾರ್ಷಿಕ ಶುಲ್ಕದಲ್ಲಿ ವಿಶೇಷ ರಿಯಾಯಿತಿ ನೀಡಲಾಗುವುದು. ಆರ್ಥಿಕವಾಗಿ ಹಿಂದುಳಿದ ಹಿನ್ನೆಲೆಯ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಲಭ್ಯವಿದೆ. ರಾಜ್ಯ ಅಥವಾ ರಾಷ್ಟ್ರ ಮಟ್ಟದಲ್ಲಿ ಕ್ರೀಡೆಗಳಲಿ

ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಶೇ.75 ಬೋಧನಾ ಶುಲ್ಕ ವಿನಾಯಿತಿ. ಕೆಸಿಇಟಿಯಲ್ಲಿ ಅಗ್ರ 2000 ರೊಳಗೆ ರ್ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಶೇ.100 ಬೋಧನಾ ಶುಲ್ಕ ವಿನಾಯಿತಿ ಇದೆ ಎಂದು ಮಾಹಿತಿ ನೀಡಿದರು.

ತರಬೇತಿ ಮತ್ತು ಉದ್ಯೋಗ ವಿಭಾಗದ ನಿರ್ದೇಶಕ ಟಿ.ಆರ್. ತೇಜಸ್ವಿ ಕಟ್ಟಿಮನಿ ಮಾತನಾಡಿ, ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡಿದಂತಹ ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಕ್ಯಾಂಪಸ್ ಸಂದರ್ಶನದ ಮೂಲಕ ಉದ್ಯೋಗವನ್ನು ಕಂಡುಕೊಂಡಿದ್ದು, 2024 –25 ಸಾಲಿನಲ್ಲಿ ಸುಮಾರು 706 ಕ್ಕೂ ಅಧಿಕ ವಿದ್ಯಾರ್ಥಿಗಳು ವಿವಿಧ ಕಂಪನಿಗಳಲ್ಲಿ ಉದ್ಯೋಗವನ್ನು ಪಡೆದಿದ್ದಾರೆ. ವಾರ್ಷಿಕ 34.4 ಲಕ್ಷ ರೂ. ಅತ್ಯಧಿಕ ವೇತನದ ಪ್ಯಾಕೇಜ್ ನಡಿ ಉದ್ಯೋಗಾವಕಾಶ ಪಡೆಯಲಾಗಿದೆ ಎಂದು ತಿಳಿಸಿದರು.

## ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಿಂದ ಅರ್ಜಿ ಆಹ್ವಾನ

**ದಾವಣಗೆರೆ :** ಜಗಳೂರು ತಾಲ್ಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಪ್ರಸಕ್ತ ಸಾಲಿಗೆ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಹೊಸದಾಗಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಕಾರ್ಯಕ್ರಮದಡಿ ಸಣ್ಣ, ಅತಿಸಣ್ಣ, ಪರಿಶಿಷ್ಟಜಾತಿ, ಹಾಗೂ ಪರಿಶಿಷ್ಟ ಪಂಗಡದ ಅರ್ಹ ರೈತರು ಅರ್ಜಿ ಸಲ್ಲಿಸಬಹುದು. ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ದಾಳಿಂಬೆ, ನಿಂಬೆ ಗೋಂಡಂಬಿ, ಮಲ್ಲಿಗೆ, ವೀಳ್ಯದೆಲೆ, ತೆಂಗು, ಮಾವು, ಸಪೋಟ, ಸೀಬೆ, ಅಂಗಾಂಶಬಾಳೆ, ಪಪ್ಪಾಯ, ಕರಿಬೇವು, ಕಾಳುಮೆಣಸು, ಕೋಕೋ, ನೇರಳೆ, ಸೀತಾಫಲ, ಡ್ರ್ಯಾಗಫ್ರೂಟ್ಸ್, ಇತ್ಯಾದಿ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ಹಾಗೂ ಇನ್ನಿತರೆ ಕಾರ್ಯಕ್ರಮಗಳನ್ನು ಅನುಷ್ಟಾನಗೊಳಿಸಲಾಗುತ್ತಿದೆ. ಆಸಕ್ತ ರೈತರು ಅಗತ್ಯ ದಾಖಲಾತಿಗಳೊಂದಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಜಗಳೂರು ಕಛೇರಿಗೆ ಅಥವಾ ಆಯಾ ಗ್ರಾಮ ಪಂಚಾಯತಿಗೆ ಸಲ್ಲಿಸಬಹುದು. ಜಾಬ್ ಕಾರ್ಡ್ ರೈತರ ಹೆಸರಿನಲ್ಲಿ ಇರುವುದು ಕಡ್ಡಾಯವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಹೋಬಳಿಮಟ್ಟದ ಸಹಾಯಕ ತೋಟಗಾರಿಕ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ತಿಳಿಸಿದ್ದಾರೆ.

## ಸ್ವಯಂ ಸೇವಕ ಪುರುಷ ಗೃಹ ರಕ್ಷಕರ ಹುದ್ದೆಗೆ ಅರ್ಜಿ

**ದಾವಣಗೆರೆ:** ದಾವಣಗೆರೆ ಜಿಲ್ಲೆಯಾದ್ಯಂತ ವಿವಿಧ ಘಟಕಗಳಲ್ಲಿ ಖಾಲಿ ಇರುವ 110 ಸ್ವಯಂ ಸೇವಕ ಪುರುಷ ಗೃಹ ರಕ್ಷಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ನಮೂನೆಯನ್ನು ಜಿಲ್ಲಾ ಸಮಾದೇಶ್ವರ ಕಚೇರಿ ಘಟಕ ಕಚೇರಿಯಲ್ಲಿ ಹಾಗೂ ತಾಲ್ಲೂಕು/ಉಪ ಘಟಕಗಳಲ್ಲಿಯೂ ಪಡೆದು ಭರ್ತಿ ಮಾಡಿ, ಮೇ.16 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಸಮಾದೇಶ್ವರ ಕಚೇರಿ, ದೇವರಾಜ ಬಡಾವಣೆ ಬಿ ಬ್ಲಾಕ್, ಶಿವಪಾರ್ವತಿ ಕಲ್ಯಾಣ ಮಂಟಪ ಪಕ್ಕ, ಶಿವಾಲಯ ಹಿಂಭಾಗ, ದಾವಣಗೆರೆ–577006 ಸಂಪರ್ಕಿಸಲು ಹೋಂ ಗಾರ್ಡ್ಸ್ ಕಮಾಂಡೆಂಟ್ ತಿಳಿಸಿದ್ದಾರೆ.

## ತೆರಿಗೆ ಪಾವತಿಗೆ ಶೇ.5 ರಷ್ಟು ರಿಯಾಯಿತಿ

**ದಾವಣಗೆರೆ :** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಸೂಚಿಸಿರುವಂತೆ ಆರ್ಥಿಕ ವರ್ಷದ ಪ್ರಾರಂಭದ ಮೂರು ತಿಂಗಳೊಳಗಾಗಿ ಪ್ರಸಕ್ತ ಸಾಲಿನ ಸಂಪೂರ್ಣ ತೆರಿಗೆಯನ್ನು ಪಾವತಿಸುವವರಿಗೆ ಶೇ.5 ರಷ್ಟು ವಿನಾಯಿತಿ ನೀಡಲಾಗುವುದು.

ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಎಲ್ಲಾ ವಿಧದ ಆಸ್ತಿಗಳ ತೆರಿಗೆ ಪಾವತಿಸುವ ಸಾರ್ವಜನಿಕರು ಜೂನ್.30 ರೊಳಗಾಗಿ ತೆರಿಯನ್ನು ಆಯಾ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ತೆರಿಗೆ ಪಾವತಿಸಬೇಕೆಂದು ಜಿ.ಪಂ ಮುಖದಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ತಿಳಿಸಿದ್ದಾರೆ.


## ಪರಿಸರ ಸ್ನೇಹಿ ಜೀವನ ಕ್ರಮ ಅಳವಡಿಸಿಕೊಳ್ಳಲು ಕರೆ

**ದಾವಣಗೆರೆ :** ಜೀವನದಲ್ಲಿ ಪರಿಸರ ಸ್ನೇಹಿ ಜೀವನ ಕ್ರಮಗಳನ್ನು ಅಳವಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಮಹಾವೀರ ಕರೆಣ್ಣನವರ ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾಲಯದ ಸಮಾಜ ವಿಜ್ಞಾನ ಸಭಾಂಗಣದಲ್ಲಿ ಮಂಗಳವಾರ(ಏ.22), ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ದಾವಣಗೆರೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ದಾವಣಗೆರೆ, ಪರಿಸರ ವಿಜ್ಞಾನ ಅಧ್ಯಯನ ವಿಭಾಗ, ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ, ರಾಷ್ಟ್ರೀಯ ಸೇವಾ ಯೋಜನೆ, ಘಟಕ–1 ಮತ್ತು 2, ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ, ವಿಶ್ವ ಭೂಮಿ ದಿನ ದಿನಾಚರಣೆಯ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

## ನಿಧನ ಸುದ್ದಿಗಳು

### ಅಡಿವೆಪ್ಪ ಬಣಕಾರ ನಿಧನ



**ಗದಗ:** ರಾಜೀವ ಗಾಂಧೀ ನಗರದ ಈಶ್ವರ ಬಡಾವಣೆಯ ನಿವಾಸಿ, ಹಿರಿಯ ಪ್ರಾಥಮಿಕ ಕನ್ನಡ ಸರಕಾರಿ ಪಾಠಶಾಲೆಯ ನಿವೃತ್ತ ಮುಖ್ಯಾಧ್ಯಾಪಕ ಹಾಗೂ ಚಿತ್ರಕಲಾವಿದರಗಿದ್ದ ಅಡಿವೆಪ್ಪ ಶಿವರುದ್ರಪ್ಪ ಬಣಕಾರ (65) ಬುಧವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಗದಗ ಹೊಂಬಳ ರಸ್ತೆಯಲ್ಲಿರುವ ವೀರಶೈವ–ಲಿಂಗಾಯತ ರುದ್ರಭೂಮಿಯಲ್ಲಿ ಮೃತರ ಅಂತ್ಯಕ್ರಿಯೆ ಜರುಗಿತು.

ಪ್ರತಿಷ್ಠಿತ ಧಾರವಾಡದ ಗಂಡು ಮಕ್ಕಳ ಟ್ರೇನಿಂಗ್ ಕಾಲೇಜಿನ ಟಿ.ಸಿ.ಎಚ್. ವಿದ್ಯಾರ್ಥಿಯಾಗಿದ್ದ ಅಡಿವೆಪ್ಪ ಬಣಕಾರ ಅಗಲಿಕೆಗೆ ಟ್ರೇನಿಂಗ್ ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಬಳಗವು ತೀವ್ರ ಶೋಕ ವ್ಯಕ್ತಪಡಿಸಿದೆ.

# ಪಹಲ್ಗಾಮ್ ಉಗ್ರರ ದಾಳಿ: ತಾಯ್ನಾಡಿಗೆ ಬಂದ ಕನ್ನಡಿಗರ ಮೃತದೇಹ

## ಕಾಶ್ಮೀರದಲ್ಲಿ ಸಿಲುಕಿರುವ 180 ಪ್ರವಾಸಿಗರಿಗೆ ವಿಶೇಷ ವಿಮಾನ





**ಬೆಂಗಳೂರು:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರ ಗುಂಡಿಗೆ ಬಲಿಯಾದ ಕರ್ನಾಟಕದ ಮೂವರು ಪ್ರವಾಸಿಗರಲ್ಲಿ ಇಬ್ಬರ ಮೃತದೇಹಗಳು ಗುರುವಾರ ಬೆಳಗಿನ ಜಾವ ಬೆಂಗಳೂರು ತಲುಪಿವೆ.

ಬೆಂಗಳೂರಿನ ಭರತ್ ಭೂಷಣ್ ಮತ್ತು ಶಿವಮೊಗ್ಗದ ರಿಯಲ್ ಎಸ್ಟೇಟ್ ಏಜೆಂಟ್ ಮಂಜುನಾಥ ರಾವ್ ಅವರ ಮೃತದೇಹಗಳನ್ನು ಹೊತ್ತ ವಿಮಾನವು ಬೆಳಗಿನ ಜಾವ 3.45 ರ ಸುಮಾರಿಗೆ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದಿದೆ. ಸಂತ್ರಸ್ತರ ಕುಟುಂಬಗಳ ಹದಿಮೂರು ಸದಸ್ಯರು ಸಹ ಅದೇ ವಿಮಾನದಲ್ಲಿ ಆಗಮಿಸಿದ್ದಾರೆ.

ಬೆಂಗಳೂರಿನ ರಾಮಮೂರ್ತಿ ನಗರದ ಸಾಫ್ಟ್‌ವೇರ್ ಎಂಜಿನಿಯರ್ ಮಧುಸೂಧನ್ ರಾವ್ ಅವರ ಮೃತದೇಹವನ್ನು ಚೆನ್ನೈಗೆ ಕೊಂಡೊಯ್ಯಲಾಗುತ್ತಿದೆ, ಅಲ್ಲಿಂದ ಅದನ್ನು ಅವರ ಹುಟ್ಟೂರು ಆಂಧ್ರಪ್ರದೇಶದ ನೆಲ್ಲೂರಿಗೆ ಸಾಗಿಸಲಾಗುವುದು.

ಮಂಜುನಾಥ ರಾವ್ ಅವರ ಸೋದರ ಮಾವ ಪ್ರದೀಪ್ ಮತ್ತು ಭೂಷಣ್ ಅವರ ಪತ್ನಿ ಸುಜಾತಾ ಅವರ ಸಂಬಂಧಿ ವಿನುತಾ ಅವರು ಮೃತದೇಹವನ್ನು ಸ್ವೀಕರಿಸಲು ವಿಮಾನ ನಿಲ್ದಾಣದಲ್ಲಿದ್ದರು. ದಾಳಿಯಲ್ಲಿ ಬದುಕುಳಿದ ಮಂಜುನಾಥ್ ರಾವ್ ಅವರ ಪತ್ನಿ ಪಲ್ಲವಿ ಆರ್. ಮತ್ತು ಅವರ ಮಗ ಅಭಿಜಯ ಅವರನ್ನು ಸಂಬಂಧಿಕರೊಂದಿಗೆ ಶಿವಮೊಗ್ಗಕ್ಕೆ ಕರೆದೊಯ್ಯಲಾಯಿತು. ರಾವ್ ಅವರ ಮೃತದೇಹವನ್ನು ಆಂಬ್ಯುಲೆನ್ಸ್ ಮೂಲಕ ತೆಗೆದುಕೊಂಡು ಹೋಗಲಾಗಿದ್ದು, ಮಧ್ಯಾಹ್ನದ ಮೊದಲು ಶಿವಮೊಗ್ಗ ತಲುಪಿದೆ.

ಭೂಷಣ್ ಅವರ ದೇಹವು ಬೆಳಿಗ್ಗೆ 5.30 ರ ಸುಮಾರಿಗೆ ಯಶವಂತಪುರದ ಮತ್ತಿಕೆರೆಯಲ್ಲಿರುವ ಅವರ ನಿವಾಸ ತಲುಪಿದೆ. ಅನಾರೋಗ್ಯದ ಕಾರಣ ಮಗನ ಸಾವಿನ ಬಗ್ಗೆ ಅವರ ವೃದ್ಧ ತಾಯಿಗೆ ಮೃತದೇಹ ಬಂದ ನಂತರವೇ ತಿಳಿಸಲಾಯಿತು. ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಭೂಷಣ್ ಅವರ ಮೃತದೇಹವನ್ನು ಮಧ್ಯಾಹ್ನದವರೆಗೆ ಸಾರ್ವಜನಿಕ ದರ್ಶನಕ್ಕೆ ಇಡಲಾಗಿದ್ದು, ನಂತರ ಅಂತಿಮ ವಿಧಿವಿಧಾನ ನೇರವೇರಲಿದೆ.ಬದುಕುಳಿದವರೊಂದಿಗೆ ' ಬಂದ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ, ಇತರರೊಂದಿಗೆ ಭಾರೀ ಭದ್ರತೆಯಲ್ಲಿ ವಿಮಾನ ನಿಲ್ದಾಣದಿಂದ ನಿರ್ಗಮಿಸಿದರು. ಸಿಐಎಸ್‌ಎಫ್ ಮತ್ತು ಸ್ಥಳೀಯ ಪೊಲೀಸರು ವಿಮಾನ ನಿಲ್ದಾಣದ ಆವರಣದಲ್ಲಿ ಮತ್ತು ಸುತ್ತಮುತ್ತ ಬಿಗಿ ಭದ್ರತಾ ವ್ಯವಸ್ಥೆಗಳನ್ನು ನಿಯೋಜಿಸಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಸೂರ್ಯ, ಬದುಕುಳಿದವರು ಮತ್ತು ಮೃತದೇಹಗಳು ಸುಗಮವಾಗಿ ಮತ್ತು ಸುರಕ್ಷಿತವಾಗಿ ಮರಳಲು ಸೇನಾ ಸಿಬ್ಬಂದಿ, ರಾಜ್ಯ ಮುಖ್ಯ ಕಾರ್ಯದರ್ಶಿ ಮತ್ತು ಕಾರ್ಯಾಚರಣೆಗೆ ಸಹಾಯ ಮಾಡಲು ಕರ್ನಾಟಕ ಸರ್ಕಾರದಿಂದ ನಿಯೋಜಿಸಲ್ಪಟ್ಟ ಐಪಿಎಸ್ ಅಧಿಕಾರಿ ಚೇತನ್ ಅವರ ಸಂಘಟಿತ ಪ್ರಯತ್ನಗಳಿಗೆ ಅಭಿನಂದಿಸಿದರು.

ಉಪಸ್ಥಿತರಿದ್ದ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ. ಸೋಮಣ್ಣ, ಬಲವಾದ ನಿರ್ಧಾರ ತೆಗೆದುಕೊಳ್ಳಲಾಗಿದೆ ಮತ್ತು ದಾಳಿಗೆ ಕಾರಣರಾದವರಿಗೆ ಪಾಠ ಕಲಿಸಲಾಗುವುದು ಎಂದು ಮಾಧ್ಯಮಗಳಿಗೆ ತಿಳಿಸಿದರು.

ಕಾಶ್ಮೀರದಲ್ಲಿ ಸಿಲುಕಿರುವ ಕರ್ನಾಟಕದ 180 ಪ್ರವಾಸಿಗರನ್ನು ಹೊತ್ತ ವಿಶೇಷ ವಿಮಾನ ಗುರುವಾರ ಬೆಳಿಗ್ಗೆ ಆಗಮಿಸಿಲಿದೆ. ಕಾಶ್ಮೀರದ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿದ ಕಾರ್ಮಿಕ ಸಚಿವ ಸಂತೋಷ್ ಲಾಡ್, ತಾವು ಸಹ ಅವರೊಂದಿಗೆ ಹಿಂತಿರುಗುವುದಾಗಿ ದೃಢಪಡಿಸಿದ್ದಾರೆ. ಕಾಶ್ಮೀರದಿಂದ ದಿ ನ್ಯೂ ಸುದ್ದಿಗಾರರ ಜೊತೆ ದೂರವಾಣಿ ಮೂಲಕ ಮಾತನಾಡಿದ ಲಾಡ್, ತಮ್ಮ ತಂಡವು ಕಾಶ್ಮೀರದಲ್ಲಿ ಸಿಲುಕಿರುವ ಕರ್ನಾಟಕದ 180 ಪ್ರವಾಸಿಗರನ್ನು ಸಂಪರ್ಕಿಸಿದೆ ಎಂದು ಹೇಳಿದರು. "ಅವರು ಬೆಂಗಳೂರಿಗೆ ಸುರಕ್ಷಿತವಾಗಿ ಮರಳಲು ನಾವು ವಿಶೇಷ ವಿಮಾನ ವ್ಯವಸ್ಥೆ ಮಾಡಿದ್ದೇವೆ" ಎಂದು ಅವರು ತಿಳಿಸಿದ್ದಾರೆ. ಅವರಲ್ಲದೆ, ಕರ್ನಾಟಕದ ಇನ್ನೂ ಕೆಲವು ಪ್ರವಾಸಿಗರು ಕಾಶ್ಮೀರದಲ್ಲಿ ಸಿಲುಕಿಕೊಂಡಿದ್ದಾರೆ ಎಂದು ಹೇಳಲಾಗಿದೆ.

ಇದಕ್ಕೂ ಮೊದಲು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಶ್ಮೀರದಲ್ಲಿ ಸಿಲುಕಿರುವ ರಾಜ್ಯದ ಎಲ್ಲಾ ಪ್ರವಾಸಿಗರನ್ನು ಸುರಕ್ಷಿತವಾಗಿ ಮರಳಿ ಕರೆತರಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಸುದ್ದಿಗಾರರಿಗೆ ತಿಳಿಸಿದ್ದರು. ಮಂಜುನಾಥ್ ಅವರ ಪತ್ನಿ ಪಲ್ಲವಿ ಮತ್ತು ಭರತ್ ಭೂಷಣ್ ಅವರ ಪತ್ನಿ ಸುಜಾತಾ ಅವರೊಂದಿಗೆ ಮುಖ್ಯಮಂತ್ರಿ ಮಾತನಾಡಿದರು.

## ಉಗ್ರರನ್ನು ಮಟ್ಟ ಹಾಕುವ ಕ್ರಮಗಳಿಗೆ ರಾಜ್ಯಸರ್ಕಾರದ ಸಂಪೂರ್ಣ ಬೆಂಬಲ: ಕೇಂದ್ರಕ್ಕೆ ಸಿದ್ದರಾಮಯ್ಯ ಭರವಸೆ



**ಬೆಂಗಳೂರು:** ಉಗ್ರರನ್ನು ಮಟ್ಟ ಹಾಕುವ ಕ್ರಮಗಳಿಗೆ ರಾಜ್ಯ ಸರ್ಕಾರದ ಸಂಪೂರ್ಣ ಬೆಂಬಲ ಇದೆ ಎಂದು ಕೇಂದ್ರ ಸರ್ಕಾರಕ್ಕೆ ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ಬೆಂಗಳೂರಿನಲ್ಲಿ ಗುರುವಾರ ಮಾತನಾಡಿದ ಅವರು, ಕಾಶ್ಮೀರದ ಪೆಹಲ್ಗಾಮನಲ್ಲಿ ಉಗ್ರರ ದಾಳಿಯಲ್ಲಿ ಮೃತಪಟ್ಟವರ ಕನ್ನಡಿಗರ ಕುಟುಂಬಕ್ಕೆ ತಲಾ 10 ಲಕ್ಷ ಪರಿಹಾರವನ್ನು ಘೋಷಿಸಲಾಗಿದೆ. ಸಂಕಷ್ಟದಲ್ಲಿರುವ ಕನ್ನಡಿಗರನ್ನು ರಕ್ಷಿಸುವುದು ಸರ್ಕಾರದ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಬೆಂಗಳೂರಿನ ಮತ್ತೀಕೆರೆಯಲ್ಲಿರುವ ಭರತ್ ಭೂಷಣ್ ಅವರ ನಿವಾಸಕ್ಕೆ ತೆರಳಿ ಅಂತಿಮ ನಮನ ಸಲ್ಲಿಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು. ಕಾಶ್ಮೀರದಲ್ಲಿ ನಡೆದ ಉಗ್ರರ ದಾಳಿಯಲ್ಲಿ ಮೃತರಾದ ಭರತ್ ಭೂಷಣ್ ಅವರಿಗೆ ಕನ್ನಡ ನಾಡಿನ ಸಮಸ್ತ ಕನ್ನಡಿಗರ ಪರವಾಗಿ ಶ್ರದ್ಧಾಂಜಲಿಯನ್ನು ಅರ್ಪಿಸಿದ ಮುಖ್ಯಮಂತ್ರಿಗಳು, ಉತ್ತಮ ಶಿಕ್ಷಣ ಪಡೆದಿದ್ದ ತರುಣರಾಗಿದ್ದ ಭರತ್ ಭೂಷಣ್ ಅವರು ಉಗ್ರರ ದಾಳಿಗೆ ಬಲಿಯಾಗಿರುವುದು ದುರದೃಷ್ಟಕರ.

## ಏ.26 ರಂದು ಸಂವಿಧಾನ ಸಂರಕ್ಷಕರ ಸಮಾವೇಶ : ಗೌಸ್‌ಮೊಹಿಯುದ್ದೀನ್



**ಚಿಕ್ಕಮಗಳೂರು:** ಸಂವಿಧಾನ ಸಂರಕ್ಷಕರ ಪಡೆ ಹೆಸರಿನಲ್ಲಿ ದೇಶಪ್ರೇಮಿಗಳ ತಂಡ ಕಟ್ಟುವ ಪ್ರಕ್ರಿಯೆಗೆ ರಾಜ್ಯ ಮಟ್ಟದಲ್ಲಿ ಚಾಲನೆ ನೀಡಲು ಏ.26 ರಂದು ದಾವಣಗೆರೆಯಲ್ಲಿ ಸಂವಿಧಾನ ಸಂರಕ್ಷಕರ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಸಮಾವೇಶ ಸ್ವಾಗತ ಸಮಿತಿಯ ರಾಜ್ಯ ಮುಖಂಡ ಗೌಸ್‌ಮೊಹಿಯುದ್ದೀನ್ ಹೇಳಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಈ ದೇಶವನ್ನು ಯಾವ ಬಲಾಢ್ಯ ಪಕ್ಷಗಳಿಂದಲೂ ರಕ್ಷಿಸಲು ಸಾಧ್ಯವಿಲ್ಲ. ನಾಗರೀಕರಾದ ನಾವೇ ಒಂದು ಪ್ರಬಲ ಸಾಮಾಜಿಕ ಶಕ್ತಿಯಾಗಿ ರೂಪುಗೊಳ್ಳಬೇಕಿದೆ. ಸಾಮಾಜಿಕ ಸ್ವಾಸ್ಥ್ಯವನ್ನು ಕಾಪಾಡಿಕೊಳ್ಳಬಲ್ಲ, ಆಳುವವರನ್ನು ಪ್ರಶ್ನಿಸಬಲ್ಲ, ಆಳ್ವಿಕೆಯನ್ನು ಬದಲಿಸಬಲ್ಲ ನಾಗರೀಕ ಶಕ್ತಿಯಾಗಿ ತಳಮಟ್ಟದಿಂದ ದೇಶದ ಮಟ್ಟದ ತನಕ ನಮ್ಮನ್ನು ನಾವು ಕಟ್ಟಿಕೊಳ್ಳಬೇಕಿದೆ. ಈ ಉದ್ದೇಶದಿಂದ ಮುಂದಿನ ಮೂರು ವರ್ಷದಲ್ಲಿ ಒಂದು ಲಕ್ಷ ಕಾರ್ಯಕರ್ತರ ಸಜ್ಜುಗೊಳಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

ಏ.26 ರಂದು ನಡೆಯಲಿರುವ ಸಮಾವೇಶದಲ್ಲಿ 10 ಸಾವಿರ ಕಾರ್ಯಕರ್ತರು ಭಾಗವಹಿಸುವ ನಿರೀಕ್ಷೆ ಇದೆ. ಜಿಲ್ಲೆಯಿಂದ ಸಹಸ್ರಾರು ಮಂದಿ ಪಾಲ್ಗೊಳ್ಳುತ್ತಿದ್ದೇವೆ.

ಸಮಾವೇಶದಲ್ಲಿ ಹಿರಿಯ ಸಾಹಿತಿ ಬರಗೂರು ರಾಮಚಂದ್ರಪ್ಪ, ಚಿತ್ರನಟ ಪ್ರಕಾಶ್‌ರಾಜ್, ಹೋರಾಟಗಾರ್ತಿ ಮೇಧಾಪಾಟ್ಕರ್, ಆರ್ಥಿಕ ತಜ್ಞ ಪರಕಾಲ ಪ್ರಭಾಕರ, ಖಾಸಿಮ್ ರಸೂಲ್ ಇಲಿಯಾಸ್, ಶಾಸಕ ಜಿಗ್ನೇಶ್ ಮೇವಾನಿ, ಬಿ.ಟಿ.ಲಲಿತಾನಾಯಕ್, ಗುರುಪ್ರಸಾದ್ ಕೆರೆಗೋಡು, ರೈತ ಮುಖಂಡರಾದ ಬಸವರಾಜಪ್ಪ, ಬಡಗಲಪುರ ನಾಗೇಂದ್ರ ಮತ್ತಿತರರು ಭಾಗವಹಿಸಲಿದ್ದಾರೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಸಂದೀಪ್, ರೀತು, ಆಶಾಸಂತೋಷ್, ಗಣೇಶ್, ಮುಸ್ಲೀಯಾರ್ ಮತ್ತಿತರರು ಇದ್ದರು.

## ಸೂರಿ ಶ್ರೀನಿವಾಸ್‌ಗೆ ಜೀಶಂಪ ರಾಜ್ಯ ಪ್ರಶಸ್ತಿ



**ಚಿಕ್ಕಮಗಳೂರು:** ಕನ್ನಡ ಜಾನಪದ ಪರಿಷತ್ತಿನ ರಾಜ್ಯ ಘಟಕದಿಂದ ಚಿಕ್ಕಮಗಳೂರು ಜಿಲ್ಲಾ ಕನ್ನಡ ಜಾನಪದ ಪರಿಷತ್ತಿನ ಗೌರವಾಧ್ಯಕ್ಷರೂ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸೂರಿ ಶ್ರೀನಿವಾಸ್ ಅವರು ಜಾನಪದ ಕ್ಷೇತ್ರದಲ್ಲಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಅವರಿಗೆ ದಶಮಾನೋತ್ಸವ ಸಂಭ್ರಮದಲ್ಲಿ ಕೊಪ್ಪ ತಾಲ್ಲೂಕಿನ ದಾಸ ಮಠದಲ್ಲಿ ರಾಜ್ಯಮಟ್ಟದ ಜೀಶಂಪ ಪ್ರಶಸ್ತಿ ನೀಡಿ, ಗೌರವಿಸಲಾಗುವುದು ಎಂದು ರಾಜ್ಯ ಕನ್ನಡ ಜಾನಪದ ಪರಿಷತ್ತಿನ ಅಧ್ಯಕ್ಷರಾದ ಜಾನಪದ ಎಸ್.ಬಾಲಾಜಿ ತಿಳಿಸಿದರು.

## ಕೆಎಸ್‌ಆರ್‌ಟಿಸಿ ಬಸ್ ಸಂಚಾರ ಸ್ಥಗಿತ : ಗ್ರಾಮಸ್ಥರಿಗೆ ತೊಂದರೆ

**ಚಿಕ್ಕಮಗಳೂರು:** ಚಂದ್ರದ್ರೋಣ ಪರ್ವತ ಶ್ರೇಣಿಯ ತಪ್ಪಲಿನಲ್ಲಿ ಬರುವ ಇನಾಂ ದತ್ತಾತ್ರೇಯ ಪೀಠ, ಅತ್ತಿಗುಂಡಿ, ಮಹಲ್, ಬಿಸಗ್ನಿಮಠ ಗ್ರಾಮಗಳಿಗೆ ಕೆಎಸ್‌ಆರ್‌ಟಿಸಿ ಬಸ್ ಸಂಚಾರ ಸ್ಥಗಿತಗೊಂಡಿ–ದ್ದು, ಇದರಿಂದ ಈ ಭಾಗದ ಗ್ರಾಮಸ್ಥರಿಗೆ ತುಂಬಾ ತೊಂದರೆಯಾಗುತ್ತಿದೆ ಎಂದು ದೂರಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿರುವ ಗ್ರಾಮಸ್ಥರು, ಈ ಹಿಂದೆ ನಮ್ಮ ಗ್ರಾಮಗಳಿಗೆ ಸರಿಯಾದ ಸಮಯಕ್ಕೆ ಸರ್ಕಾರಿ ಬಸ್ ಬರುತ್ತಿತ್ತು, ಇತ್ತೀಚಿನ ಕೆಲವು ಒಂದು ವಾರದಿಂದ ಬಸ್ ಸೇವೆಯನ್ನು ಸ್ಥಗಿತಗೊಳಿಸಿರುವುದರಿಂದ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತುಂಬಾ ಸಮಸ್ಯೆಯಾಗುತ್ತಿದೆ ಎಂದು ಹೇಳಿದ್ದಾರೆ.

ಈ ಭಾಗದ ಜನರು ತಮ್ಮ ದೈನಂದಿನ ಕೆಲಸ ಕಾರ್ಯಗಳಿಗೆ ಚಿಕ್ಕಮಗಳೂರಿಗೆ ಬರಬೇಕಾಗಿದೆ. ಬಸ್ ಸ್ಥಗಿತಗೊಂಡಿದ್ದರಿಂದ ತಮ್ಮ ಕೆಲಸ ಕಾರ್ಯಗಳು ವಿಳಂಬವಾಗುತ್ತಿವೆ. ತುರ್ತು ಸೇವೆಗಳಿಗಾಗಿ ಖಾಸಗಿ ವಾಹನಗಳಿಗೆ ಹೆಚ್ಚಿನ ಹಣ ವ್ಯಯಿಸಿ, ಬರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ನಮ್ಮ ಸಮಸ್ಯೆಗಳನ್ನು ಲಿಖಿತವಾಗಿ ಮನವಿ ಮಾಡಿಕೊಂಡರೂ ಸಹ ನಮ್ಮಗಳಿಗೆ ಸ್ಪಂದಿಸುತ್ತಿಲ್ಲ, ಬಸ್ ಎಫ್.ಸಿಗೆ ಹೋಗಿದೆ ಬರುವುದು ತುಂಬಾ ದಿನಗಳಾಗುತ್ತದೆ ಎಂದು ಸಬೂಬು ಹೇಳಿ ಕಳುಹಿಸುವುದು ಸಾಮಾನ್ಯವಾಗಿದೆ ಎಂದಿದ್ದಾರೆ.

ಜಿಲ್ಲಾಧಿಕಾರಿಗಳು ಈ ಕುಗ್ರಾಮಗಳ ಗ್ರಾಮಸ್ಥರ ಸಮಸ್ಯೆಯನ್ನು ಅರಿತು ಆದಷ್ಟು ಬೇಗ ಈ ಮೇಲಿನ ಗ್ರಾಮಗಳಿಗೆ ಕೆಎಸ್‌ಆರ್‌ಟಿಸಿ ಬಸ್ ಸಂಚಾರವನ್ನು ಆರಂಭಿಸಲು ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಸೂಚಿಸುವಂತೆ ಮನವಿ ಮಾಡಿದ್ದಾರೆ.

## ಭೂ ಅಭಿವೃದ್ಧಿ ಬ್ಯಾಂಕ್ ಸಾಲದ ಬಡ್ಡಿ ಸರ್ಕಾರವೇ ಭರಿಸಲಿದೆ : ಸಚಿವ ರಾಜಣ್ಣ



**ಚಿಕ್ಕಮಗಳೂರು:** ಈ ವರ್ಷದಿಂದ ಭೂ ಅಭಿವೃದ್ಧಿ ಬ್ಯಾಂಕ್‌ನಿಂದ ರೈತರು ಪಡೆದುಕೊಳ್ಳುವ ಮಧ್ಯಮಾವಧಿ ಸಾಲದ ಬಡ್ಡಿಯನ್ನು ಸರ್ಕಾರವೇ ಭರಿಸುವ ಬಗ್ಗೆ ತೀರ್ಮಾನವಾಗಿದೆ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ತಿಳಿಸಿದರು.

ಸಹಕಾರಿ ಕ್ಷೇತ್ರದಲ್ಲಿ 75 ವರ್ಷಗಳ ಸಾರ್ಥಕ ಸೇವೆಯನ್ನು ಸಲ್ಲಿಸಿರುವ ಸಂಗಮೇಶ್ವರಪೇಟೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಮೃತ ಮಹೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಸರ್ಕಾರ ಶೂನ್ಯ ಬಡ್ಡಿ ದರದಲ್ಲಿ ರೈತರಿಗೆ ಸಾಲ ನೀಡುತ್ತಿದೆ, ಹಾಗೆಯೇ ಮಧ್ಯಮಾವಧಿ ಸಾಲಕ್ಕೂ ಕೂಡ ಶೇ.3ರ ಬಡ್ಡಿದರದಲ್ಲಿ ಸಾಲ ನೀಡುತ್ತಿದ್ದೇವೆ. ಮನ್‌ಮೋಹನ್ ಸಿಂಗ್ ಅವರು ಪ್ರಧಾನಿಯಾಗಿದ್ದ ಸಂದರ್ಭದಲ್ಲಿ ವಾಣಿಜ್ಯ ಬ್ಯಾಂಕ್‌ಗಳಿಂದ ಹಾಗೂ ಸಹಕಾರಿ ಸಂಸ್ಥೆಗಳಿಂದ ಪಡೆದ ಸುಮಾರು 72 ಸಾವಿರ ಕೋಟಿ ರೂ.ಗಳ ಸಾಲಮನ್ನಾ ಮಾಡಿದ್ದರು ಎಂದು ತಿಳಿಸಿದರು.

ರೈತರು ಕೊಳ್ಳುವ ವಸ್ತುಗಳು ಎಲ್ಲವೂ ದುಬಾರಿಯಾಗಿದೆ, ಆದರೆ ರೈತರು ಉತ್ಪಾದಿಸುವ ವಸ್ತುಗಳ ಮೇಲೆ ಖರೀದಿ ಮಾಡುವವರೇ ದರ ನಿಗದಿಪಡಿಸುತ್ತಿದ್ದಾರೆ. ಇದು ನಮ್ಮ ದೇಶದಲ್ಲಿರುವ ವಿಪರ್ಯಾಸ ಎಂದರು.

ಎಲ್ಲಿಯವರೆಗೆ ರೈತ ತಾನು ಬೆಳೆದಿರುವ ಫಸಲಿಗೆ ತನ್ನದೇ ಆದ ದರವನ್ನು ನಿಗದಿಪಡಿಸಿ ಮಾರಾಟ ವ್ಯವಸ್ಥೆ ಬರುವುದಿಲ್ಲವೊ ಅಲ್ಲಿಯವರೆಗೂ ರೈತ ದುಸ್ಥಿತಿಗೆ ಹೋಗುತ್ತಾನೆ. ಆ ದೃಷ್ಟಿಯಲ್ಲಿ ಸರ್ಕಾರ ಇರಬಹುದು, ಸಂಘ–ಸಂಸ್ಥೆಗಳು ಇರಬಹುದು, ಯಾರು ಏನೇ ನೆರವು ನೀಡಿದರೂ ಅದು ಕಡಿಮೆಯೇ ಎಂದು ವಿಶ್ಲೇಷಿಸಿದರು.

75 ವರ್ಷಗಳ ಸೇವೆ ಸಲ್ಲಿಸಿರುವ ಈ ಸಂಸ್ಥೆಯಲ್ಲಿ ಯಾವುದೇ ಅಪ್ರಾಮಾಣಿಕತೆಗೆ, ಅದಕ್ಷತೆಗೆ ಎಡೆ–ಕೊಡದೆ ಕಾರ್ಯನಿರ್ವಹಿಸಿರುವ ನೌಕರ ವರ್ಗದವರಿದ್ದಾರಲ್ಲ ಅವರ ಪಾತ್ರ ಈ ಸಂಸ್ಥೆಯ ಬೆಳವಣಿಗೆಯಲ್ಲಿ ಬಹಳ ದೊಡ್ಡದು ಎಂದು ಸಚಿವರು ಬಣ್ಣಿಸಿದರು.

ಸಹಕಾರಿ ಆಂದೋಲನವೆಂದರೆ ಅದು ಸಹಕಾರಿ ಆಂದೋಲನವಲ್ಲ, ಇದು ಜನರ ಆಂದೋಲನ. ಸಂಸ್ಥೆಗಳನ್ನು ಪ್ರಾರಂಭ ಮಾಡಿ ಅದನ್ನು ಮುನ್ನಡೆಸುವುದು ಜನರೇ ಆಗಿರುವುದರಿಂದ ಇದು ಸಹಕಾರಿ ಆಂದೋಲನವೆಂದರೆ ಸೂಕ್ತವಾಗದು. ಇದು ಜನರ ಆಂದೋಲನ. ಸಂಘಗಳು ತಪ್ಪು ದಾರಿಗೆ ಹೋದಾಗ ಸರಿದಾರಿಗೆ ತರುವುದು ಮಾತ್ರ ಸರ್ಕಾರದ ಕೆಲಸ ಎಂದು ಹೇಳಿದರು.

1949 ರಲ್ಲಿ ಅಚ್ಚಯ್ಯಗೌಡರ ನೇತೃತ್ವದಲ್ಲಿ ಸ್ಥಾಪನೆಯಾದ ಸಂಸ್ಥೆ ಇದು. ಅಂದಿನ ಕಾಲಘಟ್ಟದಲ್ಲಿ ಅಷ್ಟಾಗಿ ಅವಕಾಶಗಳು ದುರ್ಲಭವಾಗಿದ್ದ ಕಾಲದಲ್ಲಿ ಆರಂಭವಾಗಿ ಇದೀಗ 75 ಸಂವತ್ಸರಗಳನ್ನು ಸಾರ್ಥಕವಾಗಿ ನಡೆದುಕೊಂಡು ಬಂದಿದೆ ಎಂದರು.

ಶೃಂಗೇರಿ ಕ್ಷೇತ್ರದ ಶಾಸಕ ಟಿ.ಡಿ.ರಾಜೇಗೌಡ ಮಾತನಾಡಿ, ಹಿಂದೆ ಜವಾಹರ್ ಲಾಲ್ ನೆಹರೂ ಹಾಗೂ ಇಂದಿರಾಗಾಂಧಿಯವರ ದೂರದೃಷ್ಟಿಯಿಂದ ಕೃಷಿಕರನ್ನು ಖಾಸಗಿ ಲೇವಾದೇವಿಗಾರರಿಂದ ಹೊರ ತರುವ ಪ್ರಯತ್ನ ನಡೆಸಿದರು. ಅದರ ಪರಿಣಾಮವಾಗಿ ನಮ್ಮ ಆಹಾರದ ಕೊರತೆ ನೀಗಿ ವಿದೇಶಗಳಿಗೂ ನಾವು ರಫ್ತು ಮಾಡುವ ಮಟ್ಟಕ್ಕೆ ಬೆಳೆದಿದ್ದೇವೆ. ಇದಕ್ಕೆ ಕಾರಣ ಸಹಕಾರಿ ಕ್ಷೇತ್ರ ಎಂದು ಹೇಳಿದರು. ಅಚ್ಚಯ್ಯಗೌಡರ ಅಧ್ಯಕ್ಷತೆಯಲ್ಲಿ ಆರಂಭವಾದ ಈ ಸಂಘ ಇಂದು 180 ಕೋಟಿ ರೂ.ಗಳ ವಹಿವಾಟು ನಡೆಸುತ್ತಿದೆ. ಸ್ವಂತ ಬಂಡವಾಳದಲ್ಲಿ ಸುಮಾರು ಎರಡೂವರೆ ಕೋಟಿ ರೂ. ವೆಚ್ಚದಲ್ಲಿ ಗೋದಾಮನ್ನು ಕೂಡ ನಿರ್ಮಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಹಕಾರಿ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸಲಾಯಿತು. ಸಂಘದ ಅಧ್ಯಕ್ಷ ಕೆ.ಎನ್.ಚಂದ್ರೇಗೌಡರ ಅಧ್ಯಕ್ಷತೆಯಲ್ಲಿ ನಡೆದ ಈ ಸಮಾರಂಭದಲ್ಲಿ ಮಾಜಿ ವಿಧಾನ ಪರಿಷತ್ ಸದಸ್ಯರಾದ ಮಂಜುನಾಥ್, ಗಾಯತ್ರಿ ಶಾಂತೇಗೌಡ, ಸಂಘದ ಉಪಾಧ್ಯಕ್ಷ ಜಯರಾಮ್, ಟಿಎಪಿಸಿಎಂಎಸ್ ಅಧ್ಯಕ್ಷ ಮಂಜುನಾಥ್, ದೇವದಾನ ಗ್ರಾ.ಪಂ. ಅಧ್ಯಕ್ಷ ಕೆ.ಜಿ.ಸಂಪತ್, ಬಿದರೆ ಗ್ರಾ.ಪಂ. ಅಧ್ಯಕ್ಷ ಸುರೇಶ್‌ಗೌಡ ಮತ್ತಿತರರು ಇದ್ದರು.

## ಯುವಶಕ್ತಿಯೇ ರಾಷ್ಟ್ರದ ಅಮೂಲ್ಯ ಸಂಪತ್ತು : ಸಾಹಿತಿ ಚಟ್ನಳ್ಳಿ ಮಹೇಶ್ ಅಭಿಮತ



**ಜಾವಗಲ್:** ವನ ಸಂಪತ್ತು, ವನ್ಯಜೀವಿ ಸಂಪತ್ತು, ಜ್ಞಾನ ಸಂಪತ್ತು, ಖನಿಜ ಸಂಪತ್ತು, ಧರ್ಮ ಸಂಪತ್ತು, ಹೀಗೆ ಅಮೋಘವಾದ ನಿಸರ್ಗ ಸಹಜವಾದ ಹತ್ತು ಹಲವು ಕೊಡುಗೆಗಳಿಂದ ಸಂಪತ್ಭರಿತವಾದ ನಮ್ಮ ದೇಶಕ್ಕೆ ಬಲಯುತ ಮತ್ತು ಸಾತ್ವಿಕ ಯುವಶಕ್ತಿಯೂ ಕೂಡ ರಾಷ್ಟ್ರ ಕಲ್ಯಾಣಕ್ಕೆ ಅತ್ಯಗತ್ಯವಾದ ಸಂಪತ್ಸಾಧನ ಎಂದು ಸಾಹಿತಿ ಚಟ್ನಳ್ಳಿ ಮಹೇಶ್ ತಿಳಿಸಿದರು.

ಜಾವಗಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜ್ ವಿದ್ಯಾರ್ಥಿಗಳು ಸಮೀಪದ ಎಸ್, ಡಿಗ್ಗೇನಹಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಎನ್.ಎಸ್.ಎಸ್. ಶಿಬಿರದಲ್ಲಿ "ಗ್ರಾಮೀಣ ಭಾರತವೇ ನೈಜ ಭಾರತ" ಎಂಬ ವಿಷಯದ ಮೇಲೆ ಪ್ರಧಾನ ಉಪನ್ಯಾಸ ನೀಡಿ, ಕಟ್ಟುವ ಕ್ರಿಯೆಗೆ ಯುವ ಸಮೂಹವನ್ನು ಸದ್ಬಳಕೆ ಮಾಡಿಕೊಂಡು ಗ್ರಾಮೋದ್ಧಾರದ ಮೂಲಕ ದೇಶೋದ್ಧಾರ ಮಾಡುವ ಬಹುದೊಡ್ಡ ಜವಾಬ್ದಾರಿ ಸರ್ಕಾರ, ಸಂಘ–ಸಂಸ್ಥೆ, ಶಿಕ್ಷಣ, ಆಡಳಿತ ಮತ್ತು ಸಾರ್ವಜನಿಕ ವಲಯದ ಆದ್ಯತೆಯ ಸಂಕಲ್ಪ ಆಗಬೇಕು ಎಂದು ಹೇಳಿದರು.

ಹಿರಿಯರು ಮತ್ತು ಕಿರಿಯ ಪೀಳಿಗೆಯ ನಡುವೆ ಆಲೋಚನೆ ಹಾಗೂ ಅನುಷ್ಠಾನಕ್ಕೆ ಸಂಬಂಧಿಸಿದಂತೆ ವಿಭಿನ್ನತೆ ಮತ್ತು ವ್ಯತ್ಯಾಸಗಳು ಹೆಚ್ಚಾಗುತ್ತಿದ್ದು, (ಜನರೇಷನ್ ಗ್ಯಾಪ್) ಪ್ರಗತಿಯ ಗುರಿ ತಲುಪುವ ಬದಲು ಸಂಘರ್ಷಕ್ಕೆ ಎಡೆಮಾಡಿ ಕೊಡುತ್ತಿರುವುದು ವಿಷಾದದ ಸಂಗತಿ ಎಂದು ಹೇಳಿದ ಅವರು, ಹಿರಿಯರ ಉತ್ತಮ ಮಾರ್ಗದರ್ಶನದ ತಳಪಾಯ ಹಾಕಿ, ಕಿರಿಯರ ಶ್ರಮ ಮತ್ತು ವಿವೇಕವನ್ನು ವಿನಿಯೋಗಿಸಿ ಸಾಹಸದ ಸೌಧ ನಿರ್ಮಾಣ ಮಾಡಿದಾಗ ನಮ್ಮೀ ರಾಷ್ಟ್ರ ಅಭ್ಯುದಯದ ಗೌರಿಶಂಕರದ ಎತ್ತರಕ್ಕೆ ಏರುತ್ತದೆ ಎಂದು ಅಭಿಪ್ರಾಯಪಟ್ಟರು.

ಮೀಸೆ ಬಂದಾಗ ದೇಶ ಕಾಣದು, 20ರ ಬುದ್ಧಿ 70ರ ತನಕ ಎನ್ನುವ ನಮ್ಮ ಜಾನಪದದ ನಾಣ್ಣುಡಿಯಂತೆ ದುರ್ನಡತೆ, ದುರಾಚಾರ, ಅವಿಧೇಯತೆ, ಆಲಸ್ಯ, ಮತ್ಸರ, ಕೋಪ ತಾಪಗಳಿಂದ ದೂರ ಇದ್ದು, ವಾತ್ಸಲ್ಯ, ದಯೆ, ಪರೋಪಕಾರ, ನಿಸರ್ಗ ಪ್ರೀತಿ, ದೇಶ ನಿಷ್ಠೆ ಇಂತಹ ಮಹಾನ್ ಗುಣಗಳಿಂದ ತುಂಬಿದ ಗಣಿಯಾಗಿ ನಮ್ಮ ಯುವಶಕ್ತಿ ಪರಿವರ್ತನೆ ಆಗಬೇಕು ಎಂದು ಶ್ರೀ ಮಹೇಶ್ ಆಶಿಸಿದರು.

ಇದನ್ನೇ 12ನೇ ಶತಮಾನದಲ್ಲಿ ಅಣ್ಣ ಬಸವಣ್ಣ ಹೇಳಿದ್ದು, "ದುರ್ವ್ಯಸನಿ ದುರಾಚಾರಿ ಎಂದು ಎನಿಸದಿರಯ್ಯ, ಲಿಂಗ ವ್ಯಸನಿ ಜಂಗಮ ಪ್ರೇಮಿ ಎಂದು ಎನಿಸಯ್ಯ, " "ಲಿಂಗ ಮತ್ತು ಜಂಗಮ ಇಲ್ಲಿ ಜಾತಿ ಸೂಚಕ ಅಲ್ಲ, ಅವು ನೀತಿ ಸೂಚಕವಾಗಿದ್ದು, ಜಾತಿ, ಮತ, ಕುಲ, ಪ್ರಾಂತ್ಯ, ಪಂಗಡಗಳ ಕಪಿಮುಷ್ಠಿಯಿಂದ ಹೊರಬಂದು ಪ್ರೀತಿ, ನೀತಿ, ಸಾಮರಸ್ಯ, ಸಂಭಂದಗಳ ಭಾಂಧವ್ಯದ ಮೇಲೆ ಬದುಕುವ ಕಲೆ ಕರಗತವಾದರೆ ನಮ್ಮ ನಾಡು ನೆಮ್ಮದಿಯ ಬೀಡು ಆಗುತ್ತದೆ ಎಂದು ಹೇಳಿದರು.

ಡಿ.ವಿ.ಜಿ. ಯವರ ಕಗ್ಗದ ನುಡಿಯಂತೆ "ಕಲೆಗಳಲ್ಲಿ ಪರಮ ಕಲೆ ಜೀವನದ ಲಲಿತ ಕಲೆ, ಕಲಿಸಲು ಅದ ಅಳವಲ್ಲ ಬಾಹ್ಯ ಭೋಧನೆಯಿಂದ, ಒಲಿದು ಒಲಿಸಿಕೊಳ್ಳುವ ಆ ಲೌಕಿಕನಯದ ಕಲೆ ನೀ ತಿಳಿಯುವುದು ಒಳಹದದಿಂದ ಮಂಕುತಿಮ್ಮ". ನಮ್ಮ ಹಳ್ಳಿಯ ಜನ ಶಾಲಾ ಕಾಲೇಜ್ ಮೆಟ್ಟಲು ಏರದಿದ್ದರು ಜೀವನಾನುಭವದ ಮೂಲಕ ಇಂತಹ ಒಳ ಹದವನ್ನು ನೆಲೆಗೊಳಿಸಿ ಬದುಕಿನ ಬೆಲೆಯನ್ನು ಹೆಚ್ಚಿಸಿದ ಸಜ್ಜನ ಸಂಪನ್ನರ ಆಗರವೇ ನಮ್ಮ ಹಳ್ಳಿಗಳು ಎಂದು ಬಣ್ಣಿಸಿದರು.

ಇಂತಹ ಹಳ್ಳಿಯ ಬಳ್ಳಿಯಲ್ಲಿ ಹರಳಿರುವ ಸುಗಂಧದ ಸೊಬಗನ್ನು ಸವಿಯಲು ಓದು ಬರಹ ಕಲಿತವರೆಂದು ಬೀಗುವ ಬದಲು ನೆಲಮುಖಿಯಾಗಿ ಬಾಗುವುದನ್ನು ಕಲಿತಾಗ ಮಾತ್ರ ಈ ಗ್ರಾಮೀಣ ಬದುಕಿನ ನೈಜ ಚಿತ್ರಣ ನಮ್ಮ ನಿಮ್ಮೆಲ್ಲರ ಅನುಭವದ ಸಾಮಗ್ರಿ ಆಗುತ್ತದೆ ಎಂದು ಹಲವು ಉದಾಹರಣೆಗಳ ಮೂಲಕ ವಿವರಿಸಿ, ನಮ್ಮೀ ಯುವ ಜನ ಹೇಡಿ, ಕೇಡಿ, ರೌಡಿ, ಚಾಡಿ, ಪೀಡೆಗಳು ಆಗಬಾರದು, ಬದಲಾಗಿ ರಾಷ್ಟ್ರ ನಿರ್ಮಾಣದ ಜೀವನಾಡಿಗಳು ಆಗಬೇಕೆಂದು ಶ್ರೀ ಚಟ್ನಳ್ಳಿ ತಿಳಿಸಿದರು.

ಅರಸೀಕೆರೆ ತಹಸೀಲ್ದಾರ್ ಸಂತೋಷಕುಮಾರ್, ಮಾಜಿ ಪ್ರಧಾನರಾದ ಕಲ್ಲಳ್ಳಿ ನಾಗರಾಜ್, ಗ್ರಾಮದ ಪ್ರಮುಖರಾದ ರಾಜ್‌ಶೇಖರ್, ಕಾಲೇಜ್‌ನ ಉಪನ್ಯಾಸಕ ಹಾಗೂ ವಿದ್ಯಾರ್ಥಿಗಳು ಮತ್ತು ನೂರಾರು ಗ್ರಾಮಸ್ಥರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

## ಉಗ್ರರು ಯಾವುದೇ ಜಾತಿ ಧರ್ಮಕ್ಕೆ ಸೇರಿದವರಾಗಲಿ ಅವರನ್ನ ಮಟ್ಟ ಹಾಕಬೇಕು, ರಾಜ್ಯದಲ್ಲಿರುವ ವಿದೇಶಿಗರ ಬಗ್ಗೆ ನಿಗಾ: ಸಿಎಂ ಸಿದ್ದರಾಮಯ್ಯ



**ಚಾಮರಾಜನಗರ:** ವಿಶೇಷ ಕ್ಯಾಬಿನೆಟ್ ಸಭೆ ಹಿನ್ನೆಲೆ ಚಾಮರಾಜನಗರಕ್ಕೆ ಬಂದಿರುವ ಸಿಎಂ ಸಿದ್ದರಾಮಯ್ಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಕಾಶ್ಮೀರದ ಪಹಲ್ಗಾಮ್ ಉಗ್ರ ದಾಳಿಯ ಘಟನೆಯನ್ನು ಖಂಡಿಸಿ, ಉಗ್ರರು ಯಾವುದೇ ಜಾತಿ ಧರ್ಮಕ್ಕೆ ಸೇರಿದವರಾಗಲಿ ಅವರನ್ನ ಮಟ್ಟ ಹಾಕಬೇಕು ಎಂದಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಅವಧಿ ಮೀರಿ ನೆಲೆಸಿರುವ ವಿದೇಶಿಗರ ಬಗ್ಗೆ ಎಚ್ಚರಿಕೆ ವಹಿಸಲು ಗೃಹ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದರು.

ಈ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಅವರು, ಉಗ್ರರು ಎಲ್ಲೇ ಇರಲಿ ಅವರನ್ನ ಬೆಳೆಯಲಿಕ್ಕೆ ಅವಕಾಶ ಕೊಡಬಾರದು.

ಅಮಾನಿವಾಯ ಕೃತ್ಯ ನಡೆದಿದೆ. ಇದನ್ನ ತೀವ್ರವಾಗಿ ಖಂಡಿಸುತ್ತೇನೆ. ಹಿಂದೆ ಪುಲ್ವಾಮ ಘಟನೆ ನಡೆದಿತ್ತು, ಇದರಿಂದ ಎಚ್ಚರಿಕೆಯಿಂದ ಇರಬೇಕಿತ್ತು. ಸ್ವಲ್ಪವೂ ವಿಶ್ರಮಿಸಬಾರದಿತ್ತು. ಆದರೆ ಕೇಂದ್ರ ಸರ್ಕಾರದ ಇಂಟಲಿಜೆನ್ಸ್ ವೈಫಲ್ಯ ಇದೆ ಅನ್ಸುತ್ತೆ. ಘಟನೆಯಾದ ಬಳಿಕ ಕ್ರಮ ತೆಗೆದುಕೊಳ್ಳುವುದು ಬೇರೆ. ಮೊದಲೇ ಕ್ರಮ ಕೈಗೊಳ್ಳುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡಬೇಕಿತ್ತು ಎಂದಿದ್ದಾರೆ.

ಪುಲ್ವಾಮ ದಾಳಿಯಲ್ಲಿ 40 ಸೈನಿಕರು ಜೀವ ತೆತ್ತಿದ್ದಾರೆ. ಈ ರೀತಿ ದಾಳಿ ಮತ್ತೊಮ್ಮೆ ನಡೆಯದಂತೆ ನೋಡಿಕೊಳ್ಳಬೇಕು.

## ಗೃಹಜ್ಯೋತಿ ಯೋಜನೆ ಸಮರ್ಪಕ ಪೂರೈಕೆಗೆ ಮಲ್ಲೇಶ್‌ಸ್ವಾಮಿ ಸೂಚನೆ



**ಚಿಕ್ಕಮಗಳೂರು:** ಗೃಹಜ್ಯೋತಿ ಯೋಜನೆಯಡಿ ಎಲ್ಲಾ ಫಲಾನುಭವಿಗೂ ಅನ್ಯಾಯವಾದದಂತೆ ಪ್ರತಿ ಕುಟುಂಬಕ್ಕೂ ಸಮರ್ಪಕ ವಿದ್ಯುತ್ ಪೂರೈಕೆ ಆಗಬೇಕೆಂದು ಮೆಸ್ಕಾಂ ಅಧಿಕಾರಿಗಳಿಗೆ ಗ್ಯಾರಂಟಿ ಪ್ರಾಧಿಕಾರದ ತಾಲೂಕು ಅಧ್ಯಕ್ಷರಾದ ಮಲ್ಲೇಶ್ ಸ್ವಾಮಿ ಸೂಚಿಸಿದರು.

ನಗರದ ಮೆಸ್ಕಾಂ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಮೆಸ್ಕಾಂ ಜನಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು, ಈ ಯೋಜನೆಯು ಪ್ರತಿಯೊಬ್ಬ ಮಧ್ಯಮ ವರ್ಗದ ಹಾಗೂ ಕೆಳವರ್ಗದ ಜನರ ಸಂಜೀವಿನಿಯಾಗಿದ್ದು, ಈ ಯೋಜನೆಯನ್ನು ನಮ್ಮ ರಾಜ್ಯ ಕಾಂಗ್ರೆಸ್ ಸರ್ಕಾರವು ಬಹಳ ಸದುದ್ದೇಶದಿಂದ ಸಾರ್ವಜನಿಕರ ಬಳಕೆಗೆ ರೂಪಿಸಲಾಗಿದೆ ಈ ಯೋಜನೆಯನ್ನು ಮೆಸ್ಕಾಂ ಅಧಿಕಾರಿಗಳು ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಸಮರ್ಪಕವಾಗಿ ನೀಡಬೇಕು ಎಂದು ಸಲಹೆ ನೀಡಿದರು.

ಗೃಹಜ್ಯೋತಿ ಯೋಜನೆಯಲ್ಲಿ ಈವರೆಗೂ ನಮ್ಮ ತಾಲೂಕು ಉತ್ತಮ ಪ್ರಗತಿಯನ್ನು ಕಂಡಿದ್ದು, ಮುಂದಿನ ದಿನಗಳಲ್ಲಿಯೂ ಸಹ ಈ ಯೋಜನೆ ವ್ಯಾಪ್ತಿಗೆ ಒಳಪಡದ ಫಲಾನುಭವಿಗಳನ್ನು ಈ ಯೋಜನೆಗೆ ಸೇರಿಸುವ ಕೆಲಸವನ್ನು ಮಾಡಲಾಗುವುದು ಮತ್ತು ಈ ಯೋಜನೆಯನ್ನು ತಾಲೂಕಿನ ಪ್ರತಿಯೊಂದು ಕುಟುಂಬವು ಸಮರ್ಪಕವಾಗಿ ಪಡೆಯುವಂತೆ ಕಾಳಜಿ ವಹಿಸಲಾಗುವುದು ಎಂದರು. ಅಲ್ಲದೆ ತಾಲೂಕಿನ ಪ್ರತಿ ಗ್ರಾಮಕ್ಕೆ ವಿದ್ಯುತ್ ಪೂರೈಕೆ, ಬೀದಿ–ದೀಪ ಅಳವಡಿಕೆ, ವಿದ್ಯುತ್ ಬಲ್ಬ್ ಅಳವಡಿಕೆ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದ್ದು, ಆದಷ್ಟು ಬೇಗ ಈ ಸಮಸ್ಯೆ ಬಗೆಹರಿಸಲಾಗುವುದು ಎಂಬ ಭರವಸೆ ನೀಡಿದರು.

ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರು ಮಾತನಾಡಿ, ತಮ್ಮ ತಮ್ಮ ಗ್ರಾಮಗಳಲ್ಲಿ ಅಂದರೆ ತಾಲೂಕಿನ ವ್ಯಾಪ್ತಿಗೆ ಸೇರುವ ಹಲವು ಗ್ರಾಮಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಾಸವಿದ್ದು, ಕೂಡಲೇ ಅಧಿಕಾರಿಗಳು ಈ ಬಗ್ಗೆ ಗಮನ ವಹಿಸಿ ಸಮರ್ಪಕ ವಿದ್ಯುತ್ ಪೂರೈಕೆಯನ್ನು ಮಾಡಬೇಕು ಎಂದು ಆಗ್ರಹಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ತಾಲೂಕು ಗ್ಯಾ–ರೆಂಟಿ ಯೋಜನೆಯ ಪ್ರಾಧಿಕಾರದ ಉಪಾಧ್ಯಕ್ಷರಾದ ಉಪ್ಪಳ್ಳಿಯ ಅನ್ಸರ್ ಅಲಿಖಾನ್ ಅವರು ಸಮರ್ಪಕ ವಿದ್ಯುತ್ ಪೂರೈಕೆಗೆ ಅಧಿಕಾರಿಗಳಿಗೆ ಸೂಚಿಸಲಾಗಿದೆ.

## ಬೆಂಗಳೂರು: ಅನುತ್ತೀರ್ಣವಾಗುವ ಭಯ– ಪಿಯು ಫಲಿತಾಂಶಕ್ಕೆ ಕೆಲವೇ ಗಂಟೆಗಳ ಮೊದಲು ವಿದ್ಯಾರ್ಥಿನಿ ಆತ್ಮಹತ್ಯೆ

**ಬೆಂಗಳೂರು:** ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅನುತ್ತೀರ್ಣವಾಗುವ ಭಯದಿಂದ ಫಲಿತಾಂಶ ಪ್ರಕಟವಾಗುವ ಕೆಲವೇ ಗಂಟೆಗಳ ಮೊದಲು 17 ವರ್ಷದ ದ್ವಿತೀಯ ಪಿಯು ವಿದ್ಯಾರ್ಥಿನಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಹೇಳಲಾಗಿದೆ.ದ್ವಿತೀಯ ಪಿಯು ಪರೀಕ್ಷಾ ಫಲಿತಾಂಶ ಪ್ರಕಟವಾಗುವ ಕೆಲವೇ ಗಂಟೆಗಳ ಮೊದಲು ಮಂಗಳವಾರ ಬೆಳಗ್ಗೆ 6 ಗಂಟೆ ಸುಮಾರಿಗೆ ವಿದ್ಯಾರಣ್ಯಪುರ ಪೊಲೀಸ್ ಠಾಣೆ ವ್ಯಾಪ್ತಿಯ ತಿಂಡ್ಲು ಎಂಬಲ್ಲಿ ನಡೆದಿದೆ. ಸಪ್ತಗಿರಿ ಲೇಔಟ್ ನಿವಾಸಿಯಾಗಿರುವ ವಿದ್ಯಾರ್ಥಿನಿ ತನ್ನ ಅಪಾರ್ಟ್‌ಮೆಂಟ್ ನ ಟೆರೇಸ್ನಿಂದ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎನ್ನಲಾಗಿದೆ. ಆಕೆಯನ್ನು ತಕ್ಷಣ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಆದ–ರೆ ಬೆಳಗ್ಗೆ 9 ಗಂಟೆ ಸುಮಾರಿಗೆ ಆಕೆ ಸಾವನ್ನಪ್ಪಿದ್ದಾಳೆ. ಮೃತ ವಿದ್ಯಾರ್ಥಿನಿ ತಂದೆ ಉದ್ಯಮಿಯಾಗಿದ್ದು ಆಂಧ್ರಪ್ರದೇಶ ಮೂಲದರು. ಅವಳು ಸಿಇಟಿ ಮತ್ತು ಇತರ ಪರೀಕ್ಷೆಗಳಿಗೆ ಅಧ್ಯಯನ ಮಾಡಲು ಟೆರೇಸ್ಗೆ ಹೋಗಿದ್ದಳು ಎಂದು ಪೋಷಕರು ತಿಳಿಸಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ. ಎಂಎಸ್ ರಾಮಯ್ಯ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಯಿತು.ಪೊಲೀಸರ ಪ್ರಕಾರ, ಪರೀಕ್ಷೆಯಲ್ಲಿ ಕಡಿಮೆ ಅಂಕ ಬರಬಹುದೆಂದು ತನ್ನ ಪೋಷಕರ ಬಳಿ ಆತಂಕ ವ್ಯಕ್ತ ಪಡಿಸಿದ್ದಳು, ಆದರೂ ಯಾವುದೇ ಡೆತ್ ನೋಟ್ ಕಂಡುಬಂದಿಲ್ಲ. ವಿದ್ಯಾರಣ್ಯಪುರ ಪೊಲೀಸರು ಅಸ್ವಾಭಾವಿಕ ಸಾವಿನ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

## ಪಕ್ಷದ ಹಲವಾರು ನಾಯಕರು ಕೆಪಿಸಿಸಿ ಹುದ್ದೆ ರೇಸ್ ನಲ್ಲಿದ್ದಾರೆ: ಸಚಿವ ಸತೀಶ್ ಜಾರಕಿಹೊಳಿ

**ಬೆಳಗಾವಿ:** ಕೆಪಿಸಿಸಿ ಉನ್ನತ ಹುದ್ದೆಗೆ ನಾನೂ ಸೇರಿದಂತೆ ಇನ್ನೂ ಹಲವಾರು ನಾಯಕರು ಸ್ಪರ್ಧೆಯಲ್ಲಿದ್ದಾರೆಂದು ಸಚಿವ ಸತೀಶ್ ಜಾರಕಿಹೊಳಿಯವರು ಹೇಳಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ನಾನೊಬ್ಬನೇ ಅಲ್ಲ ಇನ್ನೂ ಹಲವಾರು ನಾಯಕರು ಸ್ಪರ್ಧೆಯಲ್ಲಿದ್ದಾರೆ. ಆದರೆ, ಈ ಬಗ್ಗೆ ಪಕ್ಷದ ಹೈಕಮಾಂಡ್ ಸೂಕ್ತ ಸಮಯಕ್ಕೆ ನಿರ್ಧಾರ ತೆಗೆದುಕೊಳ್ಳುತ್ತದೆ ಎಂದು ಹೇಳಿದರು.ಬೆಲೆ ಏರಿಕೆ ಕುರಿತು ಬಿಜೆಪಿ ನಡೆಸುತ್ತಿರುವ ಪ್ರತಿಭಟನೆ ಕುರಿತು ಪ್ರತಿಕ್ರಿಯಿಸಿದ ಅವರು, ಬಿಜೆಪಿ ಅಧಿಕಾರದಲ್ಲಿದ್ದಾಗಲೂ ವಿವಿಧ ವಸ್ತುಗಳ ಬೆಲೆಗಳು ಏರಿದ್ದವು. ಆದರೆ, ಇದೀಗ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವುದು ಸರಿಯಲ್ಲ ಎಂದು ತಿಳಿಸಿದರು. ಇದೇ ವೇಳೆ ಹಾಲಿನ ಬೆಲೆ ಏರಿಕೆಯನ್ನು ಸಮರ್ಥಿಸಿಕೊಂಡ ಅವರು, ರೈತರಿಗೆ ಲಾಭ ಮಾಡುವ ಸಲುವಾಗಿ ಸರ್ಕಾರ ದರ ಏರಿಕೆ ಮಾಡಿದೆ. ವಿದ್ಯುತ್ ದರ ಏರಿಕೆಯ ಬಗ್ಗೆ ವಿದ್ಯುತ್ ನಿಯಂತ್ರಣ ಪ್ರಾಧಿಕಾರವು ನಿರ್ಧಾರ ತೆಗೆದುಕೊಳ್ಳಲಿದ್ದು, ಪ್ರತಿ ಎರಡು ಮೂರು ವರ್ಷಗಳಿಗೊಮ್ಮೆ ದರ ಏರಿಕೆ ಮಾಡುತ್ತದೆ ಎಂದು ಹೇಳಿದರು.ಬಿಜೆಪಿ ಅಥವಾ ಕಾಂಗ್ರೆಸ್ ಯಾವುದೇ ಪಕ್ಷ ಅಧಿಕಾರದಲ್ಲಿದ್ದರೂ ವಿದ್ಯುತ್ ದರಗಳ ಹೆಚ್ಚಳವು ನಿಯಂತ್ರಣ ಪ್ರಾಧಿಕಾರದ ಶಿಫಾರಸುಗಳ ಆಧಾರದ ಮೇಲೆ ಯಾವಾಗಲೂ ಸಂಭವಿಸಿದೆ. ಇತ್ತೀಚೆಗೆ, ಮೆಟ್ರೋ ಟಿಕೆಟ್ ಬೆಲೆಗಳನ್ನು ಸಹ ಹೆಚ್ಚಿಸಲಾಗಿದೆ. ಬಿಜೆಪಿ ಈ ವಿಷಯಗಳನ್ನು ರಾಜಕೀಯಗೊಳಿಸಬಾರದು ಎಂದು ಹೇಳಿದರು

## ಮೇ 5 ರಂದು ಜಿಲ್ಲಾ ಮಟ್ಟದ ದಿಶಾ ಸಮಿತಿ ಸಭೆ

**ಬಳ್ಳಾರಿ:** ಜಿಲ್ಲಾ ಪಂಚಾಯತ್ ವತಿಯಿಂದ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ "ದಿಶಾ" ಸಮಿತಿಯ ದ್ವಿತೀಯ ತ್ರೈಮಾಸಿಕ ಸಭೆಯನ್ನು ಮೇ 05 ರಂದು ಬೆಳಿಗ್ಗೆ 10 ಗಂಟೆಗೆ ಸಂಡೂರು ತಾಲ್ಲೂಕಿನ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದ ಸಭಾಂಗಣದಲ್ಲಿ ನಡೆಸಲು ನಿಗದಿಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಹಾಗೂ ದಿಶಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಮಹಮ್ಮದ್ ಹ್ಯಾರೀಸ್ ಸುಮ್ಮೈರ್ ಅವರು ತಿಳಿಸಿದ್ದಾರೆ.

ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಜಿಲ್ಲಾ ಮಟ್ಟದ ದಿಶಾ ಸಮಿತಿಯ ಅಧ್ಯಕ್ಷರೂ ಆದ ಈ.ತುಕಾರಾಂ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಸಭೆಗೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಅಗತ್ಯಪೂರ್ಣ ಮಾಹಿತಿಯೊಂದಿಗೆ ತಪ್ಪದೇ ಹಾಜರಾಗಬೇಕು ಎಂದು ಅವರು ತಿಳಿಸಿದ್ದಾರೆ.

**ಅಹವಾಲು ಸ್ವೀಕಾರ:** ಮೇ 05 ರಂದು ಬೆಳಿಗ್ಗೆ 09.30 ಗಂಟೆಗೆ ಸಂಡೂರು ತಾಲ್ಲೂಕು ತಹಶೀಲ್ದಾರರ ಕಚೇರಿಯಲ್ಲಿ ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಹಾಗೂ ಇತರೆ ಯೋಜನೆಗಳ ಕುರಿತಂತೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಅಧಿಕಾರಿಗಳು ತಪ್ಪದೇ ಹಾಜರಿರಬೇಕು ಎಂದು ಅವರು ತಿಳಿಸಿದ್ದಾರೆ.



# ಕಣ್ಮರೆಯಾದ 'ಸಗಣಿ ಕಣ': ನನಸಾಗದ ಕಾಂಕ್ರಿಟ್ ಕಣ



**ಹಾವೇರಿ:** ರೈತಾಪಿ ನಾಡಾಗಿರುವ ಹಾವೇರಿ ಜಿಲ್ಲೆಯ ಬಹುತೇಕ ಕಡೆಗಳಲ್ಲಿ 'ಸಗಣಿ ಕಣಗಳು' ಕಣ್ಮರೆಯಾಗುತ್ತಿದ್ದು, ರೈತರು ತಾವು ಬೆಳೆದ ಬೆಳೆಯನ್ನು ರಾಷ್ಟ್ರೀಯ- ರಾಜ್ಯ ಹೆದ್ದಾರಿಗಳಲ್ಲಿ ಒಕ್ಕಲುಮಾಡುತ್ತಿದ್ದಾರೆ. ಗ್ರಾಮಕ್ಕೊಂದು 'ಕಾಂಕ್ರಿಟ್ ಕಣ' ನಿರ್ಮಿಸಬೇಕೆಂಬ ರೈತರ ಆಗ್ರಹ, ಹಲವು ವರ್ಷಗಳಿಂದ ಕನಸಾಗಿಯೇ ಉಳಿದಿದೆ.

ಜಿಲ್ಲೆಯಲ್ಲಿ ಗೋವಿನಜೋಳ, ಸೋಯಾಬಿನ್, ಭತ್ತ, ಕಡಲೆ, ಹೆಸರು ಸೇರಿದಂತೆ ಹಲವು ಬೆಳೆಗಳನ್ನು ರೈತರು ಬೆಳೆಯುತ್ತಿದ್ದಾರೆ. ಬೆಳೆಯ ಫಸಲು ಕೈಗೆ ಬರುತ್ತಿದ್ದಂತೆ, ಬೆಳೆಯನ್ನು ಎಲ್ಲಿ ಒಣಗಿಸಬೇಕೆಂಬ ಚಿಂತೆ ರೈತರನ್ನು ಕಾಡುತ್ತಿದೆ. ಜಾನುವಾರು ಸಾಕಿರುವ ಕೆಲವರು ಹಳೇ ಪದ್ಧತಿ ಪ್ರಕಾರ, ಸಗಣಿ ಕಣಗಳನ್ನು ನಿರ್ಮಿಸಿ ಬೆಳೆ ಸಂಸ್ಕರಣೆ ಮಾಡುತ್ತಿದ್ದಾರೆ. ಉಳಿದವರು, ರಾಷ್ಟ್ರೀಯ- ರಾಜ್ಯ ಹಾಗೂ ಇತರೆ ರಸ್ತೆಗಳನ್ನೇ ಕಣವನ್ನಾಗಿಮಾಡಿಕೊಂಡಿದ್ದಾರೆ. ಸಗಣಿ ಲಭ್ಯವಿದ್ದವರು ತಮ್ಮದೇ ಹೊಲದ ಜಾಗದಲ್ಲಿ ಸಗಣಿ ಕಣಮಾಡುತ್ತಿದ್ದಾರೆ. ಜಾನುವಾರು ಸಾಕದ ರೈತರು, ಬೇರೆ ಕಡೆಯಿಂದ ಸಗಣಿ ತಂದು ಕಣಮಾಡಲು ಪ್ರಯತ್ನಿಸುತ್ತಿಲ್ಲ. ಅವರೆಲ್ಲೂ ಡಾಂಬರ್ ರಸ್ತೆಯನ್ನೇ ಕಣಮಾಡಿಕೊಂಡು, ತಮ್ಮ ಬೆಳೆಗಳನ್ನು ಒಕ್ಕಲುಮಾಡಿ ಒಣಗಿಸಿಮಾರುಕಟ್ಟೆಗೆ ಕೊಂಡೊಯ್ಯುತ್ತಿದ್ದಾರೆ. ಬೆಳೆ ಒಣಗಿಸಲು ಡಾಂಬರ್ ರಸ್ತೆಗಳು ಸೂಕ್ತವೆನಿಸಿದರೂ ಇದು ಹೆಚ್ಚು ಅಪಾಯಕಾರಿ. ವಾಹನಗಳ ಸಂಚರಿಸುವ ಜಾಗದಲ್ಲಿ ಬೆಳೆಗಳನ್ನು ಹಾಕಿದರೆ, ಅಪಘಾತಗಳು ಸಂಭವಿಸುವ ಸಾಧ್ಯತೆ ಹೆಚ್ಚಿರುತ್ತದೆ. ಜೊತೆಗೆ, ಬೆಳೆಗಳನ್ನು ಹಗಲು-ರಾತ್ರಿ ಕಾಯಬೇಕು. ಇದಕ್ಕಾಗಿ ರೈತರು ರಾತ್ರಿಯೂರಸ್ತೆ ಬದಿಯಲ್ಲಿ ಮಲಗಬೇಕು. ಇಂಥ ಸಂದರ್ಭದಲ್ಲಿ ವಾಹನಗಳು ಅಡ್ಡಾದಿಡ್ಡಿಯಾಗಿ ಸಂಚರಿಸಿದರೆ, ರೈತರ ಪ್ರಾಣಕ್ಕೆ ಕುತ್ತು ಉಂಟಾಗುವ ಸಂಭವವಿರುತ್ತದೆ.

ಸಗಣಿ ಕಣಕ್ಕೆ ಹೆಚ್ಚು ಖರ್ಚು :ಹೊಲದಲ್ಲಿ ಸಗಣಿ ಕಣಮಾಡಲು ಹೆಚ್ಚಿನ ವೆಚ್ಚವಾಗುತ್ತದೆ. ಜೊತೆಗೆ, ಕಾರ್ಮಿಕರ ಅಗತ್ಯವಿರುತ್ತದೆ. ಆದರೆ, ಡಾಂಬರ್ ರಸ್ತೆಗೆ ಯಾವುದೇ ಖರ್ಚು ಇಲ್ಲ. ಬೆಳೆಯನ್ನು ನೇರವಾಗಿ ರಸ್ತೆಗೆ ಕೊಂಡೊಯ್ದು ಒಣಗಲು ಹಾಕಿದರೆ ರೈತರ ಕೆಲಸ ಮುಗಿದಂತೆ. ಇದೇ ಕಾರಣಕ್ಕೆ ರೈತರು, ಸಗಣಿ ಕಣಕ್ಕಿಂತಲೂ ಡಾಂಬರ್ ರಸ್ತೆಯನ್ನೇ ಕಣವನ್ನಾಗಿ ಹೆಚ್ಚು ಬಳಸಿಕೊಳ್ಳುತ್ತಿದ್ದಾರೆ. 'ಮನೆಯಲ್ಲಿ ದನ-ಕರುಗಳು ಇದ್ದರೆ, ಸಗಣಿ ಸಿಗುತ್ತದೆ. ಅದರಿಂದ ಕಣವನ್ನು ಮಾಡಬಹುದು. ಇಂಥ ಕಣಮಾಡಲು ಖರ್ಚು ಹೆಚ್ಚಾಗುತ್ತದೆ. ಆದರೆ, ದನಕರುಗಳು ಇಲ್ಲದಿದ್ದರೆ ಸಗಣಿ ಇಲ್ಲ. ಹೀಗಾಗಿ, ಬಹುತೇಕರು ಡಾಂಬರ್ ರಸ್ತೆ ಕಣಗಳ ಮೊರೆಹೋ ಗುತ್ತಿದ್ದಾರೆ' ಎಂದು ದೇವಗಿರಿ ಗ್ರಾಮದ ರೈತ ಚನ್ನಬಸಪ್ಪ ಹೇಳಿದರು. 'ಸಗಣಿ ಕಣದಲ್ಲೂ ಬೆಳೆಯನ್ನು ಒಣಗಿಸಿ, ಸಂಸ್ಕರಣೆಮಾಡಬಹುದು. ಅದೇ ರೀತಿಯಲ್ಲಿ ಡಾಂಬರ್ ಕಣದಲ್ಲೂ ಎಲ್ಲ ಕೆಲಸಗಳನ್ನು ಮಾಡಬಹುದು.ಹೊಲದಿಂದ ಬೆಳೆಯನ್ನು ರಸ್ತೆಗೆ ಸಾಗಿಸಲು ತೊಂದರೆಯಾಗುತ್ತದೆ. ಆದರೆ, ಡಾಂಬರ್ ರಸ್ತೆಗೆಹೋದ ನಂತರ ಅಲ್ಲಿಂದಮಾರುಕಟ್ಟೆಗೆ ಬೆಳೆಯನ್ನು ಕೊಂಡೊಯ್ಯುವುದು ಸುಲಭ' ಎಂದರು. 'ಇತ್ತೀಚಿನ ದಿನಗಳಲ್ಲಿ ಕೆಲವರಷ್ಟೇ ಸಗಣಿ ಕಣಮಾಡುತ್ತಿದ್ದಾರೆ. ಅದರಲ್ಲೂ ಭತ್ತ ಬೆಳೆಯುವವರು ಹೆಚ್ಚಾಗಿ, ಸಗಣಿ ಕಣಗಳ ಮೊರೆಹೋಗುತ್ತಿದ್ದಾರೆ. ಆದರೆ, ಕೆಲವೇ ದಿನಗಳಲ್ಲಿ ಸಗಣಿ ಕಣಗಳು ಸಂ ಪೂರ್ಣ ಕಣ್ಮರೆಯಾಗಲಿವೆ' ಎಂದು ಹೇಳಿದರು. ಅಪಘಾತಗಳಿಗೆ ದಾರಿ: ಜಿಲ್ಲೆಯ ರಾಣೆಬೆನ್ನೂರು, ಮೋಟೆಬೆನ್ನೂರು, ಹಾವೇರಿ, ಬಂಕಾಪುರ, ಶಿಗ್ಗಾವಿ, ತಡಸಮಾರ್ಗ ದಲ್ಲಿ ರಾಷ್ಟ್ರೀಯ ಹೆದ್ದಾರಿ ಹಾದುಹೋಗಿದೆ. ಜಿಲ್ಲೆಯ ಹಲವು ಕಡೆಗಳಲ್ಲಿ ರಾಜ್ಯ ಹೆದ್ದಾರಿಗಳಿವೆ. ಜೊತೆಗೆ, ಹಲವು ಗ್ರಾಮದ ರಸ್ತೆಗಳು ಉತ್ತಮವಾಗಿದೆ. ಈ ಎಲ್ಲ ಕಡೆಗಳಲ್ಲೂ ರೈತರ ಬೆಳೆಯ ರಾಶಿಗಳು ಕಂಡುಬರುತ್ತಿವೆ. ಬಹುತೇಕ ರಸ್ತೆಗಳಲ್ಲಿ ಅಡ್ಡವಾಗಿ ಹಾಕಿರುವ ಬೆಳೆಗಳಿಂದ ಅಪಘಾತಗಳು ಸಂಭವಿಸುತ್ತಿರುವ ಘಟನೆಗಳು ವರದಿಯಾಗುತ್ತಿವೆ. ಇದೇ ಕಾರಣಕ್ಕೆ ರಸ್ತೆಯಲ್ಲಿ ಗಸ್ತು ತಿರುಗುತ್ತಿರುವ ಪೊಲೀ ಸರು, ರಸ್ತೆಯಲ್ಲಿ ಬೆಳೆ ಹಾಕುವ ರೈತರಲ್ಲಿ ಜಾಗೃತಿಮೂಡಿಸುತ್ತಿದ್ದಾರೆ. ಗ್ರಾಮದಲ್ಲಿಯೇ ಕಣಗಳನ್ನು ನಿಗದಿಪಡಿಸಿಕೊಂಡು, ಅಲ್ಲಿಯೇ ಒಕ್ಕಲು ಮಾಡಿ ಒಣಗಲು ಹಾಕುವಂತೆ ಕೋರುತ್ತಾರೆ. ಆದರೆ, ಗ್ರಾಮದಲ್ಲಿ ಕಣದ ಕೊರತೆ ಇರುವುದರಿಂ ದಲೇ ರಸ್ತೆಗೆ ಬಂ ದಿರುವುದಾಗಿ ರೈತರು ಉತ್ತರಿಸುತ್ತಿದ್ದಾರೆ. ರಸ್ತೆ ಮಾತ್ರವಲ್ಲದೇ ಬಸ್ ನಿಲ್ದಾಣ, ಸರ್ಕಾರಿ ಕಚೇರಿ ಆವರಣ, ಆಟದ ಮೈದಾನ... ಹೀಗೆ ಸಮತಟ್ಟಾದ ಪ್ರದೇಶಗಳನ್ನು ರೈತರು ಕಣವನ್ನಾಗಿ ಬಳಸಿಕೊಳ್ಳುತ್ತಿದ್ದಾರೆ. ಇಂಥ ಸ್ಥಳಗಳಲ್ಲಿ ವಾಹನಗಳು ಓಡಾಡುವುದರಿಂದ, ಅಪಘಾತದ ಭಯವೂ ಕಾಡುತ್ತಿದೆ.

ಗ್ರಾಮಕ್ಕೊಂದು ಕಾಂಕ್ರಿಟ್ ಕಣ: ಸಗಣಿ ಕಣಗಳಿಗೆ ಪರ್ಯಾ ಯವಾಗಿ ಗ್ರಾಮಕ್ಕೊಂದು ಕಾಂಕ್ರಿಟ್ ಕಣ ನಿರ್ಮಾಣ ಮಾಡುವಂತೆ ಜಿಲ್ಲೆಯ ರೈತರು ಹಲವು ವರ್ಷಗಳಿಂದ ರಾಜ್ಯ ಸರ್ಕಾ ರವನ್ನು ಒತ್ತಾಯಿಸುತ್ತಿದ್ದಾರೆ. ರೈತ ಸಂಘಗಳ ಮುಖಂಡರು ಹಾಗೂ ರೈತರು, ಹಲವು ಬಾರಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ. ಆದರೆ, ಕಾಂಕ್ರಿಟ್ ಕಣ ನಿರ್ಮಾಣದ ಕನಸುಮಾತ್ರ ನನಸಾಗಿಲ್ಲ. 'ಆಧುನಿಕಯುಗಕ್ಕೆ ತಕ್ಕಂತೆ ಕೃಷಿ ಪದ್ಧತಿಯೂಬದಲಾಗುತ್ತಿದೆ. ಸಗಣಿ ಕಣಮಾಡುವಷ್ಟು ಸಮಯಯಾರ ಬಳಿಯೂಇಲ್ಲ. ಬೆಳೆಯನ್ನು ಕಟಾವುಮಾಡುವ ರೈತರು, ತಮ್ಮೂರಿನ ಸಮೀಪದ ರಸ್ತೆಗೆ ಕೊಂಡೊಯ್ಯುತ್ತಿದ್ದಾರೆ. ಅಲ್ಲಿಯೇ ಒಣಗಿಸಿಮಾರುಕಟ್ಟೆಗೆ ಸಾಗಿಸುತ್ತಿದ್ದಾರೆ. ಇಂಥ ರೈತರು ಅನುಕೂಲಕ್ಕಾಗಿ ಪ್ರತಿ ಗ್ರಾಮದಲ್ಲೂ ಕಾಂ ಕ್ರಿಟ್ ಕಣದ ಅಗತ್ಯವಿದೆ' ಎಂದು ರೈತ ಮುಖಂಡ ಭುವನೇಶ್ವರ ಶಿಡ್ಲಾಪೂರ ಹೇಳಿದರು. 'ಜಿಲ್ಲೆಯ ಪ್ರತಿ ಗ್ರಾಮದಲ್ಲೂ ರೈತರಿದ್ದಾರೆ. ಕೃಷಿ ನಂಬಿಕೊಂಡು ಜೀವನ ನಡೆಸುತ್ತಿದ್ದಾರೆ. ವರ್ಷಪೂರ್ತಿ ಹೊಲದಲ್ಲಿ ದುಡಿಮೆಮಾಡಿ ಬೆಳೆ ಬೆಳೆಯುತ್ತಿದ್ದಾರೆ. ಇಂಥ ಬೆಳೆಯನ್ನು ಕಟಾವುಮಾಡಿದ ನಂತರ, ಅದನ್ನು ಸಂಸ್ಕರಣೆಮಾಡಲು ಸೂಕ್ತ ಜಾಗ ಬೇಕು. ಅದೇ ಕಾರಣಕ್ಕೆ ಗ್ರಾಮಕ್ಕೊಂಡು ಕಾಂಕ್ರಿಟ್ ಕಣಮಾಡುವಂತೆ ಹಲವು ವರ್ಷಗಳಿಂದ ರಾಜ್ಯ ಸರ್ಕಾರವನ್ನು ಒತ್ತಾಯಿಸಲಾಗುತ್ತಿದೆ' ಎಂದು ಅವರು ತಿಳಿಸಿದರು. 'ಗ್ರಾಮದಲ್ಲಿರುವ ಸರ್ಕಾರದ ಜಾಗವನ್ನೇ ಕಾಂಕ್ರಿಟ್ ಕಣಕ್ಕೆ ಮೀಸಲಿಡಬೇಕು. ಸರ್ಕಾರ ಜಾಗವಿಲ್ಲದಿದ್ದರೆ, ಖಾಸಗಿ ಜಾಗವನ್ನು ಖರೀದಿಸಬೇಕು. ನಿರ್ದಿಷ್ಟ ಅಳತೆಯ ಕಣಗಳನ್ನು ಮಾಡಿ ರೈತರಿಗೆ ಬಳಸಲು ನೀಡಬೇಕು. ಈ ರೀತಿಯಾದರೆ, ರೈತರು ರಸ್ತೆಗೆಹೋಗುವುದು ತಪ್ಪುತ್ತದೆ. ಅಪಘಾತದ ಭಯವೂ ಇರುವುದಿಲ್ಲ' ಎಂದು ಹೇಳಿದರು.

ರಾಣೆಬೆನ್ನೂರು: ತಾಲ್ಲೂಕಿನ ಚಳಗೇರಿ, ಕಮಡೋಡ, ಕಾಕೋಳ, ಹುಲಿಹಳ್ಳಿ, ಮಕನೂರ ಕ್ರಾಸ್, ಹಲಗೇರಿ ರಸ್ತೆ ಮತ್ತು ರಾಷ್ಟ್ರೀಯ ಹೆದ್ದಾರಿಯಲ್ಲಿ ರೈತರು ಮೆಕ್ಕೆಜೋಳ, ತೊಗರಿ, ಹುರುಳಿ, ಮಡಿಕೆ ಮುಂತಾದ ಬೆಳೆಗಳನ್ನು ಒಕ್ಕಲುಮಾಡುತ್ತಿದ್ದಾರೆ. ಆಧುನಿಕತೆ ಮತ್ತು ಯಂತ್ರಗಳ ಬಳಕೆಯಿಂದ ಒಕ್ಕಲು ಸಗಣಿ ಕಣಗಳು ಗ್ರಾಮೀಣ ಪ್ರದೇಶದಲ್ಲಿ ಮಾಯವಾಗಿವೆ. ಕೂಡು ಕುಟುಂಬಗಳು ನೇಪತ್ಯಕ್ಕೆ ಸರಿದು, ಚಿಕ್ಕ ಕುಟುಂಬಗಳಾಗಿವೆ. ರೈತರು ಏಕ ಬೆಳೆ ಪದ್ಧತಿ ಅನುಸರಿಸುತ್ತಿದ್ದರಿಂದ ಯಂತ್ರಗಳುಹೊಲಗಳಿಗೆ ಕಾಲಿಟ್ಟಿವೆ. ಬೆಳೆಗಳನ್ನು ರಸ್ತೆಯಲ್ಲಿ ಹಾಕಿ ಒಕ್ಕಲುಮಾಡಿ ನೇರವಾಗಿ ಎಪಿಎಂ ಸಿಮಾರುಕಟ್ಟೆಗೆ ತೆಗೆದುಕೊಂ ಡುಹೋ ಗುತ್ತಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿ ಕಣಮಾಯವಾಗಿದ್ದರಿರ, ಹೆದ್ದಾರಿ ಬಳಿ ಒಣಗಲು ಹಾಕುತ್ತಾರೆ. ಇದರಿಂದ ಅಪಘಾತಗಳು ಸಂಭವಿಸಿ ಪ್ರಾಣ ಹಾನಿಯಾದ ಘಟನೆಗಳು ನಡೆದಿವೆ. ಈರುಳ್ಳಿ, ಬೆಳ್ಳುಳ್ಳಿ ಮುಂತಾದ ಬೆಳೆಗಳನ್ನು ಮನೆ ಮುಂದೆ ಅಥವಾ ದೇವಸ್ಥಾನ, ಶಾಲಾ ಆವರಣದಲ್ಲಿ ಒಕ್ಕಲುಮಾಡುತ್ತಿದ್ದಾರೆ. ಗ್ರಾಮ ಪಂಚಾಯಿತಿಯಿಂದ ಒಕ್ಕಲು ಕಣ ನಿರ್ಮಾಣಮಾಡಲು ಅವಕಾಶವಿತ್ತು. ಅನುದಾನ ಕೊರತೆಯಿಂದ, ಕಣ ನಿರ್ಮಾಣವನ್ನು ಕೈ ಬಿಡಲಾಗಿದೆ. ಸವಣೂರು: ಕೃಷಿಯನ್ನೇ ನಂಬಿಕೊಂಡು ಬಂದಿರುವ ರೈತರು ತಮ್ಮ ಜಮೀನುಗಳಲ್ಲಿ ಬಂದ ಫಸಲನ್ನು ಕಣದಲ್ಲಿ ಒಕ್ಕಣೆಮಾಡುವ ಸಂಪ್ರದಾಯ ತಾಲ್ಲೂಕಿನಲ್ಲಿ ಮರೆಯಾಗಿ ರಾಷ್ಟ್ರೀಯ ಹೆದ್ದಾರಿ ಪಕ್ಕದ ಸರ್ವಿಸ್ ರಸ್ತೆಯಲ್ಲಿ ಒಕ್ಕಲುಮಾಡುವಂತ ಸ್ಥಿತಿ ನಿರ್ಮಾಣವಾಗಿದೆ. ತಾಲ್ಲೂಕಿನ ತವರಮೇಳ್ಳಿಹಳ್ಳಿ, ಕುಣಿಮೆಳ್ಳಿಹಳ್ಳಿ ಗ್ರಾಮಗಳ ರೈತರು ರಾಷ್ಟ್ರೀಯ ಹೆದ್ದಾರಿ ಪಕ್ಕದ ಸರ್ವಿಸ್ ರಸ್ತೆಯಲ್ಲಿ ಒಕ್ಕಣೆಮಾಡಿದರೆ, ಇನ್ನು ಉಳಿದ ಹಲವರು ಗ್ರಾಮಗಳ ದೇವಸ್ಥಾನ ಮುಂಭಾಗ, ತಮ್ಮ ಮನೆಯ ಅಂಗಳ ಸೇರಿದಂತೆ ರಸ್ತೆ ಪಕ್ಕದಲ್ಲಿ ಒಕ್ಕಣೆಮಾಡುತ್ತಿದ್ದಾರೆ. 'ನಮ್ಮ ಪೂರ್ವಜರು ಬೆಳೆಗಳನ್ನು ಒಕ್ಕಲುಮಾಡಲು ಗ್ರಾಮದ ಪಕ್ಕದಲ್ಲಿರುವ ಖಾಲಿ ಜಾಗೆಯಲ್ಲಿ ಕಣಮಾಡುತ್ತಿದ್ದರು. ಆದರೆ, ಈಗ ಗ್ರಾಮದ ಪಕ್ಕದಲ್ಲಿರುವ ಖಾಲಿ ಜಾಗೆಗಳಲ್ಲಿ ಮನೆಗಳು ನಿರ್ಮಾ ಣವಾಗಿವೆ. ಜಾಗೆಯ ಸಮಸ್ಯೆ ಮತ್ತು ಮನೆಯ ಪಕ್ಕದಲ್ಲಿರುವ ಸ್ವಲ್ಪ ಜಾಗೆಯಲ್ಲಿ ಕಣ ನಿರ್ಮಾ ಣಮಾಡಿಕೊಂಡರೆ ದೂಳು ಹೆಚ್ಚಾಗುತ್ತಿದೆ. ಹೀಗಾಗಿ, ರಸ್ತೆಯಲ್ಲಿ, ದೇವಸ್ಥಾನದ ಅಂಗಳದಲ್ಲಿ ಒಕ್ಕಲುಮಾಡುತ್ತಿದ್ದೇವೆ' ಎಂದು ರೈತರು ಹೇಳುತ್ತಿದ್ದಾರೆ.

'ಕಣ ನಿರ್ಮಾಣಕ್ಕೆ ನರೇಗಾ ಬಳಸಿ' 'ಗ್ರಾಮೀ ಣ ಮಟ್ಟದಲ್ಲಿ ಜನರು ಅಭಿವೃದ್ಧಿಯಾಗಬೇ ಕಾದರೆ ಅವರು ಬೆಳೆದಿರುವ ಬೆಳೆಯನ್ನು ಸಂಸ್ಕರಣೆಮಾಡಲು ಸೂಕ್ತ ಜಾಗದ ವ್ಯವಸ್ಥೆಯಾಗಬೇ ಕು. ಮಹಾತ್ಮಾ ಗಾಂಧಿ ಉದ್ಯೋಗ ಖಾತರಿಯೋ ಜನೆ (ನರೇ ಗಾ) ಬಳಸಿಕೊಂಡು ಕಾಂಕ್ರಿಟ್ ಕಣ ನಿರ್ಮಿಸಲು ಕ್ರಮ ಕೈಗೊಳ್ಳಬೇಕು' ಎಂದು ರೈತರು ಆಗ್ರಹಿಸಿದರು. 'ನರೇಗಾ ಯೋಜನೆಯಡಿ ಈಗಾಗಲೇ ಹಲವು ಕೆಲಸಗಳನ್ನು ಮಾಡಲಾಗುತ್ತಿದೆ. ಕಣ ನಿರ್ಮಾಣದ ಕೆಲಸವನ್ನೂ ನರೇಗಾ ಪಟ್ಟಿಯಲ್ಲಿ ಸೇರಿಸಬೇಕು. ಸರ್ಕಾರ ಅಥವಾ ಖಾಸಗಿ ಜಾಗಗಳನ್ನು ಗುರುತಿಸಿ ಅಲ್ಲಿಯೇ ಕಾಂಕ್ರಿಟ್ ಕಣ ನಿರ್ಮಾಣಕ್ಕೆ ಸರ್ಕಾರ ಮುಂದಾಗಬೇಕು. ಕಾಂಕ್ರಿಟ್ ಕಣ ನಿರ್ಮಾಣವಾದರೆ ರೈತರಿಗೆ ಹೆಚ್ಚು ಅನುಕೂಲವಾಗಲಿದೆ ಎಂದರು.



### ಗಣಿ, ಪ್ರಾದೇಶಿಕ ಸಾರಿಗೆ ಹಾಗೂ ಬೆಸ್ಕಾಂ ಕಚೇರಿಗಳಿಗೆ ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ಭೇಟಿ

# ಅಕ್ರಮ ಕ್ರಷರ್‌ಗಳ ಆರ್ಭಟಕ್ಕೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಸೂಚನೆ

**ದಾವಣಗೆರೆ :** ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ನಗರದ ಗಣಿ ಮತ್ತು ಭೂ ವಿಜ್ಞಾನ, ಪ್ರಾದೇಶಿಕ ಸಾರಿಗೆ ಹಾಗೂ ಬೆಸ್ಕಾಂ ಕಚೇರಿಗಳಿಗೆ ಬುಧವಾರ ಸಂಜೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಜಿಲ್ಲೆಯಲ್ಲಿನ ಕಲ್ಲು ಗಣಿಗಾರಿಕೆ ಹಾಗೂ ಅಕ್ರಮ ಕ್ರಷರ್‌ಗಳ ಆರ್ಭಟಕ್ಕೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೊದಲಿಗೆ ಗಣಿ ಇಲಾಖೆ ಕಚೇರಿ ಭೇಟಿ ನೀಡಿದ ನ್ಯಾ.ಬಿ.ವೀರಪ್ಪ ಜಿಲ್ಲೆಯಲ್ಲಿ ಪರವಾನಿಗೆ ಪಡೆದ ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳ ಮಾಹಿತಿಯನ್ನು ಎಷ್ಟು ಎಂದು ಪ್ರಶ್ನಿಸಿದರು. ಜಿಲ್ಲೆಯಲ್ಲಿ 128 ಕ್ಕೂ ಹೆಚ್ಚು ಕ್ರಷರ್‌ಗಳಿಗೆ ಪರವಾನಿಗೆ ನೀಡಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದರು. ಪರವಾನಗಿ ಪಡೆದ ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳು ಸರಿಯಾಗಿ ರಾಜಧನ ಪಾವತಿಸಿವೆಯೇ.? ಎಷ್ಟು ರಾಜಧನ ಸರ್ಕಾರಕ್ಕೆ ಸಂದಾಯವಾಗಿದೆ, ಎಷ್ಟು ನಿಂತಿವೆ ಎನ್ನುವ ಮಾಹಿತಿಯನ್ನು ಲೋಕಾಯುಕ್ತಕ್ಕೆ ನೀಡುವಂತೆ ಅವರು ನಿರ್ದೇಶಿಸಿದರು. ಕಲ್ಲುಕ್ವಾರಿಗಳ ಸುತ್ತ ತಂತಿ ಬೇಲಿ ಅಳವಡಿಸಬೇಕು. ಕ್ರಷರ್‌ಗಳು ಹೆಚ್ಚು ವಾಯುಮಾಲಿನ್ಯವಾಗದಂತೆ ಕಲ್ಲುಗಳನ್ನು ಪುಡಿ ಮಾಡಬೇಕು. ಈ ಸಂಬಂಧವಾಗಿ ಎಲ್ಲಾ ನಿಯಮಗಳನ್ನು ಪಾಲನೆ ಮಾಡಲಾಗುತ್ತಿದೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಬೇಕು



ಎಂದು ನ್ಯಾ.ಬಿ.ವೀರಪ್ಪ ಹೇಳಿದರು. ಉಪಲೋಕಾಯುಕ್ತರ ಭೇಟಿ ವೇಳೆ ದಾವರಣಗೆರೆ ತಾಲ್ಲೂಕಿನ ಗಣಿ ಇಲಾಖೆ ಅಧಿಕಾರಿ ರಜೆ ಮೇಲೆ ತೆರಳಿದ್ದರು. ಇತರೆ ಅಧಿಕಾರಿಗಳು ಸರಿಯಾದ ಮಾಹಿತಿಯನ್ನು ನ್ಯಾಯಮೂರ್ತಿಗಳಿಗೆ ನೀಡಲಿಲ್ಲ.

ಬಂಗಾರ ಹಾಗೂ ದುಬಾರಿ ವಾಚು

ಉಪಲೋಕಾಯುಕ್ತ ನ್ಯಾ.ಬಿ.ವೀರಪ್ಪನವರ ಗಣಿ ಇಲಾಖೆ ಕಚೇರಿ ಭೇಟಿ ಸಂದರ್ಭದಲ್ಲಿ ಗಣಿ ಇಲಾಖೆಯ ಅಧಿಕಾರಿಯೊಬ್ಬರು ಲಕ್ಷ ಲಕ್ಷ ಬಂಗಾರ ಖರೀದಿಸಿದ ಬಿಲ್‌ಗಳು ಅವರ ವಾಹನದಲ್ಲಿ ದೊರತಿವೆ. ಇವುಗಳನ್ನು ಪರಿಶೀಲಿಸಿ, ಬಿಲ್‌ನ ಪ್ರತಿ ಪಡೆದು–ಕೊಂಡ ನ್ಯಾಯಮೂರ್ತಿಗಳು ಸಂಬಂಧಪಟ್ಟ ಅಧಿಕಾರಿಗೆ ಬಂಗಾರ ಖರೀದಿ ವ್ಯಾವಹಾರ ಸಂಪೂರ್ಣ ವಿವರವನ್ನು ಲೋಕಾಯಕ್ತಕ್ಕೆ ನೀಡುವಂತೆ ತಾಕೀತು ಮಾಡಿದರು. ಇದೇ ವೇಳೆ ಸಿಕ್ಕ ವಾಚು ನ್ಯಾ.ಬಿ.ವೀರಪ್ಪ ಅವರ ಗಮನ ಸೆಳೆಯಿತು. ನೋಡಲು ಲಕ್ಷ ಲಕ್ಷ ಬೆಲೆಬಾಳುವಂತೆ ವಾಚು ಕಂಡುಬರುತ್ತಿತ್ತು. ಈ ಕುರಿತು ಸಿಬ್ಬಂದಿಯನ್ನು ವಿಚಾರಿಸಿ, ಆನ್‌ಲೈನ್‌ನಲ್ಲಿ ವಾಚಿನ ಬೆಲೆ ಪರಿಶೀಲಿಸಿದಾಗ ಹೆಚ್ಚಿತ್ತು, ಆದರೆ ಅಂಗಡಿಯಲ್ಲಿ ಪರಿಶೀಲಿಸಿದಾಗ ಅಷ್ಟೊಂದು ಬೆಲೆ ಬಾಳದ ವಾಚು ಎಂಬುದು ಕಂಡುಬಂದಿತು.ನಂತರ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳ ಕಚೇರಿ ಭೇಟಿ ನೀಡಿದ ನ್ಯಾ.ಬಿ.ವೀರಪ್ಪ, ಜಿಲ್ಲೆಯಲ್ಲಿ ಒಟ್ಟು ನೊಂದಾಯಿತ ವಾಹನಗಳ ಸಂಖ್ಯೆ, ಶಾಲಾ ವಾಹನಗಳು ಹಾಗೂ ಅದಿರು ಸಾಗಾಣಿಕೆ ವಾಹನಗಳ ಮಾಹಿತಿ ಪಡೆದುಕೊಂಡರು. ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳಿಂದ ಕಲ್ಲಿನ ಪುಡಿಗಳನ್ನು ಸಾಗಾಟ ಮಾಡುವ ವಾಹನಗಳಿಗೆ ಜಿಪಿಎಸ್ ಅಳವಡಿಸುವಂತೆ ಹಾಗೂ ಅವುಗಳ ಓಡಾಟದ ಬಗ್ಗೆ ನಿಖರ ಮಾಹಿತಿ ಪಡೆದುಕೊಳ್ಳುವಂತೆ ಸಾರಿಗೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಬೆಸ್ಕಾಂ ಕಚೇರಿಗೆ ಭೇಟಿ ನೀಡಿದ ನ್ಯಾ.ಬಿ.ವೀರಪ್ಪ ರೈತರಿಗೆ ಸರಬರಾಜು ಮಾಡುವ ಉಚಿತ ವಿದ್ಯುತ್ ಕುರಿತು ಮಾಹಿತಿ ಪಡೆದರು. ರಾತ್ರಿ ವೇಳೆ ಕ್ರಷರ್‌ಗಳು ಅನಧಿಕೃತವಾಗಿ ವಿದ್ಯುತ್ ಸಂಪರ್ಕ ಪಡೆದು ಕಾರ್ಯಾಚರಣೆ ನಡೆಸುತ್ತಿರುವುದಾಗಿ ಆರೋಪಗಳು ಕೇಳಿ ಬಂದಿವೆ. ಬೆಸ್ಕಾಂ ಅಧಿಕಾರಿಗಳು ಇದಕ್ಕೆ ಅವಕಾಶ ನೀಡದಂತೆ ಅವರು ಸೂಚಿಸಿದರು.ವೇಳೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ. ಎನ್. ಲೋಕೇಶ್, , ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ. ಮಂಜುನಾಥ್, ಕರ್ನಾಟಕ ಲೋಕಾಯುಕ್ತದ ಅಪರ ನಿಬಂಧಕರಾದ ಕೆ.ಎಂ.ರಾಜಶೇಖರ್, ಉಪ ನಿಬಂಧಕರಾದ ಅರವಿಂದ.ಎನ್.ವಿ., ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ್, ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಂ.ಎಸ್. ಕೌಲಪೂರೆ, ಉಪವಿಭಾಗಾಧಿಕಾರಿ ಸೋತೋಷ್ ಸೇರಿದಂತೆ ಜಿಲ್ಲೆಯ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು, ಮತ್ತಿತರರು ಹಾಜರಿದ್ದರು.

# ಏ.26ಕ್ಕೆ ಲಯನ್ಸ್ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರ

**ಹಾವೇರಿ:** ಲಯನ್ಸ್‌ಕ್ಲಬ್, ಲಯನ್ಸ್ ಎಜ್ಯುಕೇಷನ್ ಸೋಸೈಟಿಗಳ ಸಂಯುಕ್ತ ಆಶ್ರಯದಲ್ಲಿ ಏ.26ರಂದು ಬೆಳಗ್ಗೆ 10ಗಂಟೆಯಿಂದ ಮಧ್ಯಾಹ್ನ 1ಗಂಟೆಯವರೆಗೆ ಉಚಿತ ಬೃಹತ್ ಆರೋಗ್ಯ ತಪಾಸಣಾ ಶಿಬಿರವನ್ನು ಬಸವೇಶ್ವರ ನಗರದ ಲಯನ್ಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಲಯನ್ಸ್ ಸಂಸ್ಥೆಯ ಅಧ್ಯಕ್ಷ ಸುಭಾಸ ಹುಲ್ಯಾಳದ ಹೇಳಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿ ತಿಂಗಳೂ ಲಯನ್ಸ್ ಕ್ಲಬ್ ವತಿಯಿಂದ ಉಚಿತ ನೇತ್ರ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗುತ್ತಿದೆ. ಇದರಲ್ಲಿ ಪ್ರತಿ ತಿಂಗಳೂ 250–300 ಜನರು ಪಾಲ್ಗೊಂಡು ಅದರಲ್ಲಿ 100–150 ಜನರನ್ನು ಶಿವಮೊಗ್ಗದ

ಶಂಕರ ಕಣ್ಣಿನ ಆಸ್ಪತ್ರೆಯಲ್ಲಿ ಶಸ್ತ್ರ ಚಿಕಿತ್ಸೆಗೆ ಆಯ್ಕೆ ಮಾಡಲಾಗುತ್ತಿದೆ.

ಆದರೆ ಈ ಬಾರಿ ಕಣ್ಣು ಮಾತ್ರವಲ್ಲದೇ ಹೃದಯ, ನರರೋಗ, ಮೂತ್ರಕೋಶ, ಮೂತ್ರಪಿಂಡ, ಗ್ಯಾಸ್ಟೋಸೈನ್ಸ್, ಚಿಕ್ಕಮಕ್ಕಳ ತಜ್ಞರು, ಸ್ತ್ರೀ ರೋಗ, ಎಲುಬು ಮತ್ತು ಕೀಲು, ದಂತ, ಚರ್ಮ ರೋಗ ಹೀಗೆ ಸುಮಾರು 15ಕ್ಕೂ ಹೆಚ್ಚು ವಿವಿಧ ತಜ್ಞ ವೈದ್ಯರು ಶಿಬಿರದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

15ಕ್ಕೂ ಹೆಚ್ಚು ವಿವಿಧ ತಜ್ಞ ವೈದ್ಯರು ಶಿಬಿರದಲ್ಲಿ ಪಾಲ್ಗೊಳ್ಳುತ್ತಿದ್ದು, ಎಲ್ಲರಿಗೂ ಪ್ರತ್ಯೇಕ ಪರೀಕ್ಷಾ ಕೊಠಡಿ, ಇಬ್ಬರು ಸಹಾಯಕರನ್ನು ನಿಯೋಜಿಸಲಾಗಿದೆ. ಬೆಳಗ್ಗೆ 10ರಿಂದ 12ಗಂಟೆಯವರೆಗೆ ನೋಂದಣಿಗೆ ಅವಕಾಶವಿದ್ದು, ಜನಸಾಂದ್ರತೆ ಆಧರಿಸಿ ನೋಂದಣಿ ಪ್ರಕ್ರಿಯೆಯನ್ನು ನಿರ್ವಹಿಸಲಾಗುತ್ತದೆ.

ಸಾಧ್ಯವಾದಷ್ಟು ಶಿಬಿರಕ್ಕೆ ಆಗಮಿಸುವ ಎಲ್ಲರಿಗೂ ಸೂಕ್ತ ವ್ಯವಸ್ಥೆಗೆ ಲಯನ್ಸ್ ಕ್ಲಬ್ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಂಡಿದೆ. ಈ ಶಿಬಿರದಲ್ಲಿ ಸಾಮಾನ್ಯ ತಪಾಸಣೆ ಜೊತೆಗೆ ವಿಶೇಷ ತಪಾಸಣೆಗೂ ಒತ್ತು ನೀಡಲಾಗಿದೆ. ಇಸಿಜಿ, ಇಕೋ,



ಡಯಾಬಿಟಿಕ್ ಪೆರಿಫೆರಲ್ ನ್ಯೂರೋಪತಿ ಸ್ಕ್ರೀನಿಂಗ್ ತಪಾಸಣೆಯನ್ನೂ ಸಹ ಮಾಡಲಾಗುತ್ತಿದೆ. ಈ ತಪಾಸಣೆಗಳಿಗೆ ಕನಿಷ್ಠ 1200–1500 ರೂ. ವೆಚ್ಚ ಮಾಡಬೇಕಿದೆ. ಈ ಶಿಬಿರದಲ್ಲಿ ಪಾಲ್ಗೊಳ್ಳುವವರಿಗೆ ಇದನ್ನು ಉಚಿತವಾಗಿ ಕೈಗೊಂಡು ಅಗತ್ಯ ಸಲಹೆ ಸೂಚನೆ ಜತೆಗೆ ಕನಿಷ್ಠ ಔಷಧೋಪಚಾರಕ್ಕೂ ಸಿದ್ಧತೆ ಮಾಡಿಕೊಳ್ಳಲಾಗಿದೆ. ಈ ಶಿಬಿರದಲ್ಲಿ 1500–2000 ಜನರು ಪಾಲ್ಗೊಳ್ಳುವ ನಿರೀಕ್ಷೆ ಇದೆ ಎಂದು ಮಾಹಿತಿ ನೀಡಿದರು.

ಲಯನ್ಸ್ ಕ್ಲಬ್‌ನ ಕಾರ್ಯದರ್ಶಿ ವಿರುಪಾಕ್ಷಪ್ಪ ಹಾವನೂರ ಮಾತನಾಡಿ, ಈ ಶಿಬಿರದಲ್ಲಿ ದಾವಣಗೆರೆ ಎಸ್.ಎಸ್. ನಾರಾಯಣ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಮತ್ತು ಸರ್ಜಿ ರೇಣುಕಾ ದೇವಧರ ಆಸ್ಪತ್ರೆಯ ಡಾ.ಮಧು, ಡಾ.ವಿಕಾಸ ಕೆ.ಜಿ., ಡಾ. ನವೀನ್ ರಾಯ್ಕರ್, ಡಾ.ಚೇತನ್ ಕೆ.ಎಂ., ಮನೋ ವೈದ್ಯ ಡಾ.ವಿಜಯಕುಮಾರ ಬಳಿಗಾರ, ಡಾ.ಅನುರಾಧಾ ಹಿರೇಮಠ, ಡಾ.ನೀಲ ಹಿರೇಮಠ, ಡಾ.ಸಿದ್ದೇಶ್ವರ ಹಿರೇಮಠ ಹಾಗೂ ಡಾ.ಮೇಘನಾ ರಾಠೋಡ ಪಾಲ್ಗೊಳ್ಳಲಿದ್ದಾರೆ. ಇದೇ ವೇಳೆ ನೇತ್ರದಾನ, ದೇಹದಾನಗಳ ಕುರಿತು ಅರಿವು ಮೂಡಿಸಲಾಗುವುದು ಎಂದರು. ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಖಜಾಂಚಿ ಗಿರೀಶ ಬಣಕಾರ ಇದ್ದರು.

## ಅಹವಾಲು ಸ್ವೀಕಾರ ಸಭೆ

**ಹಾಸನ :** ಹಾಸನ ಜಿಲ್ಲಾ ಲೋಕಾಯುಕ್ತ ಕಚೇರಿಯ ವತಿಯಿಂದ ಹಾಸನ ತಾಲ್ಲೂಕು ಕಚೇರಿಯಲ್ಲಿ ಏ.28 ರಂದು ಬೆಳಗ್ಗೆ 11.30 ರಿಂದ ಮಧ್ಯಾಹ್ನ 1.30 ರವರೆಗೆ ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿಗಧಿತ ಸಮಯಕ್ಕೆ ಸರಿಯಾಗಿ ಸ್ಪಂದಿಸದೆ ಇರುವ ಬಗ್ಗೆ ಸರ್ಕಾರಿ ಅಧಿಕಾರಿಗಳ ವಿರುದ್ಧ ಬರುತ್ತಿರುವ ದೂರುಗಳ ಹಿನ್ನಲೆಯಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳ ನಿರ್ವಹಣೆಯ ಉದ್ದೇಶವನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಮತ್ತು ಸರ್ಕಾರಿ ಕಚೇರಿಯ ಕೆಲಸ ಕಾರ್ಯಗಳಲ್ಲಿ ಪಾರದರ್ಶಕತೆಯನ್ನು ತರುವ ನಿಟ್ಟಿನಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ತಾಲ್ಲೂಕು ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿರುವ ಸಾರ್ವಜನಿಕರ ಅಹವಾಲು ಸಭೆಗೆ ನಿಗಧಿತ ದಿನಾಂಕ ಮತ್ತು ಸಮಯದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಕುಂದು–ಕೊರತೆಗಳ ಬಗ್ಗೆ ಅಹವಾಲುಗಳನ್ನು ಸಲ್ಲಿಸಲು ಕರ್ನಾಟಕ ಲೋಕಾಯುಕ್ತ ಹಾಸನ ವಿಭಾಗದ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಏ.28 ರಂದು ವಿಶೇಷ ಸಾಮಾನ್ಯ ಸಭೆ

**ಹಾಸನ :** ಕರ್ನಾಟಕ ಪೌರಸಭೆಗಳ ಕಾಯ್ದೆ, 1964ರ ಕಲಂ 47(3) ರ ಮೇರೆ ಏ 28 ನೇ ಅಪರಾಹ್ನ 12.30 ಗಂಟೆಗೆ ಹಾಸನ ನಗರಸಭೆಯ "ರಾಷ್ಟ್ರಕವಿ ಕುವೆಂಪು ಸಭಾಂಗಣ"ದಲ್ಲಿ ನಗರಸಭೆಯ ಉಪಾಧ್ಯಕ್ಷರಾದ ಹೇಮಲತಾ. ಹೆಚ್ ರವರ ಅಧ್ಯಕ್ಷತೆಯಲ್ಲಿ ನಗರಸಭೆಯ ವಿಶೇಷ ಸಾಮಾನ್ಯ ಸಭೆಯನ್ನು ಕರೆಯಲಾಗಿದೆ. ನಗರಸಭೆಯ ಎಲ್ಲಾ ಮಾನ್ಯ ಸದಸ್ಯರುಗಳು ಸಕಾಲಕ್ಕೆ ಸಭೆಗೆ ಆಗಮಿಸುವಂತೆ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

## ಏ 30 ರಂದು ಬಸವ ಜಯಂತಿ : ಅರ್ಥಪೂರ್ಣ ಆಚರಣೆಗೆ ಸೂಚನೆ

**ಹಾಸನ :** ಬಸವ ಜಯಂತಿಯನ್ನು ಕಲಾಭವನದಲ್ಲಿ ಏ 30 ರಂದು ಅರ್ಥಪೂರ್ಣವಾಗಿ ಆಚರಿಸಲು ಸಿದ್ದತೆ ಮಾಡಿಕೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಕೆ.ಟಿ ಶಾಂತಲಾ ಅವರು ಅಧಿಕಾರಿಗಳಿಗೆ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಬಸವ ಜಯಂತಿ ಆಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕಾರ್ಯಕ್ರಮದಲ್ಲಿ ಯಾವುದೇ ಲೋಪವಾಗದಂತೆ ಎಚ್ಚರವಹಿಸಲು ತಿಳಿಸಿದರು.ಸಭೆಯಲ್ಲಿ ಹಾಜರಿದ್ದ ಸಮುದಾಯದ ಮುಖಂಡರ ಒಮ್ಮತದ ಅಭಿಪ್ರಾಯದಂತೆ, ನಿಗದಿಪಡಿಸಿದ ದಿನಾಂಕದರಂದು ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ತೀರ್ಮಾನಿಸಲಾಯಿತು. ಈ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ತಾರಾನಾಥ್, ಸಮುದಾಯದ ಹಿರಿಯ ಮುಖಂಡರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಜರಿದ್ದರು.

## ಡಾ.ರಾಜ್ ರಸ ಸಂಜೆ ಕಾರ್ಯಕ್ರಮ ಮುಂದೂಡಿಕೆ

**ಶಿವಮೊಗ್ಗ;** ಕಾಶ್ಮೀರದಲ್ಲಿ ಉಗ್ರರ ದಾಳಿಗೆ ಬಲಿಯಾದ ಶಿವಮೊಗ್ಗದ ಮಂಜುನಾಥ ರಾವ್ ಅವರ ಅಂತ್ಯ ಸಂಸ್ಕಾರ ಏ.24 ರಂದು ನಡೆಯುವ ಪ್ರಯುಕ್ತ ವರನಟ ಡಾ.ರಾಜ್ ಕುಮಾರ್ ಜನ್ಮ ದಿನದ ಅಂಗವಾಗಿ ಏ.24 ರ ಸಂಜೆ 6.30 ಕ್ಕೆ ಕುವೆಂಪು ರಂಗಮಂದಿರದಲ್ಲಿ ಏರ್ಪಡಿಸಲಾಗಿದ್ದ 'ಡಾ.ರಾಜ್ ರಸ ಸಂಜೆ' ಕಾರ್ಯಕ್ರಮವನ್ನು ಮುಂದೂಡಲಾಗಿದೆ.

## ನೇರ ಸಂದರ್ಶನ

**ಚಿಕ್ಕಮಗಳೂರು;** ನಗರದ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಕಚೇರಿಯಲ್ಲಿ ಖಾಸಗಿ ಕಂಪನಿಯಾದ ಚಿಕ್ಕಮಗಳೂರಿನ ವಿ ಚಾರ್ಟ್ ಸರ್ವಿಸ್ ಸಂಸ್ಥೆಯು ತನ್ನಲ್ಲಿ ಖಾಲಿ ಇರುವ ಹುದ್ದೆ(ರಾತ್ರಿ ಪಾಳಿ)ಗೆ ನೇ ಸಂದರ್ಶನ ಏ.25 ರಂದು ಬೆಳಿಗ್ಗೆ 10.30 ಗಂಟೆಗೆ ನಡೆಯಲಿದೆ. ಡಿಪ್ಲೊಮಾ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 38 ವರ್ಷ ವಯೋಮಿತಿಯ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಈ ಸಂದರ್ಶನದಲ್ಲಿ ಭಾಗವಹಿಸಬಹುದು. ಅಭ್ಯರ್ಥಿಗಳು ಒಂದು ಸೆಟ್ ರೆಸ್ಯೂಮ್‌ನೊಂದಿಗೆ ಸಂದರ್ಶನಕ್ಕೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ (08262–295538/9945198500) ವನ್ನು ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿಗಳು

## ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಚಿಕ್ಕಮಗಳೂರು:** ಬೆಂಗಳೂರಿನ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಐಐಎಸ್‌ಸಿ ಐಐಟಿ ಮತ್ತು ಎನ್‌ಐಟಿ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಅಂಡ್ ಮೆಷಿನ್ ಲರ್ನಿಂಗ್ ವೃತ್ತಿಪರ ತರಬೇತಿಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯ ವೇತನ ತರಬೇತಿ ನೀಡುವ ಸಂಬಂಧ ದಿನಾಂಕವನ್ನು ವಿಸ್ತರಿಸಿ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ.ಅರ್ಹ ಫಲಾನುಭವಿಗಳು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಗ್ರೇಡ್ 1 ಮತ್ತು 2 ಚಿಕ್ಕಮಗಳೂರು (9448392725), ಮೂಡಿಗೆರೆ (9945558847), ಶೃಂಗೇರಿ ಹಾಗೂ ಎನ್.ಆರ್.ಪುರ (8123720789), ಕೊಪ್ಪ (8660910455) ಮತ್ತು ತರೀ–ಕೆರೆ (9880809180), ಕಡೂರು (9008644434) ? ಈ ಕಚೇರಿಯನ್ನು ಸಂಪರ್ಕಿಸಬಹುದು .

### ಮಹಿಳಾ ಕಾಲೇಜು ಆವರಣದಲ್ಲಿ "ಜಾನಪದ ಉತ್ಸವ–2025"

# ಆತ್ಮವಿಶ್ವಾಸದ ಜೊತೆಗೆ ಗೌರವ ಹೆಚ್ಚಿಸುವುದೇ ಸಂಸ್ಕೃತಿ

**ಚಿಕ್ಕಮಗಳೂರು:** ಜೀವನದ ಒಂದು ಭಾಗವಾಗಿ ಆತ್ಮವಿಶ್ವಾಸದ ಜೊತೆಗೆ ಗೌರವ ಹೆಚ್ಚಿಸುವುದೇ ಸಂಸ್ಕೃತಿ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಅಭಿಪ್ರಾಯಿಸಿದರು.

ಅವರು ಇಂದು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವರುಗಳ ಸಂಯುಕ್ತಾಶ್ರಯದಲ್ಲಿ ಮಹಿಳಾ ಕಾಲೇಜು ಆವರಣದಲ್ಲಿ ಏರ್ಪಡಿಸಲಾಗಿದ್ದ "ಜಾನಪದ ಉತ್ಸವ–2025" ನಮ್ಮ ಸಂಸ್ಕೃತಿ ನಮ್ಮ ಹೆಮ್ಮೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವೈವಿಧ್ಯಮಯ ಜೀವನದ ವಿವಿಧತೆಯಲ್ಲಿ ಏಕತೆಯನ್ನು ಕಂಡುಕೊಂಡು ಭಾರತದ ಸಂಸ್ಕಾರ ಇಡೀ ವಿಶ್ವಕ್ಕೆ ಬಹಳ ದೊಡ್ಡ ಪಾತ್ರ ವಹಿಸಿ ಮಾದರಿಯಾಗಿದೆ ಎಂದು ಹೇಳಿದರು.

ನಾವು ಸಾಂಪ್ರದಾಯಿಕವಾಗಿ ಆಚರಿಸುವ ಪ್ರತಿಯೊಂದು ಹಬ್ಬಗಳು ಸಂಸ್ಕೃತಿಯನ್ನು ಜೀವಂತವಾಗಿ ಉಳಿಸಿವೆ. ಭಾರತದಂತ ಜಾತ್ಯಾತೀತ ರಾಷ್ಟ್ರದಲ್ಲಿ ವಿವಿಧ ಧರ್ಮಗಳ ಸಮುದಾಯದವರು ಆಚರಿಸುವ ಹಬ್ಬಗಳು ಜೊತೆಗೆ ರಾಷ್ಟ್ರೀಯ ಹಬ್ಬಗಳನ್ನು ಆಚರಿಸುವ ರೀತಿ ಸಂಸ್ಕೃತಿಯನ್ನು ಬಿಂಬಿಸುತ್ತಿವೆ ಎಂದು ತಿಳಿಸಿದರು.

ರೈತರ ಜೀವನಾಡಿಯಾಗಿರುವ ಭತ್ತ, ರಾಗಿ, ಏಲಕ್ಕಿ, ಅಡಿಕೆ, ಕಾಫಿ, ತೆಂಗು, ಮೆಣಸು ಜೋಡಿಸಿ ಸಿಂಗರಿಸಿರುವುದರ ಜೊತೆಗೆ ಕಾಲೇಜಿನ ಆವರಣದಲ್ಲಿ ವಿವಿಧ ರೀತಿಯ ಚಿತ್ರಾಕಾರದ ರಂಗೋಲಿಯನ್ನು ಬಿಡಿಸಿ ಕಂಗೊಳಿಸುವಂತೆ ಮಾಡಿದ್ದೀರಿ ಎಂದು ಶ್ಲಾಘಿಸಿದರು.



ಪೂರ್ವಜರು ಬಳಸುತ್ತಿದ್ದ ಸೇರು, ಪಾವು, ಚವೆ ಮಣೆ, ಬುಗುರಿ, ಕಡಗೋಲು ಮುಂತಾದ ಎಲ್ಲಾ ವಸ್ತುಗಳನ್ನು ಪ್ರದರ್ಶನಕ್ಕಿಟ್ಟಿರುವುದು ಆಧುನಿಕ ಜಗತ್ತಿಗೆ ಪರಿಚಯಿಸಲು ಸಹಕಾರಿಯಾಗಿರುವುದರ ಜೊತೆಗೆ ಜಾನಪದ ಉತ್ಸವಕ್ಕೆ ಮೆರಗು ನೀಡಿದೆ ಎಂದು ಹೇಳಿದರು.

ರಾಷ್ಟ್ರಕವಿ ಕುವೆಂಪು ಜನಿಸಿದ ಕವಿಶೈಲಕ್ಕೆ ವಿದ್ಯಾರ್ಥಿಗಳಾದ ನೀವು ಹೋಗಲು ವಾಹನ ವ್ಯವಸ್ಥೆ ಮಾಡಲು ಭರವಸೆ ನೀಡಿದ ಅವರು, ಕುವೆಂಪುರವರ ಮನೆ ಮುಂದೆ ಬರೆದಿರುವ ಮನೆಮನೆ ನಾನು ಹುಟ್ಟಿದ ಮನೆ, ಮನೆಮನೆ ನಾನು ಆಡಿ ಬೆಳೆದ ಮನೆ, ನಡೆದಾಡುವಾಗ ಎತ್ತಿ ಬೆಳೆಸಿದ ಮನೆ, ಬುಗುರಿ, ಗೋಲಿ ಆಡಿದ ಮನೆ ಎಂದು ವರ್ಣಿಸಲಾಗಿದೆ ಎಂದು ಬಣ್ಣಿಸಿದರು.

ಜಾನಪದ ಸೊಗಡು, ಜಾನಪದ ಗೀತೆ, ಜಾನಪದ ಆಟಗಳು ಸರಳವಾದ ಕೆಲಸದ ಸಮಯದಲ್ಲಿ ತಾಯಂದಿರ ಬಾಯಿಂದ ಬಂದ ನುಡಿಮುತ್ತುಗಳು ಎಂದ ಶಾಸಕರು, ಕಬ್ಬಡ್ಡಿ, ಲಗೋರಿ, ಕುಂಟೆಬಿಲ್ಲೆ, ಖೋಖೋ, ಕೂಸುಮರಿ ಮುಂತಾದ ಆಟಗಳು ಭಾರತದ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಬಿಂಬಿಸುತ್ತವೆ ಎಂದು ಹೇಳಿದರು.

ಮೊದಲು ತಾವು ಜನಿಸಿದ ಧರ್ಮವನ್ನು ಗೌರವಿಸಬೇಕು. ಇನ್ನೊಂದು ಸಮುದಾಯದ ಧರ್ಮವನ್ನು ದ್ವೇಷ ಮಾಡದೇ ಇರುವುದು ಮುಖ್ಯ ಎಂದು ತಿಳಿಸಿದರು.


ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಪ್ರೊ| ಕೆ.ದಾಮೋದರ್‌ಗೌಡ ವಹಿಸಿ ಮಾತನಾಡಿದರು. ನಗರಸಭೆ ಸದಸ್ಯ ಶಾದಬ್ ಆಲಂಖಾನ್, ಮಹೇಶ್ವರಪ್ಪ, ಮೂಡಲಗಿರಿಯಪ್ಪ, ಡಾ. ಶ್ರೀನಿವಾಸ್, ಹೇಮ ಮಾಲಿನಿ ಸಿ.ಎನ್, ದೀಕ್ಷಿತ್ ಕುಮಾರ್, ಮತ್ತು ಬೋಧಕರು, ಕಾಲೇಜು ಸಿಬ್ಬಂದಿ ಉಪಸ್ಥಿತರಿದ್ದರು. ಹಂಪಾಪುರದಿಂದ ಎತ್ತಿನ ಗಾಡಿಯನ್ನು ನಿಖಿಲ್ ಸಹೋದರರು ತಂದಿದ್ದು ವಿಶೇಷ ಗಮನ ಸೆಳೆಯಿತು.

# ನಕರಾತ್ಮಕ ಚಿಂತಕ ರಾಹುಲ್ ಗಾಂಧಿ ದೇಶ ವಿರೋಧಿ ಹೇಳಿಕೆಗೆ ಜಿಲ್ಲಾ ಬಿಜೆಪಿ ಖಂಡನೆ

**ಚಿಕ್ಕಮಗಳೂರು:** ಭಾರತದ ಆಂತರಿಕ ವಿಚಾರಗಳ ಕುರಿತು ವಿದೇಶಗಳಲ್ಲಿ ಪದೇ ಪದೇ ಬಾಯಿಗೆ ಬಂದಂತೆ ಟೀಕಿಸುವ ಮೂಲಕ ಭಾರತವನ್ನು ಅವಮಾನಿಸಿರುವ ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನಕರಾತ್ಮಕ ಹೇಳಿಕೆಯನ್ನು ಜಿಲ್ಲಾ ಬಿಜೆಪಿ ಖಂಡಿಸಿದೆ ಎಂದು ಪಕ್ಷದ ಜಿಲ್ಲಾ ವಕ್ತಾರ ಹಿರೇಮಗಳೂರು ಪುಟ್ಟಸ್ವಾಮಿ ತಿಳಿಸಿದ್ದಾರೆ.

ದೇಶದ ಹಿರಿಮೆ, ಅಭಿವೃದ್ಧಿ, ಹೊಸ ಹೊಸ ಆವಿಷ್ಕಾರಗಳು, ವಿವಿಧ ಕ್ಷೇತ್ರಗಳಲ್ಲಿ ಆಗಿರುವ ಸಾಧನೆಗಳ ಕುರಿತು ವಿದೇಶಿಗರ ಗಮನ ಸೆಳೆಯುವುದನ್ನು ಬಿಟ್ಟು, ಕೇವಲ ಪ್ರಚಾರಕ್ಕಾಗಿ ನಕರಾತ್ಮಕ ಹೇಳಿಕೆ ಮೂಲಕ ದೇಶದ ಜನರು ತಲೆ ತಗ್ಗಿಸುವಂತ ಹೇಳಿಕೆ ನೀಡಿರುವ ರಾಹುಲ್ ಗಾಂಧಿ ಒಬ್ಬ ನಕರಾತ್ಮಕ ಚಿಂತಕ. ಜೊತೆಗೆ ದೇಶ ವಿರೋಧಿ ಎಂದು ಅವರು ಮಂಗಳವಾರ ನೀಡಿರುವ ಹೇಳಿಕೆಯಲ್ಲಿ ಟೀಕಿಸಿದ್ದಾರೆ.

ಯಾವ ಉದ್ದೇಶಕ್ಕಾಗಿ ವಿದೇಶದ ನೆಲಕ್ಕೆ ತನ್ನನ್ನು ಅಹ್ವಾನಿಸಿದ್ದಾರೆ ಎಂಬುದನ್ನು ಪದೇ ಪದೆ ಬದಿಗೊತ್ತಿ, ಅಂತಾರಾಷ್ಟ್ರ ಮಟ್ಟದಲ್ಲಿ ಬಿಟ್ಟಿ ಪ್ರಚಾರಕ್ಕಾಗಿ ರಾಹುಲ್ ಗಾಂಧಿ ನಕರಾತ್ಮಕ



ಹೇಳಿಕೆಗಳನ್ನು ನೀಡುತ್ತಿದ್ದಾರೆ. ತಾನೊಬ್ಬ ದೇಶ ವಿರೋಧಿ ಎಂಬುದನ್ನು ಮತ್ತೊಮ್ಮೆ ಅವರು ರುಜುವಾತುಪಡಿಸಿದ್ದಾರೆ ಎಂದು ಹೇಳಿದ್ದಾರೆ.

ಮಹಾರಾಷ್ಟ್ರದಲ್ಲಿ ನಡೆದ ಚುನಾವಣೆಗಳಲ್ಲಿ ತಪ್ಪುಗಳಾಗಿದ್ದರೆ ಅದನ್ನು ನಮ್ಮ ನೆಲದ ನ್ಯಾಯಾಂಗ ವ್ಯವಸ್ಥೆಯಲ್ಲಿ ಪ್ರಶ್ನಿಸುವ ಅಧಿಕಾರ ಎಲ್ಲರಿಗೂ ಇದೆ. ಆದರೆ, ರಾಹುಲ್ ಗಾಂಧಿ ಅವರು ಇಲ್ಲದ ಮತ್ತು ಸುಳ್ಳು ವಿಚಾರಗಳನ್ನು ಮುನ್ನಲೆಗೆ ತಂದು ಭಾರತವನ್ನು ಅವಮಾನಿಸಿರುವುದನ್ನು ನೋಡಿದರೆ ಅವರೊಬ್ಬ ನಕರಾತ್ಮಕ ಚಿಂತಕ ಎಂಬುದು ಸಾಬೀತಾಗುತ್ತದೆ ಎಂದು ತಿಳಸಿದ್ದಾರೆ.

ಸಕರಾತ್ಮಕ ಚಿಂತಕರು ಮತ್ತು ನಕರಾತ್ಮಕ ಚಿಂತಕರು ಎಂದು ಎರಡು ಗುಂಪುಗಳನ್ನು ಗುರುತಿಸಬಹುದು. ನಕರಾತ್ಮಕ ಚಿಂತಕರು ಯಾವಾಗಲು ಸಮಸ್ಯೆಗಳನ್ನು ಸೃಷ್ಟಿಸುತ್ತಾರೆ. ಅದೇ ಸಕರಾತ್ಮಕ ಚಿಂತಕರು ಸಮಸ್ಯೆಗಳನ್ನು ಪರಿಹರಿಸಲು ಯತ್ನಿಸುತ್ತಾರೆ. ನಕರಾತ್ಮಕ ಚಿಂತಕರ ಗುಂಪಿಗೆ ರಾಹುಲ್ ಗಾಂಧಿ ಸೇರುತ್ತಾರೆ. ಪ್ರತಿ ಸಲ ವಿದೇಶಿ ನೆಲದಲ್ಲಿ ಭಾರತವನ್ನು ಅವಮಾನಿಸುವುದನ್ನೇ ಮುಂದುವರಿಸಿಕೊಂಡು ಬರುವ ಮೂಲಕ ತಾನು ನಕರಾತ್ಮಕ ಚಿಂತಕ, ದೇಶ ವಿರೋಧಿ ಎಂಬುದನ್ನು ಖಚಿತಪಡಿಸಿದ್ದಾರೆ ಎಂದಿದ್ದಾರೆ.

ಯಾವ ಉದ್ದೇಶಕ್ಕಾಗಿ ವಿದೇಶಕ್ಕೆ ಹೋಗಿದ್ದೇನೆ ಎಂಬುದನ್ನು ಗಮನದಲ್ಲಿಟ್ಟುಕೊಂಡು ರಾಹುಲ್ ಗಾಂಧಿ ಹೇಳಿಕೆ ನೀಡಬೇಕು. ಅದನ್ನು ಬಿಟ್ಟು ಈ ರೀತಿ ದೇಶದ ಆಂತರಿಕ ವಿಚಾರಗಳನ್ನು ವಿದೇಶಿ ನೆಲದಲ್ಲಿ ಮಾತನಾಡುವುದನ್ನು ಬಿಡಬೇಕು. ಇಲ್ಲವಾದಲ್ಲಿ ನ್ಯಾಯಾಂಗದ ಮೊರೆ ಹೋಗಬೇಕಾಗುತ್ತದೆ ಎಂದು ಎಚ್ಚಸಿದ್ದಾರೆ.

## ಸರ್ಕಾರಿ ದೃಶ್ಯಕಲಾ ಕಾಲೇಜು ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಮೈಸೂರು ಸಿದ್ದಾರ್ಥನಗರದ ಚಾಮರಾಜೇಂದ್ರ ದೃಶ್ಯ ಕಲಾ ಕಾಲೇಜು (ಕಾವಾ) ವತಿಯಿಂದ 2025–26ನೇ ಶೈಕ್ಷಣಿಕ ಸಾಲಿನ ಪ್ರಥಮ ಬ್ಯಾಚ್ಯುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿವಿಎ) ( ನಾಲ್ಕು ವರ್ಷದ ಎಂಟು ಸೆಮಿಸ್ಟರ್ ಎನ್.ಇ.ಪಿ. ಪದ್ಧತಿ) ತರಗತಿಗಳ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಪದವಿಯಲ್ಲಿ 3ನೇ ಸೆಮಿಸ್ಟರ್‌ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಚ್ಚುಕಲೆ), ಅನ್ವಯ ಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಹಾಗೂ ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನ ಸ್ನಾತಕ ಪದವಿಯಾಗಿದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸ https://uucms.karnataka.gov.in ಅಥವಾ https://www.cavamysore.karnataka.gov.in ಅಂತರ್ಜಾಲದ ಮೂಲಕವೇ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆಯ ಮೂಲಕ ದಿನಾಂಕ ಮತ್ತು ಇತರೆ ಮಾಹಿತಿಯನ್ನು ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗೆ ಈ ಕಾರ್ಯಾಲಯದ ಸಹಾಯವಾಣಿ 0821–2438931 ಸಂಖ್ಯೆಯನ್ನು ಸಂಪರ್ಕಿಸಬಹುದು.

## ಪೊಲೀಸ್ ಇಲಾಖೆಯಿಂದ ಮಕ್ಕಳಿಗೆ ಉಚಿತ ಬೇಸಿಗೆ ಶಿಬಿರ

**ಚಿಕ್ಕಮಗಳೂರು:** ನಗರದ ರಾಮನಹಳ್ಳಿಯಲ್ಲಿರುವ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಕವಾಯತು ಮೈದಾನದಲ್ಲಿ ಪೊಲೀಸ್ ಇಲಾಖೆ ವತಿಯಿಂದ 5 ವರ್ಷ ಮೇಲ್ಪಟ್ಟ ಮಕ್ಕಳಿಗಾಗಿ ಉಚಿತ ಬೇಸಿಗೆ ಶಿಬಿರವನ್ನು ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಮಕ್ಕಳಿಗೆ ಶಾರೀರಿಕ ವ್ಯಾಯಾಮ, ವೈಯಕ್ತಿಕ ಆಟೋಟಗಳು, ಟೇಕ್ವಾಂಡೋ ತರಬೇತಿ, ಗಾಲ್ಫ್ ತರಬೇತಿ, ಫುಟ್ಬಾಲ್, ವಾಲಿಬಾಲ್, ಥ್ರೋಬಾಲ್ ಆಟಗಳ ಜೊತೆಯಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಾದ ನೃತ್ಯ, ಸಂಗೀತ, ಏರೋಬಿಕ್ಸ್, ಚಿತ್ರಕಲೆ, ಹಾಸ್ಯಕಲೆ, ವೈಯಕ್ತಿಕ ಕಲಾ ಪ್ರದರ್ಶನ ಹಾಗೂ ಆಹಾರ ತಜ್ಞರಿಂದ ವಿಶೇಷ ಕಾರ್ಯಕ್ರಮ, ಶ್ವಾನದಳ ಪ್ರದರ್ಶನ, ಸಂಚಾರ ನಿಯಮಗಳ ಮಾಹಿತಿ, ಅಗ್ನಿಶಾಮಕ ದಳದ ಪ್ರದರ್ಶನ ಹಾಗೂ ಎರಡು ದಿನಗಳ ಶೈಕ್ಷಣಿಕ ಪ್ರವಾಸವನ್ನು ಆಯೋಜಿಸಲಾಗಿದೆ.

ಈ ಶಿಬಿರದಲ್ಲಿ ಜಿಲ್ಲಾಡಳಿತದ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳ ಮಕ್ಕಳು ಸಹ ಭಾಗವಹಿಸಬಹುದು. ಆದುದರಿಂದ ತಮ್ಮ ಅಧೀನದಲ್ಲಿ ಬರುವ ಎಲ್ಲಾ ಸರ್ಕಾರಿ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಯ ಆಸಕ್ತಿಯುಳ್ಳ ಮಕ್ಕಳು ಈ ಶಿಬಿರದಲ್ಲಿ ಹೆಸರು ನೋಂದಾಯಿಸಿಕೊಂಡು ಭಾಗವಹಿಸಲು ನಿರ್ದೇಶನ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿಕ್ರಮ್ ಅಮಟೆ ತಿಳಿಸಿದ್ದಾರೆ. ಆಸಕ್ತ ಪೋಷಕರು, ಮಕ್ಕಳು ಶಿಬಿರ ಸಂಯೋಜಕರಾದ ಡಿ.ಎ.ಆರ್. ಪೊಲೀಸ್ ನಿರೀಕ್ಷಕರನ್ನು (9480805106, 9449304987, 9632551890) ಸಂಪರ್ಕಿಸಬಹುದು ಎಂದು ಅವರು ಮಾಹಿತಿ ನೀಡಿದ್ದಾರೆ.

## ಮಲ್ಲಂದೂರಿನಲ್ಲಿ ವ್ಯಕ್ತಿ ನಾಪತ್ತೆ

**ಚಿಕ್ಕಮಗಳೂರು:** ಮೂಲತಃ ಬಾಗಲಕೋಟೆ ಜಿಲ್ಲೆ ರಾಂಪುರ ತಾಲ್ಲೂಕಿನವರಾಗಿದ್ದು, ಮಲ್ಲಂದೂರಿನಲ್ಲಿ ಕೂಲಿ ಕಾರ್ಮಿಕರಾಗಿದ್ದ ನಾಗರಾಜ (ತಂದೆ ವಿಠಲ ಕಾಜಗಾರ) ಕಳೆದ ನವೆಂಬರ್ 7 ರಿಂದ ನಾಪತ್ತೆಯಾಗಿರುವುದಾಗಿ ಬಾಗಲಕೋಟೆ ಗ್ರಾಮೀಣ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣವು ಮಲ್ಲಂದೂರು ಠಾಣೆಯ ವ್ಯಾಪ್ತಿಗೆ ಸೇರಿದ್ದೆಂಬ ಕಾರಣಕ್ಕೆ ಪ್ರಕರಣವನ್ನು ವರ್ಗಾಯಿಸಿದ್ದು, ಇದೀಗ ಆತನಿಗಾಗಿ ಶೋಧ ನಡೆಯುತ್ತಿದೆ. ಸುಮಾರು 48 ವರ್ಷದ, 5 ಅಡಿ ಎತ್ತರವಿರುವ, ಕನ್ನಡ ಮಾತನಾಡುವ ಈ ವ್ಯಕ್ತಿಯ ಬಗ್ಗೆ ಮಾಹಿತಿ ದೊರಕಿದಲ್ಲಿ ಮಲ್ಲಂದೂರು ಪೊಲೀಸ್ ಠಾಣೆ (08262–248222 ಅಥವಾ 9480805171) ಅಥವಾ ಪೊಲೀಸ್ ಕಂಟ್ರೋಲ್ ರೂಂ (08262–235608) ಗೆ ಮಾಹಿತಿ ನೀಡುವಂತೆ ಕೋರಲಾಗಿದೆ.

# ವಿದ್ಯಾರ್ಥಿ ಜೀವನವನ್ನು ಶಿಕ್ಷಣಕ್ಕೆ ಮೀಸಲಿಡಲು ಕಿಶೋರಿಯರಿಗೆ ಜಡ್ಜ್ ಕಿವಿಮಾತು

**ಚಿಕ್ಕಮಗಳೂರು:** ಕಿಶೋರಿಯರು ತಮ್ಮ ಹದಿಹರೆಯದ ವಯಸ್ಸಿನಲ್ಲಿ ಬೇರೆ ಕಡೆ ತಮ್ಮ ಗಮನಹರಿಸದೇ ತಮ್ಮ ವಿದ್ಯಾರ್ಥಿ ಜೀವನವನ್ನು ಶಿಕ್ಷಣಕ್ಕೆ ಮೀಸಲಿಡುವಂತೆ ಹಿರಿಯ ಸಿವಿಲ್ ನ್ಯಾಯಾಧೀಶರೂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳೂ ಆದ ವಿ.ಹನುಮಂತಪ್ಪ ಕಿವಿಮಾತು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಾರ್ತಾ ಮತ್ತು ಪ್ರಚಾರ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ಹಾಗೂ ಬೆಳವಾಡಿ ಗ್ರಾಮ ಪಂಚಾಯಿತಿ ಆಶ್ರಯದಲ್ಲಿ ಏ.22 ರಂದು




ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿಯಲ್ಲಿ ಬೆಳವಾಡಿ ಗ್ರಾಮದಲ್ಲಿ ಆಯೋಜಿಸಿದ್ದ ಪೋಷಣ್ ಪಕ್ವಾಡ್ ಕಾರ್ಯಕ್ರಮದ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಉತ್ತಮ ಶಿಕ್ಷಣ ವ್ಯಕ್ತಿಯ ವ್ಯಕ್ತಿತ್ವ ಮತ್ತು ಜೀವನವನ್ನು ರೂಪಿಸುವಲ್ಲಿ ಬಹಳ ಪ್ರಾಮುಖ್ಯತೆ ವಹಿಸುತ್ತದೆ. ಅಲ್ಲದೇ ಕಾನೂನು ವ್ಯಕ್ತಿಯ ಹುಟ್ಟಿನಿಂದ ಸಾವಿನವರೆಗೆ ಅಗತ್ಯವಾಗಿದ್ದು, ಅದರ ಅರಿವು ಪ್ರತಿಯೊಬ್ಬರಿಗೂ ಅವಶ್ಯ ಎಂದರಲ್ಲದೆ, ಬಾಲ್ಯ ವಿವಾಹ ಹಾಗೂ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಗಳಂತಹ ಸನ್ನಿವೇಶಗಳಿಂದ ರಕ್ಷಣೆ ಪಡೆಯುವುದರ ಬಗ್ಗೆ ಸಹ ಮಾಹಿತಿ ನೀಡಿದರು.

ರಾಷ್ಟ್ರೀಯ ಪೋಷಣ್ ಅಭಿಯಾನ ಯೋಜನೆಯಡಿಯಲ್ಲಿ ಸುಮಾರು 15 ದಿನಗಳಿಂದ ಜಿಲ್ಲಾದ್ಯಂತ ವಿಶೇಷ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳ ಆರೈ–ಕೆಯ ಜೊತೆಗೆ ಪೌಷ್ಟಿಕ ಆಹಾರದ ಮಹತ್ವದ ಬಗ್ಗೆ ಜನರಿಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಆಯೋಜನೆ ಮಾಡಲಾಗಿದ್ದು, ಅಪೌಷ್ಟಿಕತೆಯನ್ನು ತೊಡೆದು ಹಾಕುವ ನಿಟ್ಟಿನಲ್ಲಿ ಹಾಗೂ ಪೋಷಕಾಂಶದ ಮಹತ್ವವನ್ನು ತಿಳಿಸಲು ಈ ಕಾರ್ಯಕ್ರಮವನ್ನು ನಡೆಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಳವಾಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಸಿರಾಜುನ್ನೀಸಾ ವಹಿಸಿದ್ದರು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಿಶ್ವನಾಥ್, ವಲಯದ ಮೇಲ್ವಿಚಾರಕಿ ಚಂದ್ರಮ್ಮ, ಗ್ರಂಥಪಾಲಕ ಪ್ರಕಾಶ್ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

23ಸಿಕೆಎಂ1: ಬೆಳವಾಡಿ ಗ್ರಾಮದಲ್ಲಿ ಆಯೋಜಿಸಿದ್ದ ಪೋಷಣ್ ಪಕ್ವಾಡ್ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ವಿ.ಹನುಮಂತಪ್ಪ ಮಾತನಾಡಿದರು.

# ಜಿಲ್ಲೆಯ 2.61 ಲಕ್ಷ ಕುಟುಂಬದ ಯಜಮಾನಿಯರಿಗೆ ಗೃಹಲಕ್ಷ್ಮೀ ಸೌಲಭ್ಯ

**ಚಿಕ್ಕಮಗಳೂರು, ಏ.24:** ಗೃಹಲಕ್ಷ್ಮೀ ಯೋಜನೆಯಲ್ಲಿ ಜಿಲ್ಲೆಯ 2,61,415 ಮಂದಿ ಯಜಮಾನಿಯರಿಗೆ 52.28 ಕೋಟಿ ರೂ. ನೇರವಾಗಿ ಸಂದಾಯವಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ತಿಳಿಸಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಸಾರಿಗೆ ಸಂಸ್ಥೆಗೆ ಸರ್ಕಾರ ಶಕ್ತಿ ಯೋಜನೆಯಡಿ ಭರಪೂರ ಅನುದಾನ ಸರ್ಕಾರ ಬಿಡುಗಡೆ ಮಾಡಿರುವುದರಿಂದ ವಿಶೇಷವಾಗಿ ಮಾರ್ಚ್ ತಿಂಗಳಲ್ಲಿ ರಸ್ತೆ ಸಾರಿಗೆ ನಿಗಮದ 47 ಹೊಸ ಬಸ್‌ಗಳು ಜಿಲ್ಲೆಗೆ ಬಂದಿದ್ದು.ಅವುಗಳನ್ನು ಅಗತ್ಯವಿರುವ ಹೆಚ್ಚು ಜನದಟ್ಟಣೆ ಇರುವ ಮಾರ್ಗಗಳಲ್ಲಿ ಸಂಚರಿಸಲು ಒದಗಿಸಲಾಗುವುದು ಎಂದು ಅವರು ಹರ್ಷ ವ್ಯಕ್ತಪಡಿಸಿದರು.

ಆದಾಯ ತೆರಿಗೆ ಪಾವತಿದಾರರು ಹಾಗೂ ಜಿ.ಎಸ್.ಟಿ. ಪಾವತಿದಾರ ಕುಟುಂಬದ ಮಹಿಳೆಯರಿಗೆ ಗೃಹಲಕ್ಷ್ಮೀ ಯೋಜನೆಯ ಲಾಭವಾಗದಿರುವ ಬಗ್ಗೆ ಚರ್ಚಿಸಲಾಗಿದ್ದು, ಇದನ್ನು ಈ ಕುಟುಂಬಗಳಿಗೂ ವಿಸ್ತರಿಸುವಂತೆ ರಾಜ್ಯ ಸರ್ಕಾರಕ್ಕೆ ಮನವಿ ಮಾಡಲು ನಿರ್ಣಯಿಸಲಾಯಿತು.




ಅನ್ನಭಾಗ್ಯ ಯೋಜನೆಯಡಿ ಡಿ.24ರವರೆಗೆ ಫಲಾನುಭವಿಗಳ ಖಾತೆಗೆ ನೇರವಾಗಿ ನಗದು ಜಮಾ ಮಾಡಲಾಗುತ್ತಿದ್ದು, ಮಾರ್ಚ್ ತಿಂಗಳಿನಿಂದ ಫಲಾನುಭವಿಗಳಿಗೆ ಹಣದ ಬದಲಾಗಿ ತಲಾ 5 ಕೆ.ಜಿ. ಅಕ್ಕಿಯನ್ನು ಉಚಿತವಾಗಿ ಜಿಲ್ಲೆಯ 531 ಪಡಿತರ ವಿತರಣಾ ಕೇಂದ್ರಗಳ ಮೂಲಕ ಜಿಲ್ಲೆಯ 8,01,536 ನೀಡಲಾಗಿದೆ ಎಂದು ಆಹಾರ ಇಲಾಖೆಯ ಅಧಿಕಾರಿ ಸವಿತಾ ಸಭೆಗೆ ತಿಳಿಸಿದರು.

ಜಿಲ್ಲೆಯ 3,54,165 ಬಳಕೆದಾರರ (ಮೀಟರ್‌ಗಳು) ಪೈಕಿ 3,11,409 ಬಳಕೆದಾರರ (ಮೀಟರ್‌ಗಳು) ಸುಮಾರು 10 ಲಕ್ಷ ಜನರು ಉಚಿತವಾಗಿ ವಿದ್ಯುತ್ ಸೌಲಭ್ಯ ಪಡೆಯುತ್ತಿದ್ದು, ಇದಕ್ಕಾಗಿ ರಾಜ್ಯ ಸರ್ಕಾರ ಮಾಹೆಯಾನ 11.79 ಕೋಟಿ ರೂ.ಗಳನ್ನು ಮೆಸ್ಕಾಂಗೆ ಭರಿಸುತ್ತಿದೆ ಎಂದು ಮೆಸ್ಕಾಂ ಸೂಪರಿಂಟೆಂಡಿಂಗ್ ಇಂಜಿನಿಯರ್ ಮಂಜುನಾಥ್ ಸಭೆಗೆ ತಿಳಿಸಿದರು. ಜನಸಂಪರ್ಕ ಸಭೆಯೂ ಸೇರಿದಂತೆ ಇಲಾಖೆಯ ಹಲವು ವಿಷಯಗಳ ಬಗ್ಗೆ ಸದಸ್ಯರು ಈ ಸಂದರ್ಭದಲ್ಲಿ ಚರ್ಚಿಸಿದರು.

ಉದ್ಯೋಗ ವಿನಿಮಯ ಕೇಂದ್ರದಲ್ಲಿ ಇದುವರೆಗೂ 18111 ಪದವೀಧರರೂ, 96 ಡಿಪ್ಲೊಮಾ ಪದವೀಧರರು ಯುವನಿಧಿಗೆ ಅರ್ಜಿ ಸಲ್ಲಿಸಿದ್ದು, ಅದಕ್ಕಾಗಿ ಇದುವರೆಗೆ ಸುಮಾರು 6 ಕೋಟಿ ರೂ. ಭರಿಸಲಾಗಿದೆ ಎಂದು ಉದ್ಯೋಗ ವಿನಿಮಯ ಕೇಂದ್ರದ ಅಧಿಕಾರಿ ನದಾಫ್ ತಿಳಿಸಿದರು.

ಶಕ್ತಿ ಯೋಜನೆಯಡಿ ಜಿಲ್ಲೆಯ ಬಸ್‌ಗಳಲ್ಲಿ ಜೂನ್ 2023 ರಿಂದ ಈವರೆಗೆ ಅಂದರೆ ಮಾರ್ಚ್ 2025ರವರೆಗೆ 3.84 ಕೋಟಿ ಮಹಿಳೆಯರು ಉಚಿತವಾಗಿ ಸಂಚರಿಸಿದ್ದು, 147 ಕೋಟಿ ರೂ.ಗಳನ್ನು ಸರ್ಕಾರ ರಾಜ್ಯ ರಸ್ತೆ ಸಾರಿಗೆ ನಿಗಮಕ್ಕೆ ನೀಡಿದೆ ಎಂದು ನಿಗಮದ ಸಂಚಾರಿ ವಿಭಾಗದ ಅಧಿಕಾರಿ ಚನ್ನಬಸಪ್ಪ ತಿಳಿಸಿದರು.

ನ್ಯಾಯಬೆಲೆ ಅಂಗಡಿಗಳ ಮುಂಭಾಗದಲ್ಲಿ ಗ್ಯಾರಂಟಿ ಯೋಜನೆಗಳ ನಾಮಫಲಕವನ್ನು ತೂಗು ಹಾಕಬೇಕೆಂದು ಸದಸ್ಯರು ಸಭೆಯ ಗಮನಕ್ಕೆ ತಂದಾಗ ಈ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್.ಕೀರ್ತನ ತಿಳಿಸಿದರು.

ಪ್ರತೀ ತಿಂಗಳು ಮಾಸಿಕ ಪ್ರಗತಿ ಪರಿಶೀಲನಾ ಸಭೆಗಳು ನಡೆಯುತ್ತಿದ್ದು, ತಾಲ್ಲೂಕು ಸಮಿತಿಗಳು ತಾಲ್ಲೂಕು ಮಟ್ಟದಲ್ಲಿ ಸಭೆ, ಸಂವಾದ, ಫಲಾನುಭವಿಗಳ ಸಮಾವೇಶಗಳನ್ನು ಅಲ್ಲಲ್ಲಿ ನಡೆಸುತ್ತಿರುವ ಬಗ್ಗೆ ಪ್ರಸ್ತಾಪಿಸಿ ಪ್ರಶಂಸಿಸಿದ ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಸಂಜೀವಿನಿ ಗುಂಪುಗಳನ್ನು ರಚಿಸುವಲ್ಲಿ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯರು ಪ್ರಮುಖ ಪಾತ್ರ ವಹಿಸಬೇಕೆಂದು ಸಲಹೆ ನೀಡಿದರು. ಜಿ.ಪಂ. ಉಪಕಾರ್ಯದರ್ಶಿ ಶಂಕರ್ ಕೊರವರ ಅವರು ಮಾತನಾಡಿ, ಪಂಚ ಗ್ಯಾರಂಟಿ ಅನುಷ್ಠಾನದ ವಿಚಾರದಲ್ಲಿ ಈಗಲೂ ಜಿಲ್ಲೆ ಪ್ರಥಮ ಸ್ಥಾನದಲ್ಲಿ ಉಳಿದಿದ್ದು, ಅಧಿಕಾರಿಗಳು ಅದನ್ನು ಉಳಿಸಿಕೊಳ್ಳುವಲ್ಲಿ ಶ್ರಮ ವಹಿಸಬೇಕು ಎಂದರು.

ಸಭೆಯಲ್ಲಿ ಪ್ರಾಧಿಕಾರದ ಜಿಲ್ಲಾ ಉಪಾಧ್ಯಕ್ಷರುಗಳಾದ ಡೈರಿ ಮಂಜಣ್ಣ, ಶಫೀವುಲ್ಲ, ಹೆಚ್.ಎಸ್.ಕೃಷ್ಣೇಗೌಡ, ಡಿ.ಜಿ.ಚಂದ್ರಮೌಳಿ, ಹೇಮಾವತಿ ಸೇರಿದಂತೆ ಪ್ರಾಧಿಕಾರದ ತಾಲ್ಲೂಕು ಅಧ್ಯಕ್ಷರುಗಳು, ತಾ.ಪಂ. ಕಾರ್ಯ ನಿರ್ವಹಣಾಧಿಕಾರಿಗಳು, ಕೌಶಲ್ಯ ಅಭಿವೃದ್ಧಿ ಇಲಾಖೆ ಅಧಿಕಾರಿ ಹೆಚ್.ಜಿ.ಪ್ರಶಾಂತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಹಾಂತೇಶ ಭಜಂತ್ರಿ ಭಾಗವಹಿಸಿದ್ದರು.

24ಸಿಕೆಎಂ ಫೋಟೋ 3 ಹಾಗೂ 3ಎ: ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ನಡೆದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಮಾತನಾಡಿದರು.

24ಸಿಕೆಎಂ ಫೋಟೋ 4: ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದಿಂದ ಇಂದು ಡಾ.ರಾಜ್‌ಕುಮಾರ್ ಅವರ 97ನೇ ಜನ್ಮ ದಿನಾಚರಣೆ ಪ್ರಯುಕ್ತ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಾಯಿತು. ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ಜಿ.ಪಂ. ಉಪ ಕಾರ್ಯದರ್ಶಿ ಶಂಕರ್ ಗೊರವರ, ಪ್ರಾಧಿಕಾರದ ಪದಾಧಿಕಾರಿಗಳು ಇದ್ದರು.

### ಡಾ.ರಾಜ್ ಕುಮಾರ್‌ರವರ 97ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ

# ಡಾ. ರಾಜ್‌ಕುಮಾರ್ ಚಲನಚಿತ್ರಗಳಲ್ಲಿವೆ ಉತ್ತಮ ಸಂದೇಶ

**ಚಿತ್ರದುರ್ಗ:** ನಟಸಾರ್ವಭೌಮ, ವರನಟ ಡಾ. ರಾಜ್ ಕುಮಾರ್ ಅವರ ಚಲನಚಿತ್ರಗಳು ನಮ್ಮ ನಿತ್ಯದ ಜೀವನಕ್ಕೆ ಅನುಕೂಲ ಹಾಗೂ ಅಳವಡಿಸಿಕೊಳ್ಳುವ ರೀತಿಯಲ್ಲಿ ಉತ್ತಮ ಸಂದೇಶ ನೀಡಿದ್ದಾರೆ ಎಂದು ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ನಟಸಾರ್ವಭೌಮ ಡಾ.ರಾಜ್‌ಕುಮಾರ್‌ರವರ 97ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಡಾ.ರಾಜ್ ಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಒಂದು ಕುಗ್ರಾಮದ ಮುತ್ತುರಾಜ್ ಅವರು ಚಲನಚಿತ್ರ ಇತಿಹಾಸದಲ್ಲಿಯೇ ಮೈಲಿಗಲ್ಲಾಗಿ, ಡಾ.ರಾಜ್‌ಕುಮಾರ್ ಆಗಿ ಜವಾಬ್ದಾರಿ ನಿಭಾಯಿಸುವುದರ ಜತೆಗೆ ನಮ್ಮೆಲ್ಲರಿಗೂ ಉತ್ತಮ ಸಂದೇಶ ನೀಡುವ 200ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಾಯಕ ನಟರಾಗಿ ನಟಿಸಿ, ಅರ್ಪಣೆ ಮಾಡಿದ್ದಾರೆ ಎಂದು ತಿಳಿಸಿದ ಅವರು, 2017ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಾ. ರಾಜ್ ಕುಮಾರ್ ಅವರ ಜನ್ಮ ದಿನಾಚರಣೆಯನ್ನು ಸರ್ಕಾರಿ ಕಾರ್ಯಕ್ರಮವಾಗಿ ಆಚರಿಸಲು ಆದೇಶ ಮಾಡಿದರು ಎಂದರು.

ಡಾ.ರಾಜ್ ಕುಮಾರ್ ಅವರು ತಮ್ಮ ಇಚ್ಚೆಯಂತೆ ಮರಣದ ನಂತರ ತಮ್ಮ ನೇತ್ರಗಳನ್ನು ದಾನ ಮಾಡಿದ್ದಾರೆ. ಇಂದಿಗೂ ಡಾ.ರಾಜ್ ಕುಮಾರ್ ಅವರ ಹೆಸರಿನಲ್ಲಿ ನೇತ್ರದಾನ ಶಿಬಿರಗಳು ನಡೆಯುತ್ತಿವೆ. ಐಎಎಸ್, ಐಪಿಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರಗಳ ಸ್ಥಾಪನೆ, ಅನಾಥಾಶ್ರಮಗಳಿಗೂ ನೆರವು ನೀಡಿದ್ದಾರೆ. ಡಾ.ರಾಜ್ ಕುಮಾರ್ ಮರಣದ ನಂತರ ಅವರ ಕುಟುಂಬವು ಸಹ ಡಾ.ರಾಜ್ ರೂಪಿಸಿರುವ ಕಾರ್ಯಕ್ರಮಗಳನ್ನು ಮುಂದುವರೆಸಿಕೊಂಡು ಹೋಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಮಾತನಾಡಿ, ಡಾ.ರಾಜ್ ಕುಮಾರ್ ಅವರು ಸರಳತೆ ಮತ್ತು ಜೀವನ ಮೌಲ್ಯದ ತತ್ವಗಳ ಪಾಲನೆ ಮಾಡುವ ಮೂಲಕ ಬದುಕಿರುವರೆಗೂ ಸದಾ ಲವಲವಿಕೆಯಿಂದ ಇದ್ದರು. ಡಾ.ರಾಜ್ ಕುಮಾರ್ ನಟನೆಯ ಪ್ರತಿಯೊಂದು ಚಿತ್ರದಲ್ಲಿಯೂ ಒಂದು ತತ್ವ ಹಾಗೂ ಸಂದೇಶವಿದೆ. ಮನೆಯ ಕುಟುಂಬದ ಸದಸ್ಯರೆಲ್ಲರೂ ಸೇರಿ ಒಟ್ಟಿಗೆ ಕುಳಿತು ನೋಡುವ ಚಲನಚಿತ್ರಗಳಾಗಿವೆ ಎಂದರು.

ಡಾ.ರಾಜ್ ಕುಮಾರ್ ಅವರು ಕನ್ನಡ ಸಾಹಿತ್ಯ ಹಾಗೂ ಸಂಗೀತಕ್ಕೆ ಅಮೂಲ್ಯವಾದ ಕೊಡುಗೆ ನೀಡಿದ್ದಾರೆ. ಡಾ.ರಾಜ್ ಅವರ ಮರಣದ ನಂತರವೂ ಸಹ ಅವರ ಕಣ್ಣುಗಳು ಇನ್ನೊಬ್ಬರ ಬಾಳಿಗೆ ಬೆಳಕಾಗಿವೆ. ಅವರ ಸಂದೇಶದಲ್ಲಿ ನಾವೆಲ್ಲರೂ ಸಾಗೋಣ ಎಂದು ಹೇಳಿದರು.



ಸಾಹಿತಿ ಹುರಳಿ ಎಂ ಬಸವರಾಜ್ ಉಪನ್ಯಾಸ ನೀಡಿ, ಡಾ.ರಾಜ್ ಕುಮಾರ್ ಅವರು ಸರಳ, ಸಜ್ಜನಿಕೆ, ವಿನಯ ವಂತಿಕೆಯ ಆದರ್ಶ ವ್ಯಕ್ತಿಯಾಗಿದ್ದಾರೆ. ಡಾ.ರಾಜ್ ನಟಿಸಿದ ಸಿನಿಮಾಗಳೆಲ್ಲವೂ ಸೂಪರ್ ಹಿಟ್ ಸಿನಿಮಾಗಳಾಗಿವೆ. ಬೇಡರ ಕಣ್ಣಪ್ಪ ಎಂಬ ಮೊದಲನೇ ಸಿನಿಮಾ, ನಂತರ 100 ನೇ ಸಿನಿಮಾ ಭಾಗ್ಯದ ಬಾಗಿಲು, 150ನೇ ಸಿನಿಮಾ ಗಂಧದ ಗುಡಿ ಹಾಗೂ 200ನೇ ಸಿನಿಮಾವಾಗಿ ದೇವತಾ ಮನುಷ್ಯ, ಅವರ ಕೊನೆಯ ಕ್ಷಣದಲ್ಲಿ ನಟಿಸಿದ ಶಬ್ಧವೇದಿ ಸಿನಿಮಾ ಅಭೂತಪೂರ್ವವಾದ ಯಶಸ್ವಿಗಳಿಸಿತು. ರಾಜ್ ಕುಮಾರ್ ನಟಿಸಿದ ಕಸ್ತೂರಿ ನಿವಾಸ, ಸಾಕ್ಷಾತ್ಕಾರ, ಹೊಸ ಬೆಳಕು, ಬಬ್ರುವಾಹನ, ಹಾಲುಜೇನು, ಶ್ರೀಕೃಷ್ಣದೇವರಾಯ, ಇಮ್ಮಡಿ ಪುಲಿಕೇಶಿ, ಮಂತ್ರಾಲಯ ಮಹಾತ್ಮೆ, ಶ್ರೀನಿವಾಸ ಕಲ್ಯಾಣ ಸೇರಿದಂತೆ ನೂರಾರು ಚಲನಚಿತ್ರಗಳಲ್ಲಿ ಅಭಿನಯಿಸುತ್ತಾ ದಕ್ಷಣ ಭಾರತದ ಸಿನಿಮಾ ಜಗತ್ತಿನಲ್ಲಿ ತಾವು ನಟಿಸಿದ ಎಲ್ಲ ಸಿನಿಮಾಗಳಲ್ಲಿ ನಾಯಕ ನಟನಾಗಿ ನಟಿಸಿದ ಏಕೈಕ ವ್ಯಕ್ತಿ ವರನಟ ಡಾ.ರಾಜ್ ಕುಮಾರ್ ಎಂದು ಹೇಳಿದರು.

ಡಾ.ರಾಜ್ ನಟಿಸಿದ ಎಲ್ಲ ಪಾತ್ರಗಳಿಗೂ ಸಹ ಜೀವಕಳೆ ತಂದುಕೊಡುತ್ತಾರೆ. ಹಳ್ಳಿಹೈದನಾಗಿ, ಕುರಿ ಕಾಯುವವನಾಗಿ, ರಾಜನಾಗಿ, ಸಾಮ್ರಾಜ್ಯದ ಒಡೆಯನಾಗಿ, ಮನೆಯ ಯಜಮಾನನಾಗಿ ನಟಿಸಿದ ಎಲ್ಲ ಚಿತ್ರಗಳಲ್ಲಿಯೂ ಸಹ ಅಭೂತಪೂರ್ವ ಪ್ರತಿಮೆ ಹೊರಹೊಮ್ಮುತ್ತದೆ ಎಂದರು.

ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್ ಮಾತನಾಡಿ, ತೆರೆಯ ಮೇಲಾದರೂ ಸರಿ ದುಶ್ಚಟವನ್ನು ಬಿಂಬಿಸುವ ಯಾವುದೇ ಪಾತ್ರವನ್ನು ಡಾ. ರಾಜ್‌ಕುಮಾರ್ ಅವರು ಅಭಿನಯಿಸಲಿಲ್ಲ. ಡಾ.ರಾಜ್ ಅವರಿಗೂ ಚಿತ್ರದುರ್ಗಕ್ಕೂ ಬಹಳ ನಂಟಿದೆ. ಡಾ.ರಾಜ್ ಅವರಿಗೆ "ಕುಮಾರ ರಾಜ್" ಎಂದು ಚಿತ್ರದುರ್ಗದವರು ಬಿರುದು ನೀಡಿದ್ದಾರೆ ಎಂದು ಸ್ಮರಿಸಿದ ಅವರು, ಮುಂಬರುವ ದಿನಗಳಲ್ಲಿ ಡಾ.ರಾಜ್ ಅವರ ಜನ್ಮದಿನದ ಶತಮಾನೋತ್ಸವದ ಅಂಗವಾಗಿ ಡಾ.ರಾಜ್ ಹೆಸರಿನಲ್ಲಿ ನೆನಪಿನಲ್ಲಿ ಉಳಿಯುವಂತಹ ಕಾರ್ಯ ಮಾಡುವಂತೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರಿಗೆ ಮನವಿ ಮಾಡಿದರು.

ಜಿಲ್ಲಾ ವಾರ್ತಾಧಿಕಾರಿ ಬಿ.ವಿ. ತುಕಾರಾಂರಾವ್ ಪ್ರಾಸ್ತಾವಿಕವಾಗಿ ಮಾತನಾಡಿ, ಡಾ.ರಾಜ್ ಕುಮಾರ್ ಅವರು ಸುಮಾರು 200ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಾಯಕ ನಟರಾಗಿ ವೈವಿಧ್ಯಮಯವಾದ ಪಾತ್ರಗಳಲ್ಲಿ ಅಭಿನಯ ಮಾಡಿದ್ದಾರೆ. ಯಾವುದೇ ಪಾತ್ರವಾದರೂ ಸಹ ಅದರಲ್ಲಿ ತಲ್ಲೀನರಾಗಿ ನಟಿಸುತ್ತಿದ್ದ ರೀತಿ ಬಹಳ ಮೆಚ್ಚುಗೆಗೆ ಪಾತ್ರವಾಗಿದೆ. ಡಾ.ರಾಜ್ ಕುಮಾರ್ ಅವರಿಗೆ ನಟಸಾರ್ವಭೌಮ, ರಸಿಕರ ರಾಜ, ವರನಟ ಸೇರಿದಂತೆ ಅನೇಕ ಬಿರುದುಗಳಿವೆ. ಬಹುತೇಕ ಎಲ್ಲರೂ ಡಾ.ರಾಜ್ ಅವರನ್ನು ಅಣ್ಣಾವ್ರು ಎಂದು ಕರೆಯುತ್ತಾರೆ ಎಂದು ತಿಳಿಸಿದ ಅವರು, ನಟನೆ ಹಾಗೂ ಗಾಯನಕ್ಕೆ ರಾಷ್ಟ್ರಪ್ರಶಸ್ತಿ ಪಡೆದ ಏಕೈಕ ಕಲಾವಿದ ಡಾ.ರಾಜ್ ಕುಮಾರ್ ಎಂದು ತಿಳಿಸಿದರು.

ರಾಜ್ ಕುಮಾರ್ ಅವರು ತನ್ನ ಪಾತ್ರಗಳ ಆಯ್ಕೆಯಲ್ಲಿ ಬಹಳ ಜಾಗೃತೆ ವಹಿಸುತ್ತಿದ್ದರು. ಅವರಿಗಿದ್ದ ಅಪಾರ ಅಭಿಮಾನಿಗಳಿಗೆ ಅವರ ಪಾತ್ರಗಳು ಸಮಾಜ ಕಂಟಕ ಸಂದೇಶ ಕೊಡಬಾರದು ಎಂಬ ಕಾಳಜಿ ಅವರಿಗಿತ್ತು ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ ಮಾತನಾಡಿ, ಅಂತರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿಗಳಿಸಿದ ಕನ್ನಡದ ಮೇರು ನಟ ಡಾ.ರಾಜ್ ಕುಮಾರ್. ನಾಡು-ನುಡಿಯ ಹೋರಾಟದ ಜತೆಗೆ ಚಲನಚಿತ್ರಗಳಲ್ಲಿ ಸಮಾಜಕ್ಕೆ ಉತ್ತಮ ಸಂದೇಶ ನೀಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ಕೆಡಿಪಿ ಸದಸ್ಯ ನಾಗರಾಜ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ, ರಂಗಕರ್ಮಿ ಕೆಪಿಎಂ ಗಣೇಶಯ್ಯ ಸೇರಿದಂತೆ ಡಾ. ರಾಜ್ ಕುಮಾರ್ ಅಭಿಮಾನಿಗಳು ಇದ್ದರು. ಚಿತ್ರದುರ್ಗದ ಎಂ.ಕೆ.ಹರೀಶ್ ಮತ್ತು ಸಂಗಡಿಗರು ಡಾ. ರಾಜ್‌ಕುಮಾರ್ ಅವರ ಗೀತಗಾಯನ ನಡೆಸಿಕೊಟ್ಟರು.

## ಜಾತಿಗಣತಿ ಬಗ್ಗೆ ಒಕ್ಕಲಿಗ ಲಿಂಗಾಯಿತರ ತೀವ್ರ ವಿರೋಧ

**ಬೆಂಗಳೂರು :**ಟ ರಾಜ್ಯಾದ್ಯಂತ ತೀವ್ರ ಕುತೂಹಲ ಕೆರಳಿಸಿರುವ ಹಿಂದುಳಿದ ವರ್ಗಗಳ ಶಾಶ್ವತ ಆಯೋಗದ ಜಾತಿವಾರು ಜನಗಣತಿ ವರದಿಯನ್ನು ರಾಜ್ಯ ಸರ್ಕಾರ ಒಪ್ಪಿಕೊಂಡಿದೆ.

ಕಾಂತರಾಜು ನೇತೃತ್ವದ ಆಯೋಗ ಸಿದ್ಧಪಡಿಸಿದ್ದ ವರದಿಯನ್ನು ಆನಂತರ ಸಮಗ್ರವಾಗಿ ಪರಿಶೀಲನೆ ನಡೆಸಿ ಲಭ್ಯವಿರುವ ದತ್ತಾಂಶಗಳ ಆಧಾರದಲ್ಲಿ ಜಯಪ್ರಕಾಶ್ ಹೆಗಡೆ ನೇತೃತ್ವದ ಆಯೋಗ ರಾಜ್ಯ ಸರ್ಕಾರಕ್ಕೆ ಸಲ್ಲಿಸಿದೆ.


**ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ ದಾವಣಗೆರೆ**

ಪಿ.ಅಂಡ್ ಎಸ್.ಸಿ ನಂ.21/2025

**ಅರ್ಜಿದಾರರು :** ಆಶಾ ಮತ್ತು ಇನ್ನೊಬ್ಬರು

**-ವಿರುದ್ಧ-**

**ಎದುರುದಾರರು:** ಯಾರೂ ಇಲ್ಲ

**ಸಾರ್ವಜನಿಕ ಪ್ರಕಟಣೆ**

**ಸಿಪಿಸಿ ಸಂಹಿತೆ ಆದೇಶ 5 ನಿಯಮ 20 ರ ಅಡಿಯಲ್ಲಿ ನೀಡಲಾದ ಪ್ರಕಟಕಾ ನೋಟೀಸ್**

ಮೇಲ್ಕಂಡ ಪ್ರಕರಣದಲ್ಲಿ ಅರ್ಜಿದಾರರು ಷೆಡ್ಯೂಲ್ ಸೊತ್ತುಗಳಿಗೆ ಸಂಬಂದಿಸಿದಂತೆ ಸರೋಜಮ್ಮ ಇವರು ದಿನಾಂಕ: 24-01-2022 ರಂದು ನೋಂದಾಯಿತ ವಿಲ್ ಯಾನೇ ಮರಣಾ ಶಾಸನ ಪತ್ರವನ್ನು ಬರೆದಿಟ್ಟು ಮರಣ ಹೊಂದಿದ್ದು, ಸದರಿ ಮರಣಾ ಪತ್ರಕ್ಕೆ ಸಂಬಂದಿಸಿದಂತೆ ಅರ್ಜಿದಾರರು ಪ್ರೋಬೇಟ್ ಆದೇಶ ಕೋರಿ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ ಯಾರಾದಾದರೂ ತಕರಾರು ಇದ್ದಲ್ಲಿ ನಿಮ್ಮ ಹಾಜರಾತಿಗಾಗಿ ದಿನಾಂಕ : 16 /6/2025 ರಂದು ಬೆಳಿಗ್ಗೆ 11-00 ಗಂಟೆಗೆ ನೀವು ಖುದ್ದಾಗಿ ಅಥವಾ ವಕೀಲರ ಮುಖಾಂತರವಾಗಲೇ ಪ್ರಕರಣದಲ್ಲಿ ಹಾಜರಿದ್ದು, ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಸದರಿ ಪ್ರಕರಣವನ್ನು ಏಕಪಕ್ಷೀಯ ತೀರ್ಮಾನ ತೆಗೆದುಕೊಳ್ಳಲಾಗುವುದು ತಿಳಿಯಿರಿ.
ನ್ಯಾಯಾಲಯದ ಮೊಹರು ಮತ್ತು ನನ್ನ ಸಹಿಯೊಂದಿಗೆ ದಿನಾಂಕ: 15/4/2025 ರಂದು ಪತ್ರಿಕ ಪ್ರಕಟಣೆ ನೀಡಲಾಗಿದೆ.

# **ಷೆಡ್ಯೂಲ್** #

ಚನ್ನಗಿರಿ ತಾಲ್ಲೂಕ್, ಸಂತೇಬೆನ್ನೂರು 1ನೇ ಹೋಬಳಿ, ಬೆಳ್ಳಿಗನೂಡು ಗ್ರಾಮದ ರಿ.ಸ.ನಂ. 40/1 ರಲ್ಲಿನ 03 ಎಕರೆ 03 ಸೆಂಟ್ಸ್ ಜಮೀನಿಗೆ ಚಕ್ಕುಬಂದಿ –

ಪೂರ್ವಕ್ಕೆ : ಎ.ಕೆ. ಭೀಮಪ್ಪ ಇವರ ಜಮೀನು
ಪಶ್ಚಿಮಕ್ಕೆ: ಉಮಾಪತಿ ಇವರ ತೋಟದ ಜಮೀಯ
ಉತ್ತರಕ್ಕೆ : ಭೀಮನೇರಿ ಗ್ರಾಮದ ಜಮೀನುಗಳು
ದಕ್ಷಿಣಕ್ಕೆ: ಜಮೀನಿನ ಓಡಾಡುವ ದಾರಿ

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಮುಖ್ಯ ಆಡಳಿತಾತ್ಮಕಾಧಿಕಾರಿಗಳು,
ಮಾನ್ಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯ, ದಾವಣಗೆರೆ

ಸಹಿ/–
ಅರ್ಜಿದಾರರ ಪರ ವಕೀಲರು


# ಬಿರುಗಾಳಿಗೆ ಧರೆಗುಳಿದ ಅಡಿಕೆ ಮರಗಳು

**ಚಿಕ್ಕಜಾಜೂರು:** ಸೋಮವಾರ ಸಂಜೆ ಬೀಸಿದ ಬಿರುಗಾಳಿ ಹಾಗೂ ಅಲಿಕಲ್ಲು ಮಳೆಗೆ ಸಾವಿರಾರು ಅಡಿಕೆ ಮರಗಳು ಹಾಗೂ ಹತ್ತಾರು ಮಾವಿನ ಮರಗಳು, ಮೂರು ವಿದ್ಯುತ್ ಪರಿವರ್ತಕಗಳು ಹಾಗೂ ಹತ್ತಾರು ವಿದ್ಯುತ್ ಕಂಬಗಳು ಉರುಳಿ ಬಿದ್ದಿದ್ದು, ತಹಶೀಲ್ದಾರ್ ಬೀಬಿ ಫಾತಿಮಾ ನೇತೃತ್ವದ ಮಂಗಳವಾರ ತಂಡ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲಿಸಿತು.

ಸಮೀಪದ ಚಿಕ್ಕಎಮ್ಮಿಗನೂರು ಗ್ರಾಮದಲ್ಲಿ ಸೋಮವಾರ ಬಿರುಗಾಳಿಗೆ ಅಂದಾಜು 30-40 ಎಕರೆ ಪ್ರದೇಶದಲ್ಲಿ ಬೆಳೆದು ನಿ0ತಿದ್ದ ಅಡಿಕೆ ತೋಟಗಳಲ್ಲಿ ಮರಗಳು ಬುಡ ಸಮೇತ ಉರುಳಿ ಬಿದ್ದಿವೆ. ಮತ್ತೆ ಕೆಲವಡೆ ಅರ್ಧಕ್ಕೆ ಮುರಿದು ಬಿದ್ದಿವೆ. ಬಿರುಗಾಳಿಗೆ ಗ್ರಾಮದ ಕೆಲವು ತೋಟಗಳಲ್ಲಿದ್ದ ವಿದ್ಯುತ್ ಪರಿವರ್ತಕಗಳು ಬುಡ ಸಮೇತ ನೆಲಕ್ಕುರುಳಿವೆ, ಅಲ್ಲದೆ, ರೈತರ ಕೊಳವೆ ಬಾವಿಗಳಿಗೆ ಸಂಪರ್ಕ ಕಲ್ಪಿಸಿದ್ದ 10ಕ್ಕೂ ಹೆಚ್ಚು ವಿದ್ಯುತ್ ಕಂಬಗಳ ಮೇಲೆ ಮರಗಳು ಉರುಳಿ ಬಿದ್ದ ಪರಿಣಾಮ ಕಂಬಗಳು ಮುರಿದು ಬಿದ್ದಿವೆ. ಗ್ರಾಮದ ಹಲವು ಶೆಡ್‌ಗಳಿಗೆ ಹಾಕಲಾಗಿದ್ದ ತಗಡಿನ ಶೀಟ್‌ಗಳು ಹಾರಿಹೋಗಿವೆ.

ಚಿಕ್ಕಎಮ್ಮಿಗನೂರು ಪಿಡಿಒ ಶಶಿಕುಮಾರ್, ಬಿ.ದುರ್ಗ ಹೋಬಳಿಯ ಕಂದಾಯ ನಿರೀಕ್ಷಕ ಅನಿಲ್‌ಕುಮಾರ್, ಗ್ರಾಮ ಅಡಳಿತಾಧಿಕಾರಿ ಗಂಗಾಧರ್, ಗ್ರಾಮ ಪಂಚಾಯಿತಿ ಸದಸ್ಯರು, ಮುಖಂಡರು ಹಾಗೂ ರೈತರು ಇದ್ದರು.



**ಚಿಕ್ಕಜೂರು ಸಮೀಪದ ಚಿಕ್ಕಮ್ಮಿಗನೂರು ಗ್ರಾಮದಲ್ಲಿ ಸೋಮವಾರ ಸಂಜೆ ಬೀಸಿದ ಬಿರುಗಾಳಿಗೆ ಗ್ರಾಮದ ಅಡಿಕೆ ತೋಟವೊಂದರಲ್ಲಿ ಉರುಳಿ ಬಿದ್ದ ಅಡಿಕೆ ಮರಗಳನ್ನು ತಹಶೀಲ್ದಾರ್ ಬೀಬಿ ಫಾತಿಮಾ ವೀಕ್ಷಿಸಿದರು.**

### ಬಳ್ಳಾರಿ: ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

# 'ಶುದ್ಧೀಕರಿಸಿದ' ನೀರು ಪೂರೈಕೆಗೆ ಆದ್ಯತೆಯಾಗಲಿ: ಡಾ.ಕೆ.ವಿ.ತ್ರಿಲೋಕ ಚಂದ್ರ

**ಬಳ್ಳಾರಿ :** ಬೇಸಿಗೆಯಲ್ಲಿ ಜಿಲ್ಲೆಯ ಎಲ್ಲಾ ಗ್ರಾಪಂ ವ್ಯಾಪ್ತಿಯ ಹಳ್ಳಿಗಳಲ್ಲಿ ಸಮರ್ಪಕವಾಗಿ ಕ್ಲೋರಿನೇಷನ್‌ನೊಂದಿಗೆ ಶುದ್ಧೀಕರಣಗೊಳಿಸಿದ ನೀರು ಪೂರೈಕೆಗೆ ಆದ್ಯತೆ ನೀಡಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ.ಕೆ.ವಿ. ತ್ರಿಲೋಕಚಂದ್ರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ (20 ಅಂಶ ಸೇರಿದಂತೆ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

*ನೀರಿನ ಮೂಲಗಳ ಪರಿಶೀಲನೆ ನಡೆಸಿ, ಓಹೆಚ್ ಟಿ ಸ್ವಚ್ಛಗೊಳಿಸಿ:*

ಬೇಸಿಗೆಯಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿಗೆ ವ್ಯತ್ಯವಾಗಬಾರದು. ಯಾವುದೇ ಕಾರಣಕ್ಕೂ ಕಲುಷಿತ ನೀರು ಪೂರೈಕೆಯಾಗಬಾರದು. ಇದರ ಬಗ್ಗೆ ಎಚ್ಚರ ವಹಿಸಬೇಕು. ನಿರಂತರವಾಗಿ ನೀರಿನ ಮೂಲಗಳನ್ನು ಪರಿಶೀಲನೆ ನಡೆಸುತ್ತಿರಬೇಕು. ನೀರಿನ ಸಂಗ್ರಹಾಗಾರಗಳನ್ನು ಶುಚಿಗೊಳಿಸುತ್ತಿರಬೇಕು. ನೀರಿನ ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಿದ ನಂತರವೇ ಸರಬರಾಜು ಮಾಡಬೇಕು ಮತ್ತು ಓವರ್ ಹೆಡ್ ಟ್ಯಾಂಕ್‌ಗಳ ಮುಚ್ಚಳ ಮುಚ್ಚಲಾಗುತ್ತಿದೆಯೇ ಎಂಬುದನ್ನು ಖಾತ್ರಿಪಡಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗಬಹುದಾದಂತಹ 82 ಹಳ್ಳಿಗಳನ್ನು ಗುರುತಿಸಿದ್ದು, ಈಗಾಗಲೇ ಕುಡಿಯುವ ನೀರು ಪೂರೈಕೆಗೆ ಟ್ಯಾಂಕರ್ ಗಳನ್ನು ಸಿದ್ಧತೆಯಲ್ಲಿಟ್ಟುಕೊಳ್ಳಲಾಗಿದೆ ಎಂದು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಇಂದುಧರ್ ಸಭೆಗೆ ತಿಳಿಸಿದರು.ಶುದ್ಧ ಕುಡಿಯುವ ನೀರು ಸೇವನೆ ಕುರಿತು ಸಾರ್ವಜನಿಕರಿಗೆ ಜನಸಂದಣಿ ಇರುವ ಸ್ಥಳ, ಜಾತ್ರಾ ಸಂದರ್ಭಗಳಲ್ಲಿ ಅರಿವು ಮೂಡಿಸುವ ಕಾರ್ಯ ಕೈಗೊಳ್ಳಬೇಕು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದ ಅವರು, ಗ್ರಾಮಗಳಲ್ಲಿ ತುರ್ತು ಆರೋಗ್ಯ ಸೇವೆಗಳಿಗಾಗಿ ಬರುವ ರೋಗಿಗಳನ್ನು ಪ್ರತಿ ಬಾರಿಯೂ ಜಿಲ್ಲಾ ಕೇಂದ್ರಗಳಿಗೆ ತೆರಳುವಂತೆ ಶಿಫಾರಸ್ಸು ಮಾಡುವುದು ಸಮಂಜಸವಲ್ಲ; ತಪಾಸಣೆ ಕೈಗೊಳ್ಳಬೇಕು. ಸಾರ್ವಜನಿಕರಿಗೆ ತಾವಿರುವಲ್ಲಿಯೇ ಆರೋಗ್ಯ ಸೇವೆ ನೀಡಬೇಕು. ಇದಕ್ಕೆ ಸಾಕಷ್ಟು ಮಾನವ ಸಂಪನ್ಮೂಲಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಗರ್ಭಿಣಿ ಮಹಿಳೆಯರಲ್ಲಿ ಅಧಿಕ ರಕ್ತದೊತ್ತಡ, ಅನೀಮಿಯಾ ತಡೆಗಟ್ಟಲು ಸೂಕ್ತ ಕಾರ್ಯಯೋಜನೆ ರೂಪಿಸಬೇಕು. ಗರ್ಭಿಣಿ ಮಹಿಳೆಯರಿಗೆ ಸೇವಿಸಲು ಆರೋಗ್ಯ ಇಲಾಖೆಯಿಂದ ನೀಡಲಾಗುವ ಕಬ್ಬಿಣಾಂಶ ಮಾತ್ರೆಗಳ ಸೇವನೆ ಕುರಿತು ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಮನೆ ಭೇಟಿ ನಡೆಸಿ ಖಚಿತಪಡಿಸಿಕೊಳ್ಳಬೇಕು. ಇದರಿಂದ ಸುಲಭ ಮತ್ತು ಸಾಮಾನ್ಯ ಹೆರಿಗೆಗೆ ಸಹಾಯಕವಾಗಲಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಕಳಪೆ ಗುಣಮಟ್ಟದ ಬಿತ್ತನೆ ಬೀಜ ವಿತರಣೆಯಾಗಿರುವ ಬಗ್ಗೆ ಹಾಗೂ ರೈತರ ಫಸಲಿನಲ್ಲಿ ಇಳುವರಿ ಬಾರದೇ ಇರುವ ಬಗ್ಗೆ ದೂರುಗಳು ಕೇಳಿಬರುತ್ತಿದೆ. ಈ ಕುರಿತು ಕೃಷಿ ಅಧಿಕಾರಿಗಳು ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಪೂರೈಕೆ ಮಾಡುತ್ತಿರುವ ಅನಧಿಕೃತ ರಸಗೊಬ್ಬರದ ಅಂಗಡಿಗಳ ಮೇಲೆ ದಾಳಿ ನಡೆಸಿ ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕು. ಈ ಕುರಿತು ರೈತರಿಗೆ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆಯಾಗಬಾರದು. ಈಗಾಗಲೇ ಇರುವ ಮೇವಿನ ಬ್ಯಾಂಕ್ ಗಳಲ್ಲಿ ಮೇವು ದಾಸ್ತಾನು ಇಟ್ಟುಕೊಳ್ಳಬೇಕು ಎಂದು ಸೂಚಿಸಿದ ಅವರು, ಪಶು ವೈದ್ಯಾಧಿಕಾರಿಗಳಿಂದ ಜಿಲ್ಲೆಯಲ್ಲಿ ಮೇವಿನ ಲಭ್ಯತೆ ಕುರಿತು ಮಾಹಿತಿ ಪಡೆದುಕೊಂಡರು.

ಸಂಡೂರು ತಾಲ್ಲೂಕು ವ್ಯಾಪ್ತಿಯಲ್ಲಿ ಕಳೆದ ವಾರ ಅಕಾಲಿಕ ಗಾಳಿ-ಮಳೆಯಿಂದಾಗಿ ಬಾಳೆ ಬೆಳೆಯು ನೆಲಕ್ಕುರುಳಿರುವ ಕುರಿತು ವರದಿಯಾಗಿದೆ. ಈ ಕುರಿತು ತೋಟಗಾರಿಕೆ ಅಧಿಕಾರಿಗಳಿಗೆ ಪ್ರಶ್ನಿಸಿದರು, ಈ ಕುರಿತು ನಿಯಮಾನುಸಾರ ಬೆಳೆ ಪರಿಹಾರ ಒದಗಿಸಲು ಕ್ರಮ ವಹಿಸುವಂತೆ ತಾಲ್ಲೂಕು ತಹಶೀಲ್ದಾರರಿಗೆ ನಿರ್ದೇಶನ ನೀಡಲಾಗಿದೆ ಎಂದು ತೋಟಗಾರಿಕೆ ಉಪನಿರ್ದೇಶಕರು ಸಭೆಗೆ ತಿಳಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**